Volume : 9 | Issue : 172 | September : 25 : 2026 : Friday
ಸಂಪುಟ : 9 | ಸಂಚಿಕೆ : 172 | ಸೆಪ್ಟಂಬರ್ : 25 : 2026 : ಶುಕ್ರವಾರ

www.VIKRAMAVAHINI.com

ಸತ್ಯದ ಹಾದಿ । ಜನಪರ ದನಿ । ರಾಷ್ಟ್ರೀಯ ದೃಷ್ಟಿ

# ವಿಕ್ರಮ ವಾಹಿನಿ

ಪುಟ 4 | ₹2 | ಕನ್ನಡ ದಿನಪತ್ರಿಕೆ

VIKRAMA VAHINI
PRGI NO: KARKAN/2018/7




ಮದುವೆಗಿಂತ ಸಂಗಾತಿಯೊಂದಿಗಿನ ಬಾಂಧವ್ಯಕ್ಕೆ ಆದ್ಯತೆ ನೀಡುವುದಾಗಿ ನಟಿ ಶ್ರುತಿ ಹಾಸನ್ ಹೇಳಿದ್ದಾರೆ. ತಾಯಿಯಾಗುವ ಆಸೆಯಿದ್ದು, ದತ್ತು ಪಡೆಯಲು ಮುಕ್ತವಾಗಿರುವುದಾಗಿ ತಿಳಿಸಿದ್ದಾರೆ.

27 ಭಾನುವಾರದಿಂದ ಅಕ್ಟೋಬರ್ 10 ಶನಿವಾರ ತನಕ ಪಿತೃಪಕ್ಷ ಪುಟ 2



'ಎಸ್ಐಆರ್ ಮೂಲಕ 13 ಕೋಟಿ ಮತದಾರರ ಹೆಸರು ಅಳಿಸಲಾಗಿದೆ' ಪುಟ 4

# ಸೂಪರ್ ಎಲ್ ನಿನೊ: ಭಾರೀ ಸಾವಿನ ಭೀತಿ!

## ■ ಭಾರತದ ಮೇಲೆ ತೀವ್ರ ಪರಿಣಾಮ: 1ರಿಂದ 2 ಡಿಗ್ರಿ ಸೆಲ್ಸಿಯಸ್ ಉಷ್ಣಾಂಶ ಏರಿಕೆ? ■

● ವಿಕ್ರಮ ವಾಹಿನಿ । ನವದೆಹಲಿ

ಪ್ರಬಲ 'ಸೂಪರ್ ಎಲ್ ನಿನೊ'ದಿಂದ ಜಾಗತಿಕ ತಾಪಮಾನ ಮತ್ತಷ್ಟು ಏರಿಕೆಯಾಗುವ ಸಾಧ್ಯತೆಯಿದ್ದು, ಜೂನ್ 2026ರಿಂದ ಫೆಬ್ರವರಿ 2027ರವರೆಗೆ ಸಾಮಾನ್ಯ ವರ್ಷಕ್ಕೆ ಹೋಲಿಸಿದರೆ ವಿಶ್ವಾದ್ಯಂತ ಸುಮಾರು 4.51 ಲಕ್ಷ ಹೆಚ್ಚುವರಿ ಶಾಖ ಸಂಬಂಧಿತ ಸಾವುಗಳು ಸಂಭವಿಸುವ ಸಾಧ್ಯತೆಯಿದೆ ಎಂದು ಯೂನಿವರ್ಸಿಟಿ ಆಫ್ ಚಿಕಾಗೋದ ಕ್ಲೈಮೇಟ್ ಇಂಪ್ಯಾಕ್ಟ್ ಲ್ಯಾಬ್ ವರದಿ ಎಚ್ಚರಿಸಿದೆ.



ವರದಿ ಪ್ರಕಾರ, ಜಾಗತಿಕ ಭೂಭಾಗದ ತಾಪಮಾನವು ಸಾಮಾನ್ಯಕ್ಕಿಂತ ಸುಮಾರು 1.2 ಡಿಗ್ರಿ ಸೆಲ್ಸಿಯಸ್ ಹೆಚ್ಚಾಗಬಹುದು. ಇದರಿಂದ ಅತಿ ಉಷ್ಣ ದಿನಗಳ ಸಂಖ್ಯೆ ಸಾಮಾನ್ಯಕ್ಕಿಂತ 44ರಷ್ಟು ಹೆಚ್ಚಾಗುವ ಸಾಧ್ಯತೆಯಿದೆ. ಸೆಪ್ಟೆಂಬರ್ 2026ರಿಂದ ಫೆಬ್ರವರಿ 2027ರವರೆಗೆ ಮಾತ್ರ ವಿಶ್ವದಲ್ಲಿ ಸುಮಾರು 2.39 ಲಕ್ಷ ಹೆಚ್ಚುವರಿ ಶಾಖ ಸಾವುಗಳು ಸಂಭವಿಸಬಹುದು ಎಂದು ಅಂದಾಜಿಸಲಾಗಿದೆ.

**ಭಾರತಕ್ಕೂ ತೀವ್ರ ಪರಿಣಾಮ:** ಭಾರತದಲ್ಲಿ ಸೆಪ್ಟೆಂಬರ್‌ನಿಂದ ಫೆಬ್ರವರಿವರೆಗೆ ಸುಮಾರು 15,800 ಹೆಚ್ಚುವರಿ ಶಾಖ ಸಂಬಂಧಿತ ಸಾವುಗಳು ಸಂಭವಿಸುವ ಸಾಧ್ಯತೆಯಿದೆ ಎಂದು ವರದಿ ತಿಳಿಸಿದೆ. ಈ ಅಂದಾಜಿನಲ್ಲಿ ಸುಮಾರು 1,600ರಷ್ಟು ಏರಿಳಿತದ ಸಾಧ್ಯತೆಯನ್ನೂ ಅಧ್ಯಯನ ಗುರುತಿಸಿದೆ. ಭಾರತದಲ್ಲಿ ಡಿಸೆಂಬರ್‌ನಿಂದ ಫೆಬ್ರವರಿವರೆಗೆ ಈ ಸಾವುಗಳ ಪೈಕಿ ಗಮನಾರ್ಹ ಪ್ರಮಾಣ ಸಂಭವಿಸುವ ಸಾಧ್ಯತೆಯಿದ್ದು, ಬೇಸಿಗೆಯಲ್ಲೂ ಪರಿಣಾಮ ಮುಂದುವರಿಯಬಹುದು ಎಂದು ವರದಿ ಹೇಳಿದೆ.

**ಜಾಗತಿಕ ದಕ್ಷಿಣಕ್ಕೆ ಹೆಚ್ಚು ಹೊಡೆತ:** ಅಭಿವೃದ್ಧಿಶೀಲ ರಾಷ್ಟ್ರಗಳನ್ನು ಒಳಗೊಂಡ 'ಗ್ಲೋಬಲ್ ಸೌತ್' ಪ್ರದೇಶಗಳ ಮೇಲೆ ಪರಿಣಾಮ ಹೆಚ್ಚು ಬೀರುವ ಸಾಧ್ಯತೆಯಿದೆ. ಆಫ್ರಿಕಾದ ಸಹೇಲ್ ಪ್ರದೇಶದಲ್ಲಿ ಸೆಪ್ಟೆಂಬರ್–ಫೆಬ್ರವರಿ ಅವಧಿಯಲ್ಲಿ ಸುಮಾರು 66,800 ಹೆಚ್ಚುವರಿ ಸಾವುಗಳ ಅಂದಾಜಿದ್ದು, ನೈಜೀರಿಯಾದಲ್ಲೇ ಸುಮಾರು 31,400 ಸಾವುಗಳ ಸಾಧ್ಯತೆಯನ್ನು ವರದಿ ಗುರುತಿಸಿದೆ. ಇಂಡೋನೇಷ್ಯಾದಲ್ಲಿ ಸುಮಾರು 19,300 ಹಾಗೂ ಬ್ರೆಜಿಲ್‌ನಲ್ಲಿ 13,300 ಹೆಚ್ಚುವರಿ ಸಾವುಗಳ ಅಂದಾಜಿದೆ.

**ಮುನ್ನೆಚ್ಚರಿಕೆಗೆ ಒತ್ತು:** ಶಾಖದ ಮುನ್ನೆಚ್ಚರಿಕೆ ವ್ಯವಸ್ಥೆ, ತಂಪು ಕೇಂದ್ರಗಳು, ಕುಡಿಯುವ ನೀರಿನ ವ್ಯವಸ್ಥೆ, ದುರ್ಬಲ ವರ್ಗಗಳಿಗೆ ಆರೋಗ್ಯ ನೆರವು, ಹೊರಾಂಗಣ ಕಾರ್ಮಿಕರಿಗೆ ರಕ್ಷಣೆ ಹಾಗೂ ಆರೋಗ್ಯ ವ್ಯವಸ್ಥೆಯ ಸಾಮರ್ಥ್ಯ ಹೆಚ್ಚಿಸುವ ಮೂಲಕ ಸಾವಿರಾರು ಜೀವಗಳನ್ನು ಉಳಿಸಬಹುದು ಎಂದು ಕ್ಲೈಮೇಟ್ ಇಂಪ್ಯಾಕ್ಟ್ ಲ್ಯಾಬ್ ತಿಳಿಸಿದೆ.

ತಕ್ಷಣದ ಕ್ರಮಗಳು ಹಾಗೂ ದೀರ್ಘಕಾಲೀನ ಹವಾಮಾನ ಹೊಂದಾಣಿಕೆ ಕ್ರಮಗಳಿಗೆ ಹೂಡಿಕೆ ಅಗತ್ಯ ಎಂದು ವರದಿ ಒತ್ತಿಹೇಳಿದೆ.

## ■ ಸುದ್ದಿ ಚುಟುಕು

### ಚುನಾವಣೆ ವೇಳೆ ಆಸ್ತಿ ಮುಚ್ಚಿಟ್ಟ ಪ್ರಕರಣ: ಹೈಕೋರ್ಟ್ ನೋಟೀಸ್

● ವಿಕ್ರಮ ವಾಹಿನಿ । ಬೆಂಗಳೂರು

ಕಳೆದ ವಿಧಾನಸಭಾ ಚುನಾವಣೆಯ ಸಂದರ್ಭದಲ್ಲಿ ಚುನಾವಣಾ ಆಯೋಗಕ್ಕೆ ಸಲ್ಲಿಸಿದ್ದ ಪ್ರಮಾಣಪತ್ರದಲ್ಲಿ ಆಸ್ತಿ ಮತ್ತು ಆರ್ಥಿಕ ಹೊಣೆಗಾರಿಕೆಗೆ ಸಂಬಂಧಿಸಿದ ಮಾಹಿತಿಗಳನ್ನು ಮರೆಮಾಚಿ ಸುಳ್ಳು ವಿವರಗಳನ್ನು ನೀಡಿದ ಆರೋಪಿಸಿ ಶ್ರೀರಂಗಪಟ್ಟಣ ಕ್ಷೇತ್ರದ ಕಾಂಗ್ರೆಸ್ ಶಾಸಕ ಎ ಬಿ ರಮೇಶ್ ಬಂಡಿಸಿದ್ದೇಗೌಡ ವಿರುದ್ಧ ಕರ್ನಾಟಕ ಹೈಕೋರ್ಟ್‌ಗೆ ಅರ್ಜಿ ಸಲ್ಲಿಸಲಾಗಿದೆ. ಮೈಸೂರು ನಿವಾಸಿ ಹಾಗೂ ಸ್ಥಳೀಯ ಮತದಾರ ಎಂ ಡಿ ಆದಿಶ್ ಸಾಗರ್ ಸಲ್ಲಿಸಿರುವ ಅರ್ಜಿಯನ್ನು ನ್ಯಾಯಮೂರ್ತಿ ಅನಂತ್ ರಾಮನಾಥ್ ಹೆಗಡೆ ಅವ ಏಕಸದಸ್ಯ ಪೀಠ ವಿಚಾರಣೆ ನಡೆಸಿತು.

ಕೆಲ ಕಾಲ ಅರ್ಜಿ ಆಲಿಸಿದ ಪೀಠವು ಶಾಸಕ ರಮೇಶ್ ಬಂಡಿಸಿದ್ದೇಗೌಡ, ಭಾರತ ಚುನಾವಣಾ ಆಯೋಗ, ರಾಜ್ಯ ಮುಖ್ಯ ಚುನಾವಣಾಧಿಕಾರಿಗೆ ತುರ್ತು ನೋಟಿಸ್ ಜಾರಿಗೊಳಿಸಿ ವಿಚಾರಣೆಯನ್ನು ಅಕ್ಟೋಬರ್ 15ಕ್ಕೆ ಮುಂದೂಡಿತು. ಅರ್ಜಿದಾರರ ಪರ ವಕೀಲ ಎಸ್ ಉಮಾಪತಿ ವಾದಿಸಿದರು.

ಚುನಾವಣೆಗೆ ಸ್ಪರ್ಧಿಸುವವರ ಆಸ್ತಿ ಮತ್ತು ಹೊಣೆಗಾರಿಕೆಯ ಮಾಹಿತಿ ಪಡೆದುಕೊಳ್ಳುವುದು, ಅದರಲ್ಲಿ ತಪ್ಪು ಕಂಡು ಬಂದಲ್ಲಿ ಸೂಕ್ತ ವೇದಿಕೆಯಲ್ಲಿ ಅದನ್ನು ಪ್ರಶ್ನಿಸುವುದಕ್ಕೆ ಪ್ರತಿಯೊಬ್ಬ ಮತದಾರನ ಹಕ್ಕು ಎಂದು ಸುಪ್ರಿಂ ಕೋರ್ಟ್, ಆಂಧ್ರಪ್ರದೇಶ ಹೈಕೋರ್ಟ್ ತೀರ್ಪು ಹಾಗೂ ಚುನಾವಣಾ ಆಯೋಗದ ಮಾರ್ಗಸೂಚಿಗಳು ಹೇಳುತ್ತವೆ. ಆದರೆ, ಈ ಬಗ್ಗೆ ಅರ್ಜಿದಾರರು ಚುನಾವಣಾ ಆಯೋಗಕ್ಕೆ ದೂರು ಕೊಟ್ಟರು, ಜನಪ್ರತಿನಿಧಿಗಳ ನ್ಯಾಯಾಲಯದಲ್ಲಿ ಖಾಸಗಿ ದೂರು ದಾಖಲಿಸಿದರೂ ಕ್ರಮ ಆಗಿಲ್ಲ. ಆದ್ದರಿಂದ ಹೈಕೋರ್ಟ್ ಗೆ ಅರ್ಜಿ ಸಲ್ಲಿಸಲಾಗಿದೆ ಎಂದು ವಕೀಲರು ಪೀಠಕ್ಕೆ ತಿಳಿಸಿದರು.

### ನಂದಿನಿ ಹಾಲಿನ ದರ ರೂ 2 ಏರಿಕೆ ಸಾಧ್ಯತೆ

● ವಿಕ್ರಮ ವಾಹಿನಿ । ಬೆಂಗಳೂರು

ಪಶು ಆಹಾರ ಸೇರಿದಂತೆ ಹೈನುಗಾರಿಕೆ ವೆಚ್ಚ ಹೆಚ್ಚಳದ ಹಿನ್ನೆಲೆಯಲ್ಲಿ ನಂದಿನಿ ಹಾಲು ಹಾಗೂ ಇತರ ಉತ್ಪನ್ನಗಳ ದರವನ್ನು ಪ್ರತಿ ಲೀಟರ್‌ಗೆ ರೂ 2ರಷ್ಟು ಹೆಚ್ಚಿಸಲು ರಾಜ್ಯ ಸರ್ಕಾರ ಚಿಂತನೆ ನಡೆಸಿದೆ ಎಂದು ಮೂಲಗಳು ತಿಳಿಸಿವೆ.

ಹಾಲು ಒಕ್ಕೂಟಗಳು ರೂ 8ರಿಂದ ರೂ 10ರಷ್ಟು ದರ ಏರಿಕೆಗೆ ಒತ್ತಾಯಿಸಿದ್ದು, ಈ ಕುರಿತು ನಾಳೆ ನಡೆಯಲಿರುವ ಕೆಎಂಎಫ್ ಆಡಳಿತ ಮಂಡಳಿ ಸಭೆಯಲ್ಲಿ ಚರ್ಚೆಯಾಗುವ ಸಾಧ್ಯತೆಯಿದೆ. ಸದ್ಯ ಹಾಲು ಉತ್ಪಾದಕರಿಗೆ ಪ್ರತಿ ಲೀಟರ್‌ಗೆ ರೂ 35 ನೀಡಲಾಗುತ್ತಿದ್ದು, ದರ ಹೆಚ್ಚಳದ ಜತೆಗೆ ಸರ್ಕಾರದ ಪ್ರೋತ್ಸಾಹಧನವನ್ನು ರೂ 5ರಿಂದ ರೂ 8ಕ್ಕೆ ಹೆಚ್ಚಿಸುವಂತೆಯೂ ಬೇಡಿಕೆ ಇದೆ. ಗ್ರಾಹಕರ ಮೇಲಿನ ಹೊರೆಯನ್ನು ಗಮನದಲ್ಲಿಟ್ಟುಕೊಂಡು ರೂ 10ರ ಬದಲಿಗೆ ರೂ 2ರಷ್ಟು ದರ ಹೆಚ್ಚಳಕ್ಕೆ ಸರ್ಕಾರ ಒಲವು ತೋರಿದೆ ಎನ್ನಲಾಗಿದೆ.

ಹಾಲು ಒಕ್ಕೂಟಗಳಿಗೆ ಪ್ರತಿದಿನ ಸುಮಾರು 1.11 ಕೋಟಿ ಲೀಟರ್ ಹಾಲು ಸಂಗ್ರಹವಾಗುತ್ತಿದ್ದು, ಪಶು ಆಹಾರದ ಬೆಲೆ ಏರಿಕೆಯಿಂದ ಉತ್ಪಾದನಾ ವೆಚ್ಚ ಹೆಚ್ಚಾಗಿದೆ. ಪ್ರತಿ ಚೀಲ ಪಶು ಆಹಾರದ ಬೆಲೆ ರೂ 720ರಿಂದ ರೂ 1,250ಕ್ಕೆ ಏರಿಕೆಯಾಗಿರುವುದು ಹಾಲು ಉತ್ಪಾದಕರ ಮೇಲಿನ ಹೊರೆಯನ್ನು ಹೆಚ್ಚಿಸಿದೆ.


# 'ಮತ ಕಳ್ಳತನ' ವಿರುದ್ಧ ಕಾಂಗ್ರೆಸ್ ಸಮರ

**ಸೆ.25ರಂದು ರಾಜ್ಯ ಚುನಾವಣಾ ಕಚೇರಿಗಳ ಮುಂದೆ ಹಾಗೂ ಸೆ.28ರಂದು ಜಿಲ್ಲಾಧಿಕಾರಿ ಕಚೇರಿಗಳ ಮುಂದೆ ಪ್ರತಿಭಟನೆ ನಡೆಸಲು ಕಾಂಗ್ರೆಸ್ ಸಿದ್ಧತೆ ನಡೆಸಿದ್ದು, ಸೆ.29ರ ಸಿಡಬ್ಲ್ಯುಸಿ ಸಭೆಯಲ್ಲಿ ಮುಂದಿನ ಹೋರಾಟದ ರೂಪುರೇಷೆ ಚರ್ಚಿಸುವ ಸಾಧ್ಯತೆಯಿದೆ. ಎಸ್ಐಆರ್ ಕುರಿತು ಪಾರದರ್ಶಕತೆ ಹಾಗೂ ಚುನಾವಣಾ ಆಯೋಗದ ಕಾರ್ಯವೈಖರಿ ಬಗ್ಗೆ ಪಕ್ಷದ ನಾಯಕರು ಪ್ರಶ್ನೆ ಎತ್ತಿದ್ದಾರೆ.**

● ವಿಕ್ರಮ ವಾಹಿನಿ । ನವದೆಹಲಿ

ಮತದಾರರ ಪಟ್ಟಿ ವಿಶೇಷ ತೀವ್ರ ಪರಿಷ್ಕರಣೆ (ಎಸ್ಐಆರ್) ಹಾಗೂ 'ಮತ ಕಳ್ಳತನ'ದ ಆರೋಪಗಳನ್ನು ಮುಂದಿಟ್ಟುಕೊಂಡು ದೇಶಾದ್ಯಂತ ಹೋರಾಟ ನಡೆಸಲು ಕಾಂಗ್ರೆಸ್ ಸಜ್ಜಾಗಿದೆ. ಈ ಸಂಬಂಧ ಪಕ್ಷದ ರಾಜ್ಯ ಘಟಕಗಳು ಸೆ.25ರಂದು ರಾಜ್ಯ ಚುನಾವಣಾ ಆಯೋಗದ ಕಚೇರಿಗಳ ಮುಂದೆ ಪ್ರತಿಭಟನೆ ನಡೆಸಲಿದ್ದು, ಸೆ.28ರಂದು ಜಿಲ್ಲಾ ಕಾಂಗ್ರೆಸ್ ಸಮಿತಿಗಳು ಜಿಲ್ಲಾಧಿಕಾರಿ ಕಚೇರಿಗಳಿಗೆ ಪ್ರತಿಭಟನಾ ಮೆರವಣಿಗೆ ನಡೆಸಲಿವೆ. ಸೆ.29ರಂದು ಕಾಂಗ್ರೆಸ್ ಕಾರ್ಯಕಾರಿ ಸಮಿತಿ (ಸಿಡಬ್ಲ್ಯುಸಿ) ಸಭೆ ನಡೆಯಲಿದ್ದು, ಮುಂದಿನ ಹೋರಾಟದ ರೂಪುರೇಷೆ ಕುರಿತು ಚರ್ಚಿಸುವ ಸಾಧ್ಯತೆಯಿದೆ.

ಕಾಂಗ್ರೆಸ್ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ, ಲೋಕಸಭೆ ವಿರೋಧ ಪಕ್ಷದ ನಾಯಕ ರಾಹುಲ್ ಗಾಂಧಿ ಹಾಗೂ ಸಂಘಟನಾ ಉಸ್ತುವಾರಿ ಪ್ರಧಾನ ಕಾರ್ಯದರ್ಶಿ ಕೆ.ಸಿ. ವೇಣುಗೋಪಾಲ್ ನೇತೃತ್ವದಲ್ಲಿ ಈ ಹೋರಾಟಕ್ಕೆ ಸಿದ್ಧತೆ ನಡೆದಿದೆ ಎಂದು ಪಕ್ಷದ ಮೂಲಗಳು ತಿಳಿಸಿವೆ. ಎಸ್ಐಆರ್ ವೇಳೆ ಮತದಾರರ ಹೆಸರುಗಳನ್ನು ದೊಡ್ಡ ಪ್ರಮಾಣದಲ್ಲಿ ಕೈಬಿಡಲಾಗುತ್ತಿದೆ ಎಂಬುದು ಕಾಂಗ್ರೆಸ್‌ನ ಪ್ರಮುಖ ಆರೋಪವಾಗಿದೆ.



**ಸಿಇಸಿ ವಿರುದ್ಧ ಕ್ರಮಕ್ಕೆ ಆಗ್ರಹ:** ಮುಖ್ಯ ಚುನಾವಣಾ ಆಯುಕ್ತ ಜ್ಞಾನೇಶ್ ಕುಮಾರ್ ಅವರನ್ನು ಹುದ್ದೆಯಿಂದ ತೆಗೆದುಹಾಕಬೇಕು, ಅವರ ಅವಧಿಯಲ್ಲಿ ಕೈಗೊಂಡ ನಿರ್ಧಾರಗಳು ಮತ್ತು ಮತದಾರರ ಪಟ್ಟಿಯಲ್ಲಿನ ಬದಲಾವಣೆಗಳ ಕುರಿತು ಸ್ವತಂತ್ರ ಪರಿಶೀಲನೆ ನಡೆಸಬೇಕು ಎಂದು ಕಾಂಗ್ರೆಸ್ ಆಗ್ರಹಿಸಿದೆ. ಸೆ.25ರ ಪ್ರತಿಭಟನೆಯಲ್ಲಿ ಈ ಬೇಡಿಕೆಗಳನ್ನು ಪ್ರಮುಖವಾಗಿ ಮುಂದಿಡಲು ಪಕ್ಷ ಸೂಚಿಸಿದೆ.

ಎಸ್ಐಆರ್ ಪ್ರಕ್ರಿಯೆಗೆ ಸಂಬಂಧಿಸಿದಂತೆ ಚುನಾವಣಾ ಆಯೋಗದೊಳಗೆ ಭಿನ್ನಾಭಿಪ್ರಾಯಗಳಿವೆ ಎಂಬ ಮಾಧ್ಯಮ ವರದಿಗಳನ್ನೂ ಕಾಂಗ್ರೆಸ್ ತನ್ನ ಆರೋಪಗಳಿಗೆ ಆಧಾರವಾಗಿ ಉಲ್ಲೇಖಿಸಿದೆ. ಆದರೆ ಚುನಾವಣಾ ಆಯೋಗದ ಅಧಿಕಾರಿಗಳ ಪ್ರಕಾರ ಎಸ್ಐಆರ್‌ಗೆ ಸಂಬಂಧಿಸಿದ ನಿರ್ಧಾರಗಳನ್ನು ಆಯೋಗವು ಒಮ್ಮತದಿಂದ ಕೈಗೊಂಡಿದೆ.

**'13 ಕೋಟಿ ಹೆಸರು ಕೈಬಿಡಲಾಗಿದೆ' ಎಂಬ ಆರೋಪ:** ಎಸ್ಐಆರ್ ಪ್ರಕ್ರಿಯೆಯಲ್ಲಿ ದೇಶಾದ್ಯಂತ ಸುಮಾರು 13 ಕೋಟಿ ಮತದಾರರ ಹೆಸರುಗಳನ್ನು ಕೈಬಿಡಲಾಗಿದೆ ಎಂದು ಕಾಂಗ್ರೆಸ್ ನಾಯಕರು ಆರೋಪಿಸಿದ್ದಾರೆ. ಈ ಸಂಖ್ಯೆಯನ್ನು ಕಾಂಗ್ರೆಸ್ ತನ್ನ ರಾಜಕೀಯ ಆರೋಪದ ಭಾಗವಾಗಿ ಮುಂದಿಟ್ಟಿದ್ದು, ಅಂತಹ ಹೆಸರು ಕೈಬಿಡುವಿಕೆಗಳ ಸ್ವರೂಪ ಮತ್ತು ಅಂತಿಮ ಮತದಾರರ ಪಟ್ಟಿಯಲ್ಲಿನ ಪರಿಣಾಮವನ್ನು ಪ್ರತ್ಯೇಕವಾಗಿ ಪರಿಶೀಲಿಸಬೇಕಿದೆ. ಇತ್ತೀಚಿನ ವರದಿಗಳಲ್ಲೂ ಎಸ್ಐಆರ್ ವೇಳೆ ದೊಡ್ಡ ಪ್ರಮಾಣದ ಹೆಸರುಗಳ ಅಳಿಕೆ ಮತ್ತು ಸೇರ್ಪಡೆ ಕುರಿತು ವಿವಾದ ಮುಂದುವರಿದಿದೆ.

ಕಾಂಗ್ರೆಸ್‌ನ ಹೋರಾಟಕ್ಕೆ ಇಂಡಿಯಾ ಮೈತ್ರಿಕೂಟದ ಪಕ್ಷಗಳನ್ನೂ ಒಗ್ಗೂಡಿಸುವ ಪ್ರಯತ್ನ ನಡೆಯಲಿದೆ ಎಂದು ಪಕ್ಷದ ಮೂಲಗಳು ತಿಳಿಸಿವೆ. ಮುಕ್ತ, ನ್ಯಾಯಸಮ್ಮತ ಮತ್ತು ಪಾರದರ್ಶಕ ಚುನಾವಣೆಗಾಗಿ ಎಸ್ಐಆರ್ ಪ್ರಕ್ರಿಯೆಯಲ್ಲಿ ಹೆಚ್ಚಿನ ಪಾರದರ್ಶಕತೆ ಅಗತ್ಯ ಎಂದು ಕಾಂಗ್ರೆಸ್ ನಾಯಕರು ಒತ್ತಾಯಿಸಿದ್ದಾರೆ.

## ಬರಪೀಡಿತ ರೈತರಿಗೆ ರೂ 2,500 ನೆರವು

● ವಿಕ್ರಮ ವಾಹಿನಿ । ಬೆಂಗಳೂರು

ರಾಜ್ಯದಲ್ಲಿ ಬರ ಪರಿಸ್ಥಿತಿ ತೀವ್ರಗೊಳ್ಳುತ್ತಿರುವ ಹಿನ್ನೆಲೆಯಲ್ಲಿ ರೈತರಿಗೆ ತಾತ್ಕಾಲಿಕ ಆರ್ಥಿಕ ನೆರವು ನೀಡಲು ರಾಜ್ಯ ಸರ್ಕಾರ ಮುಂದಾಗಿದೆ. ಮೊದಲ ಹಂತದಲ್ಲಿ ಸುಮಾರು 40 ಲಕ್ಷ ರೈತರ ಬ್ಯಾಂಕ್ ಖಾತೆಗಳಿಗೆ ತಲಾ ರೂ 2,500 ನೇರವಾಗಿ ಜಮೆ ಮಾಡಲು ಸರ್ಕಾರ ನಿರ್ಧರಿಸಿದೆ.

ಕೇಂದ್ರದಿಂದ ಬರ ಪರಿಹಾರದ ಹಣ ಬಿಡುಗಡೆಯಾಗುವುದನ್ನು ಕಾಯದೆ, ರಾಜ್ಯದ ಸ್ವಂತ ಸಂಪನ್ಮೂಲದಿಂದಲೇ ರೈತರಿಗೆ ನೆರವು ನೀಡಲು ಸರ್ಕಾರ ಮುಂದಾಗಿದೆ. ರೈತರ ಖಾತೆಗೆ ರೂ 2,500 ಜಮೆ ಮಾಡುವುದಾಗಿ ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಘೋಷಿಸಿದ್ದಾರೆ.

ಬರದಿಂದ ಸಂಕಷ್ಟಕ್ಕೆ ಸಿಲುಕಿರುವ ರೈತರಿಗೆ ತಕ್ಷಣದ ನೆರವು ನೀಡುವ ಉದ್ದೇಶದಿಂದ ಈ ಕ್ರಮ ಕೈಗೊಳ್ಳಲಾಗುತ್ತಿದೆ. ಕೇಂದ್ರದಿಂದ ಬರ ಪರಿಹಾರದ ಅನುದಾನ ಬಿಡುಗಡೆಯಾದ ಬಳಿಕ ನಿಯಮಾನುಸಾರ ಹೆಚ್ಚುವರಿ ನೆರವು ನೀಡುವ ಸಾಧ್ಯತೆಯ ಬಗ್ಗೆಯೂ ಸರ್ಕಾರ ಚರ್ಚೆ ನಡೆಸಿದೆ ಎಂದು ಮೂಲಗಳು ತಿಳಿಸಿವೆ. ಈ ಪ್ರಸ್ತಾವನೆಗೆ ಮುಂದಿನ ಸಚಿವ ಸಂಪುಟ ಸಭೆಯಲ್ಲಿ ಅನುಮೋದನೆ ಪಡೆಯಲು ಸರ್ಕಾರ ಉದ್ದೇಶಿಸಿದ್ದು, ಸಂಪುಟದ ಒಪ್ಪಿಗೆ ಬಳಿಕ ಫಲಾನುಭವಿಗಳ ಸಂಖ್ಯೆ, ಒಟ್ಟು ಆರ್ಥಿಕ ಹೊರೆ ಹಾಗೂ ಹಣ ವರ್ಗಾವಣೆ ಪ್ರಕ್ರಿಯೆಯ ಕುರಿತು ಅಧಿಕೃತ ಮಾಹಿತಿ ಹೊರಬೀಳುವ ಸಾಧ್ಯತೆ ಇದೆ.

## ಮೂರ್ನಾಲ್ಕು ದಿನಗಳಲ್ಲಿ ನಿಗಮ ಮಂಡಳಿ ನೇಮಕ?

● ವಿಕ್ರಮ ವಾಹಿನಿ । ಬೆಂಗಳೂರು

ದಸರಾ ಹಬ್ಬಕ್ಕೂ ಮುನ್ನ ರಾಜ್ಯದ ವಿವಿಧ ನಿಗಮ–ಮಂಡಳಿಗಳಿಗೆ ಬಾಕಿ ಇರುವ ನೇಮಕಾತಿ ಪ್ರಕ್ರಿಯೆ ಪೂರ್ಣಗೊಳಿಸಲು ಕಾಂಗ್ರೆಸ್ ಸಿದ್ಧತೆ ನಡೆಸಿದೆ. ಮುಂದಿನ ಎರಡು–ಮೂರು ದಿನಗಳಲ್ಲಿ ಎಐಸಿಸಿ ಪ್ರಧಾನ ಕಾರ್ಯದರ್ಶಿ ರಣದೀಪ್ ಸಿಂಗ್ ಸುರ್ಜೇವಾಲಾ ಬೆಂಗಳೂರಿಗೆ ಆಗಮಿಸುವ ನಿರೀಕ್ಷೆಯಿದ್ದು, 85–90 ನಿಗಮ–ಮಂಡಳಿಗಳ ಸುಮಾರು 5,000–6,000 ಹುದ್ದೆಗಳ ನೇಮಕಾತಿ ಅಂತಿಮಗೊಳಿಸುವ ಸಾಧ್ಯತೆ ಇದೆ.

ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್, ಉಪಮುಖ್ಯಮಂತ್ರಿ ಜಿ. ಪರಮೇಶ್ವರ್, ಕೆಪಿಸಿಸಿ ಅಧ್ಯಕ್ಷ ಬಿ.ಕೆ. ಹರಿಪ್ರಸಾದ್ ಹಾಗೂ ಸುರ್ಜೇವಾಲಾ ಸಭೆ ನಡೆಸಿ ಅಂತಿಮ ಪಟ್ಟಿಯನ್ನು ನಿರ್ಧರಿಸುವ ಸಾಧ್ಯತೆಯಿದೆ. ಹುದ್ದೆಗಳ ಹಂಚಿಕೆಯಲ್ಲಿ ಶೇ.30ರಷ್ಟು ಶಾಸಕರು, ವಿಧಾನ ಪರಿಷತ್ ಸದಸ್ಯರಿಗೆ ಹಾಗೂ ಉಳಿದ ಹುದ್ದೆಗಳನ್ನು ಪಕ್ಷದ ಕಾರ್ಯಕರ್ತರಿಗೆ ನೀಡುವ '3:7' ಸೂತ್ರ ಅನುಸರಿಸುವ ಸಾಧ್ಯತೆ ಇದೆ ಎಂದು ಮೂಲಗಳು ತಿಳಿಸಿವೆ.

ವಿಧಾನ ಪರಿಷತ್ ಸದಸ್ಯರ ನಾಮನಿರ್ದೇಶನವನ್ನೂ ಇದೇ ವೇಳೆ ಕೈಗೆತ್ತಿಕೊಳ್ಳುವ ಸಾಧ್ಯತೆ ಬಗ್ಗೆ ಚರ್ಚೆ ನಡೆದಿದ್ದರೂ, ಈ ವಿಚಾರಕ್ಕೆ ಇನ್ನಷ್ಟು ದಿನ ಕಾಯಬೇಕಾಗಬಹುದು ಎಂದು ವರದಿಯಾಗಿದೆ.

ನೇಮಕಾತಿಗಾಗಿ ಹಲವು ಕಾಂಗ್ರೆಸ್ ನಾಯಕರು ಮತ್ತು ಕಾರ್ಯಕರ್ತರು ಪ್ರಮುಖ ನಿಗಮ–ಮಂಡಳಿಗಳ ಹುದ್ದೆಗಳಿಗೆ ತೀವ್ರ ಪೈಪೋಟಿ ನಡೆಸುತ್ತಿದ್ದಾರೆ. ಕರ್ನಾಟಕ ರಾಜ್ಯ ಮಾಲಿನ್ಯ ನಿಯಂತ್ರಣ ಮಂಡಳಿ, ಕರ್ನಾಟಕ ವಸತಿ ಮಂಡಳಿ, ಜಂಗಲ್ ಲಾಡ್ಜಸ್ ಅಂಡ್ ರೆಸಾರ್ಟ್ಸ್, ಸಣ್ಣ ಕೈಗಾರಿಕೆಗಳ ಅಭಿವೃದ್ಧಿ ನಿಗಮ ಸೇರಿದಂತೆ ಹಲವು ಸಂಸ್ಥೆಗಳ ಹುದ್ದೆಗಳಿಗೆ ಹೆಚ್ಚಿನ ಬೇಡಿಕೆ ಇದೆ.

2028ರ ವಿಧಾನಸಭಾ ಚುನಾವಣೆಗೆ ಮುನ್ನ ನಡೆಯುವ ಅಂತಿಮ ಸುತ್ತಿನ ನೇಮಕಾತಿ ಇದಾಗುವ ಸಾಧ್ಯತೆಯಿರುವುದರಿಂದ, ಹುದ್ದೆಗಳ ಹಂಚಿಕೆಗೆ ಸಂಬಂಧಿಸಿದಂತೆ ಪಕ್ಷದೊಳಗೆ ಚರ್ಚೆಗಳು ಚುರುಕುಗೊಂಡಿವೆ. ಬಾಕಿ ಉಳಿದಿರುವ ನೇಮಕಾತಿಗಳನ್ನು ಶೀಘ್ರ ಪೂರ್ಣಗೊಳಿಸುವಂತೆ ಶಾಸಕರು ಹಾಗೂ ಕಾರ್ಯಕರ್ತರು ಪಕ್ಷದ ನಾಯಕರ ಮೇಲೆ ಒತ್ತಡ ಹೇರಿದ್ದಾರೆ ಎಂದು ಮೂಲಗಳು ತಿಳಿಸಿವೆ.

## ಎಐ ಮಾನವನ ನಿಯಂತ್ರಣದಲ್ಲಿರಲಿ: ಚೀನಾ

● ವಿಕ್ರಮ ವಾಹಿನಿ । ವಾಷಿಂಗ್ಟನ್

ಅಮೆರಿಕ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಹಾಗೂ ಚೀನಾ ಅಧ್ಯಕ್ಷ ಕ್ಸಿ ಜಿನ್‌ಪಿಂಗ್ ನಡುವೆ ಗುರುವಾರ ಶ್ವೇತಭವನದಲ್ಲಿ ಮಹತ್ವದ ಮಾತುಕತೆ ನಡೆಯಿತು. ಎಐ, ವ್ಯಾಪಾರ, ತೈವಾನ್, ಇರಾನ್, ಭದ್ರತೆ ಹಾಗೂ ತಂತ್ರಜ್ಞಾನ ಸೇರಿದಂತೆ ಹಲವು ವಿಷಯಗಳ ಕುರಿತು ಉಭಯ ನಾಯಕರು ಚರ್ಚಿಸಿದರು.



ಉಭಯ ದೇಶಗಳು ಸಂಘರ್ಷದಿಂದ ದೂರವಿದ್ದು, ಮಾತುಕತೆ ಮೂಲಕ ಭಿನ್ನಾಭಿಪ್ರಾಯ ಗಳನ್ನು ಬಗೆಹರಿಸಬೇಕು ಎಂದು ಕ್ಸಿ ಜಿನ್‌ಪಿಂಗ್ ಕರೆ ನೀಡಿದರು. ಸೇನೆಗಳ ನಡುವೆ ನಿಯಮಿತ ಸಂವಾದ ಮುಂದುವರಿಸಿ, ಬಿಕ್ಕಟ್ಟು ತಡೆಗಟ್ಟುವ ವ್ಯವಸ್ಥೆಗಳನ್ನು ಬಲಪಡಿಸುವ ಅಗತ್ಯವಿದೆ ಎಂದರು. ಎಐ ಅಭಿವೃದ್ಧಿ ಮತ್ತು ಬಳಕೆಯಲ್ಲಿ ಮಾನವ ನಿಯಂತ್ರಣವೇ ಮುಖ್ಯವಾಗಬೇಕು. ತಂತ್ರಜ್ಞಾನವನ್ನು ಮಾನವ ಕಲ್ಯಾಣಕ್ಕಾಗಿ ಬಳಸುವ ರೀತಿಯಲ್ಲಿ ಅದರ ಅಭಿವೃದ್ಧಿ ನಡೆಯಬೇಕು ಎಂದು ಕ್ಸಿ ಒತ್ತಿ ಹೇಳಿದರು.

# ಚುನಾವಣಾ ಅಕ್ರಮದ ಬಗ್ಗೆ ಶೇ.100 ಖಚಿತ: ರಾಹುಲ್

● ವಿಕ್ರಮ ವಾಹಿನಿ । ನವದೆಹಲಿ

*ದೇಶದ ಚುನಾವಣೆಗಳಲ್ಲಿ ಅಕ್ರಮ ನಡೆಯುತ್ತಿದೆ ಎಂಬ ಬಗ್ಗೆ ಶೇ.100ರಷ್ಟು ಖಚಿತತೆ ಇದೆ ಎಂದು ಲೋಕಸಭೆ ವಿರೋಧ ಪಕ್ಷದ ನಾಯಕ ರಾಹುಲ್ ಗಾಂಧಿ ಆರೋಪಿಸಿದರು. ಪ್ರಧಾನಿ ನರೇಂದ್ರ ಮೋದಿ, ಕೇಂದ್ರ ಗೃಹ ಸಚಿವ ಅಮಿತ್ ಶಾ ಹಾಗೂ ಮುಖ್ಯ ಚುನಾವಣಾ ಆಯುಕ್ತ ಜ್ಞಾನೇಶ್ ಕುಮಾರ್ ವಿರುದ್ಧ ತೀವ್ರ ವಾಗ್ದಾಳಿ ನಡೆಸಿದ ಅವರು, ಜ್ಞಾನೇಶ್ ಕುಮಾರ್ ಕೂಡಲೇ ಸಿಇಸಿ ಹುದ್ದೆಗೆ ರಾಜೀನಾಮೆ ನೀಡಬೇಕು ಎಂದು ಆಗ್ರಹಿಸಿದರು.*

*ಇಂದಿರಾ ಭವನದಲ್ಲಿ ಸುದ್ದಿಗೋಷ್ಠಿ ನಡೆಸಿದ ರಾಹುಲ್ ಗಾಂಧಿ, ಮತದಾರರ ಹಕ್ಕು ಮತ್ತು ಚುನಾವಣಾ ವ್ಯವಸ್ಥೆಯ ಮೇಲೆ ದಾಳಿ ನಡೆಯುತ್ತಿದೆ ಎಂದು ಆರೋಪಿಸಿದರು. ಮತದಾರರ ಪಟ್ಟಿಯಲ್ಲಿನ ಅಕ್ರಮಗಳು ಹಾಗೂ ಚುನಾವಣಾ ಪ್ರಕ್ರಿಯೆಯಲ್ಲಿನ ಲೋಪಗಳಿಂದ ಸಂವಿಧಾನ ಮತ್ತು ಪ್ರಜಾಪ್ರಭುತ್ವ ಸಂಸ್ಥೆಗಳ ಮೇಲೆಯೇ ಪರಿಣಾಮ ಬೀರುತ್ತಿದೆ ಎಂದು ಹೇಳಿದರು.*




***'ಮತ ನಾಶವಾದರೆ ಪ್ರಜಾಪ್ರಭುತ್ವಕ್ಕೆ ಅರ್ಥವಿಲ್ಲ':*** *ಚುನಾವಣಾ ಆಯೋಗ ಮತದಾರರ ಮತದಾನದ ಹಕ್ಕಿನ ಸಾಂಸ್ಥಿಕ ರಕ್ಷಕವಾಗಿದೆ. ಮತದಾರರ ಮತವನ್ನು ರಕ್ಷಿಸುವಲ್ಲಿ ಆಯೋಗ ವಿಫಲವಾದರೆ ಸಂವಿಧಾನಾತ್ಮಕ ವ್ಯವಸ್ಥೆಯ ಮೇಲೆಯೇ ಪರಿಣಾಮ ಬೀರುತ್ತದೆ ಎಂದು ರಾಹುಲ್ ಗಾಂಧಿ ಹೇಳಿದರು.*

*ತಾವು ಯಾವುದೇ ಸಾಕ್ಷ್ಯವಿಲ್ಲದೆ ಆರೋಪ ಮಾಡುತ್ತಿಲ್ಲ ಎಂದು ಹೇಳಿದ ಅವರು, 2024ರ ಲೋಕಸಭಾ ಚುನಾವಣೆ ಸೇರಿದಂತೆ ವಿವಿಧ ಚುನಾವಣೆಗಳಲ್ಲಿನ ಮತದಾರರ ಪಟ್ಟಿ ಹಾಗೂ ಚುನಾವಣಾ ಪ್ರಕ್ರಿಯೆಗೆ ಸಂಬಂಧಿಸಿದ ಮಾಹಿತಿಗಳು ತಮ್ಮ ಆರೋಪಗಳಿಗೆ ಆಧಾರವಾಗಿವೆ ಎಂದು ಪ್ರತಿಪಾದಿಸಿದರು.*

***'ಆಡಳಿತ ವಿರೋಧಿ ಅಲೆ ಎಲ್ಲಿ ಹೋಯಿತು?':*** *ದೇಶದಲ್ಲಿ ಸಾಮಾನ್ಯವಾಗಿ ಸರ್ಕಾರಗಳ ವಿರುದ್ಧ ಆಡಳಿತ ವಿರೋಧಿ ಅಲೆ ಕಾಣಿಸಿಕೊಳ್ಳುತ್ತದೆ. ಆದರೆ ನರೇಂದ್ರ ಮೋದಿ ನೇತೃತ್ವದ ಸರ್ಕಾರದ ವಿಚಾರದಲ್ಲಿ ಈ ಅಲೆ ಕಾಣಿಸದಿರುವುದಕ್ಕೆ ಕಾರಣವೇನು ಎಂಬ ಪ್ರಶ್ನೆ ಮೂಡಿದೆ ಎಂದು ರಾಹುಲ್ ಗಾಂಧಿ ಹೇಳಿದರು.*

***ಇಬ್ಬರು ಆಯುಕ್ತರ ಆಕ್ಷೇಪ ಉಲ್ಲೇಖ:*** *ಚುನಾವಣಾ ಆಯುಕ್ತರಾದ ಸುಖಬೀರ್ ಸಿಂಗ್ ಸಂಧು ಮತ್ತು ವಿವೇಕ್ ಜೋಶಿ ಅವರು ಕಳೆದ 10 ತಿಂಗಳಲ್ಲಿ ಚುನಾವಣಾ ಆಯೋಗದ ಕೆಲವು ನಿರ್ಧಾರಗಳ ಬಗ್ಗೆ 14 ಬಾರಿ ಲಿಖಿತ ಆಕ್ಷೇಪ ವ್ಯಕ್ತಪಡಿಸಿದ್ದಾರೆ ಎಂಬ ವರದಿಯನ್ನು ರಾಹುಲ್ ಗಾಂಧಿ ಉಲ್ಲೇಖಿಸಿದರು.*

*ಮತದಾರರ ನೋಂದಣಿ, ಹೆಸರುಗಳ ಸೇರ್ಪಡೆ–ತೆಗೆದುಹಾಕುವಿಕೆ ಹಾಗೂ ಚುನಾವಣಾ ಪಟ್ಟಿಯ ನಿರ್ವಹಣೆಗೆ ಸಂಬಂಧಿಸಿದ ನಿರ್ಧಾರಗಳ ಕುರಿತು ಈ ಆಕ್ಷೇಪಗಳು ವ್ಯಕ್ತವಾಗಿದ್ದವು ಎಂದು ವರದಿಯಾಗಿದೆ.*

***'ಜ್ಞಾನೇಶ್ ಕುಮಾರ್ ಅಪ್ರೂವರ್ ಆಗಲಿ':*** *ಮತದಾರರ ಹಕ್ಕುಗಳಿಗೆ ಧಕ್ಕೆ ತಂದಿರುವ ಆರೋಪಗಳಿಗೆ ಸಂಬಂಧಿಸಿದಂತೆ ಜ್ಞಾನೇಶ್ ಕುಮಾರ್ ಅವರನ್ನು ತನಿಖೆಗೆ ಒಳಪಡಿಸಬೇಕು ಎಂದು ರಾಹುಲ್ ಗಾಂಧಿ ಆಗ್ರಹಿಸಿದರು. ಅವರು 'ಅಪ್ರೂವರ್' ಆಗಿ ಸತ್ಯಾಂಶ ಬಹಿರಂಗಪಡಿಸಬೇಕು ಎಂದೂ ಹೇಳಿದರು.*

*ಪ್ರಧಾನಿ ಮೋದಿ ಹಾಗೂ ಅಮಿತ್ ಶಾ ಅವರ ಪಾತ್ರದ ಬಗ್ಗೆಯೂ ತನಿಖೆ ನಡೆಯಬೇಕು ಎಂದು ಒತ್ತಾಯಿಸಿದ ಅವರು, ಚುನಾವಣಾ ಪ್ರಕ್ರಿಯೆಯ ಮೇಲೆ ಪರಿಣಾಮ ಬೀರಿದ ಆರೋಪಗಳಿಗೆ ಸಂಬಂಧಿಸಿದಂತೆ ಹೊಣೆಗಾರರನ್ನು ಕಾನೂನು ವ್ಯಾಪ್ತಿಗೆ ತರಬೇಕು ಎಂದರು.*

***'ಪ್ರಜಾಪ್ರಭುತ್ವ ಉಳಿಸಲು ಹೋರಾಟ':*** *ಚುನಾವಣಾ ಪ್ರಕ್ರಿಯೆಯಲ್ಲಿನ ಅಕ್ರಮಗಳ ಆರೋಪಗಳಿಗೆ ಕಾರಣರಾದವರ ವಿರುದ್ಧ ಕ್ರಮ ಕೈಗೊಳ್ಳಬೇಕು. ಪ್ರಜಾಪ್ರಭುತ್ವ ಸಂಸ್ಥೆಗಳು ದುರ್ಬಲಗೊಳ್ಳುವುದನ್ನು ಕಾಂಗ್ರೆಸ್ ಸುಮ್ಮನೆ ನೋಡುತ್ತ ಕುಳಿತುಕೊಳ್ಳುವುದಿಲ್ಲ ಎಂದು ರಾಹುಲ್ ಗಾಂಧಿ ಹೇಳಿದರು.*

*ಸುದ್ದಿಗೋಷ್ಠಿಯಲ್ಲಿ ಪ್ರಧಾನಿ ನರೇಂದ್ರ ಮೋದಿ, ಅಮಿತ್ ಶಾ, ಜ್ಞಾನೇಶ್ ಕುಮಾರ್, ಆರ್‌ಎಸ್‌ಎಸ್ ಮುಖ್ಯಸ್ಥ ಮೋಹನ್ ಭಾಗವತ್, ಕೈಗಾರಿಕೋದ್ಯಮಿ ಗೌತಮ್ ಅದಾನಿ ಹಾಗೂ ರಾಷ್ಟ್ರೀಯ ಭದ್ರತಾ ಸಲಹೆಗಾರ ಅಜಿತ್ ದೋವಲ್ ಅವರ ಚಿತ್ರಗಳನ್ನು ಪ್ರದರ್ಶಿಸಿ, ಇವರನ್ನು 'ಷಡ್ಯಂತ್ರಕಾರರು' ಎಂದು ರಾಹುಲ್ ಗಾಂಧಿ ಆರೋಪಿಸಿದರು.* 2ನೇ ಪುಟಕ್ಕೆ...

www.VIKRAMAVAHINI.com
|| ಕನ್ನಡ ದಿನಪತ್ರಿಕೆ ||
PRGI NO: KARKAN/2018/78481
ಸತ್ಯದ ಹಾದಿ । ಜನಪರ ದನಿ । ರಾಷ್ಟ್ರೀಯ ದೃಷ್ಟಿ
ವಿಕ್ರಮ ವಾಹಿನಿ

## ಸವಿ ವಾಹಿನಿ

ನಿಮ್ಮ ಗುರಿಗಳನ್ನು ನಿಮ್ಮ ಸಾಮರ್ಥ್ಯದ ಮಟ್ಟಕ್ಕೆ ಇಳಿಸಬೇಡಿ, ಬದಲಾಗಿ, ನಿಮ್ಮ ಸಾಮರ್ಥ್ಯವನ್ನು ನಿಮ್ಮ ಗುರಿಗಳ ಎತ್ತರಕ್ಕೆ ಏರಿಸಿ.

## ದಿನ ಪಂಚಾಂಗ

ಸೆಪ್ಟೆಂಬರ್, 25-2026, ಶುಕ್ರವಾರ ವರ್ಷ ಋತು, ಭಾದ್ರಪದ ಮಾಸ, ಶುದ್ಧ ಪಕ್ಷ
ಚತುರ್ದಶಿ ತಿಥಿ ರಾ.10:10
ಶತಭಿಷ ನಕ್ಷತ್ರ ಬೆ.11:23
ರಾಹುಕಾಲ ಬೆ 10:42-12:12
ಕ್ಷಮವಾಣಿ, ಅನಧ್ಯಯನ ತ್ರಯ, ಕೆ.ಆರ್.ನಗರ ಯೋಗಾನಂದೇಶ್ವರಮಠ ಶಂಕರಾನಂದ ಆರಾಧನೆ, ವಡ್ನಾಳು ಕಾಶಿ ಮಠ ವಿಶ್ವಕರ್ಮ ವ್ರತ, ಯಲಬುರ್ಗಾ । ಅಂ. ವಿರೂಪಾಕ್ಷೇಶ್ವರ ಪುಣ್ಯತಿಥಿ, ಹೂವಿನ ಹಡಗಲಿ ಮಲ್ಲಿಕಾರ್ಜುನ ರಥ, ಕೆರೆಬೇಡನಹಳ್ಳಿ ಅಭಿಷೇಕ

## ಆಧ್ಯಾತ್ಮ

### ಆರೋಗ್ಯ ಹಾಗೂ ಆತ್ಮಜ್ಞಾನ ಬೇರೆಬೇರೆಯಲ್ಲ: ರಾಘವೇಶ್ವರ ಶ್ರೀ



● ವಿಕ್ರಮ ವಾಹಿನಿ । ಗೋಕರ್ಣ

ಪೂರ್ಣಾರೋಗ್ಯ ಹಾಗೂ ಆತ್ಮಜ್ಞಾನ ಎರಡೂ ಬೇರೆಬೇರೆಯಲ್ಲ. ಭಾರತೀಯ ಪರಂಪರೆಯಲ್ಲಿ ಆರೋಗ್ಯಕ್ಕೆ ಬೇರೆ ಹಾಗೂ ಆತ್ಮಜ್ಞಾನಕ್ಕೆ ಬೇರೆ ಎಂದು ಬೇರೆಬೇರೆಯಾಗಿ ಹೇಳಿಲ್ಲ. ಯಾವುದು ಆರೋಗ್ಯಕ್ಕೆ ಹಿತವೋ ಅದು ಆತ್ಮಜ್ಞಾನಕ್ಕೆ ಪೂರಕವೂ ಹೌದು. ತುಪ್ಪ ಆರೋಗ್ಯ ಕಾರಕವೂ ಹೌದು ಆತ್ಮಜ್ಞಾನಕ್ಕೆ ಪೂರಕವೂ ಹೌದು ಎಂದು ಶ್ರೀರಾಮಚಂದ್ರಾಪುರ ಮಠದ ಜಗದ್ಗುರು ಶಂಕರಾಚಾರ್ಯ ಶ್ರೀಶ್ರೀ ರಾಘವೇಶ್ವರ ಭಾರತೀ ಮಹಾಸ್ವಾಮಿಗಳು ಹೇಳಿದರು.

ಗೋಕರ್ಣದ ಅಶೋಕೆಯ ಮೂಲಮಠದ ಪರಿಸರದಲ್ಲಿ ನಡೆಯುತ್ತಿರುವ 'ಅನ್ನಬ್ರಹ್ಮ ಚಾತುರ್ಮಾಸ್ಯ'ದ ಧರ್ಮಸಭೆಯಲ್ಲಿ 24.09.2026 ರಂದು 'ಅನ್ನಂ ಬ್ರಹ್ಮ' ಮಾಲಿಕೆಯಲ್ಲಿ ಪ್ರವಚನ ಅನುಗ್ರಹಿಸಿದ ಶ್ರೀಗಳು, ಹಠಯೋಗಪ್ರದೀಪಿಕೆಯಲ್ಲಿ ಆತ್ಮಸಾಧನೆಯನ್ನು ಆರಂಭಿಸುವಾಗ ಹಾಲು ಮತ್ತು ತುಪ್ಪವನ್ನು ಸೇವಿಸಲು ಸೂಚಿಸಿದ್ದು, ಇದು ಯೋಗಸಾಧನೆಯ ಅಭ್ಯಾಸದ ಸಮಯದಲ್ಲಿ ಬೇಕಾದ ವಾತಾವರಣವನ್ನು ಕಲ್ಪಿಸಿಕೊಡುತ್ತದೆ. ಸತ್ವ, ರಜಸ್ಸು ಹಾಗೂ ತಮೋಗುಣಗಳು ಪೂರ್ತಿಯಾಗಿ ಒಂದಾದಾಗ ಮಾತ್ರ ಸಮಾಧಿ ಸ್ಥಿತಿಯನ್ನು ಹೊಂದಲು ಸಾಧ್ಯ. ತ್ರಿಗುಣಗಳು ಸಮಗೊಳ್ಳುವುದೇ ಆರೋಗ್ಯವಾಗಿದ್ದು, ಅದೇ ಆತ್ಮಜ್ಞಾನವೂ ಆಗಿದೆ. ತುಪ್ಪದ ಸೇವನೆಯಿಂದ ಸತ್ವ ವೃದ್ಧಿಯಾಗುತ್ತದೆ. ಸತ್ವಗುಣದ ವೃದ್ಧಿಯಿಂದ ಏಕಾಗ್ರತೆ, ಏಕಾಗ್ರತೆಯಿಂದ ಧ್ಯಾನ,ಧ್ಯಾನದಿಂದ ಮೋಕ್ಷ ಸಾಧ್ಯ ಎಂದರು.

ತುಪ್ಪವು ಅಗ್ನಿಯದ್ದೇ ಇನ್ನೊಂದು ರೂಪವಾಗಿದ್ದು, ವೇದಗಳು ಇದನ್ನು ಉಲ್ಲೇಖಿಸಿದೆ. ಅಗ್ನಿಯ ಗುಣಗಳಿಗೂ ತುಪ್ಪದ ಗುಣಗಳಿಗೂ ಸಾಮ್ಯತೆಯಿದ್ದು, ಊರ್ಧ್ವಗತಿಯನ್ನು ಅಗ್ನಿಯಲ್ಲಿ ಕಾಣುವಂತೆ ತುಪ್ಪದಲ್ಲೂ ಕಾಣಬಹುದಾಗಿದ್ದು, ತುಪ್ಪವು ನಮ್ಮನ್ನು ಊರ್ಧ್ವಮುಖದಲ್ಲಿ ಮುಂದೆ ಮುಂದೆ ಕರೆದುಕೊಂಡು ಹೋಗಿ ಸಾಧಕನಿಗೆ ಮೋಕ್ಷವನ್ನು ಕೊಡಿಸುತ್ತದೆ.ಕೊಟ್ಟ ಕೊನೆಯಲ್ಲಿ ಎಲ್ಲಾ ರಸ್ತೆಗಳು ಹೆದ್ದಾರಿಯನ್ನೇ ಸೇರುತ್ತವೆ ಎಂಬಂತೆ ಮೋಕ್ಷದ ಎಲ್ಲಾ ಮಾರ್ಗಗಳೂ ರಾಜಯೋಗಕ್ಕೆ ಸೇರುತ್ತದೆ. ಧ್ಯಾನವೇ ರಾಜಯೋಗವಾಗಿದ್ದು, ಅದನ್ನು ಸಾಧಿಸಿದಾಗ ಸಮಾಧಿ ಸಿದ್ಧಿಸುತ್ತದೆ. ಇವೆಲ್ಲವಕ್ಕೂ ತುಪ್ಪ ಸಹಕಾರಿ ಎಂದು ತುಪ್ಪದ ಮಹತ್ವವನ್ನು ತಿಳಿಸಿದರು.

ಸಾಧಕನಿಗೆ ತಂಪು ಎಂಬುದು ತುಂಬಾ ಮುಖ್ಯ. ಹಾಗಾಗಿ ಹಿಮಾಲಯದ ಚಳಿಯ ಸಮಯ ಸಾಧನೆಗೆ ಶ್ರೇಷ್ಠ ಎಂಬ ಮಾತಿದೆ. ಸಾಧನೆ ನಡೆಯುವಾಗ ದೇಹದಲ್ಲಿ ಅಗ್ನಿ ಜಾಗೃತಿಯಾಗುತ್ತದೆ. ಆಗ ದೇಹವನ್ನು ತಂಪಾಗಿಸುವ ಅವಶ್ಯಕತೆಯೂ ಇದೆ. ತುಪ್ಪ ಅಗ್ನಿವರ್ಧಕವೂ ಹೌದು ಹಾಗೂ ದೇಹಕ್ಕೆ ತಂಪು ನೀಡುವ ಸಾಮರ್ಥ್ಯವೂ ಇದೆ. ಪರಮಾತ್ಮನಲ್ಲಿ ಕೋಟಿಸೂರ್ಯನ ಬೆಳಕು ಹಾಗೂ ಕೋಟಿಚಂದ್ರರ ತಂಪು ಇರುವಂತೆ ತುಪ್ಪದಲ್ಲಿಯೂ ಇದೇ ಗುಣವನ್ನು ಕಾಣಬಹುದು ಎಂದು ವಿವರಿಸಿದರು.

ಖ್ಯಾತ ತಂತ್ರಿಗಳಾದ ಬ್ರಹ್ಮಶ್ರೀ ನೀಲೇಶ್ವರ ಉಚ್ಚಿಲತ್ತಾಯ, ಮಾಜಿ ಶಾಸಕ ಸುನಿಲ್ ಬಿ. ನಾಯ್ಕ್, ಜೆ.ಡಿ.ಎಸ್ ಜಿಲ್ಲಾಧ್ಯಕ್ಷ ಸೂರಜ್ ನಾಯ್ಕ್ ಸೋನಿ, ಉದ್ಯಮಿ ಪ್ರಭಾಕರ ಕಾರಣಗಿರಿ ಉಪಸ್ಥಿತರಿದ್ದು, ಶ್ರೀಗಳ ಆಶೀರ್ವಾದ ಪಡೆದರು, ರಮಣ ಭಟ್ ಮುಂಬೈ ದಂಪತಿಗಳು ಗುರುಭಿಕ್ಷಾ ಸೇವೆ ಸಮರ್ಪಿಸಿದರು. ದಿನಪ್ರಧಾನರಾಗಿ ಕೇವಶ ಭಟ್ ದಂಪತಿಗಳು ಉಪಸ್ಥಿತರಿದ್ದರು.

'ಅನ್ನಂ ಬ್ರಹ್ಮ' ಪ್ರವಚನ ಮಾಲಿಕೆಯು ಯಾರನ್ನೋ ಮೆಚ್ಚಿಸಲು ಮಾಡುತ್ತಿರುವುದಲ್ಲ. ಇಲ್ಲಿನ ವಿಚಾರಗಳು ಸಾಧನೆಗೆ ಇರುವಂತದ್ದಾಗಿದ್ದು, ಜೀವನದಲ್ಲಿ ಅಳವಡಿಸಿಕೊಳ್ಳುವ ಮೂಲಕ ವಯಕ್ತಿಕವಾಗಿ ಸಾಧನೆಯನ್ನು ಮಾಡಬೇಕು – ಶ್ರೀಶ್ರೀ ರಾಘವೇಶ್ವರ ಭಾರತೀ ಮಹಾಸ್ವಾಮಿಗಳು.

# 27 ಭಾನುವಾರದಿಂದ ಅಕ್ಟೋಬರ್ 10 ಶನಿವಾರ ತನಕ ಪಿತೃಪಕ್ಷ

# ಭಾದ್ರಪದ ಮಾಸದ ಕೃಷ್ಣಪಕ್ಷಕ್ಕೆ ಪಿತೃಪಕ್ಷ ಎನ್ನುತ್ತಾರೆ

ಈ ಪಕ್ಷಕ್ಕೆ ಮಹಾಲಯ ಪಕ್ಷ, ಅಪರ ಪಕ್ಷವೆಂದು ಕರೆಯುತ್ತಾರೆ. ಪಿತೃಪಕ್ಷವು ಹಿಂದೂ ಚಾಂದ್ರಮಾನ ತಿಂಗಳಾದ ಭಾದ್ರಪದ ಕೃಷ್ಣ ಪಕ್ಷದ ಪಾಡ್ಯದಿಂದ ಅಮಾವಾಸ್ಯೆವರೆಗೆ ಬರುತ್ತದೆ.

(ಪಿತೃಪಕ್ಷದ ಪ್ರಾರಂಭದಲ್ಲಿ ಸೂರ್ಯನು ಕನ್ಯಾರಾಶಿ ಪ್ರವೇಶಿಸುವಲ್ಲಿಂದ ನಂತರದ ರಾಶಿಗೆ ಹೋಗುವವರೆಗಿನ ಸಮಯದಲ್ಲಿ ಪಿತೃಗಳ ಆತ್ಮವು ಭೂಮಿಯಲ್ಲಿರುವ ತಮ್ಮ ವಂಶಜರ ಮನೆಗಳಿಗೆ ಬಂದು ಸಂಚರಿಸುತ್ತವೆ ಎಂಬ ನಂಬಿಕೆ )

ಒಬ್ಬರ ಮೂರು ತಲೆಮಾರುವರೆಗಿನ ಹಿರಿಯರು/ಪೂರ್ವಜರು/ಪಿತೃಗಳ ಆತ್ಮವು( ಸ್ಥಾನ) ಪಿತೃಲೋಕದಲ್ಲಿ ಅಂದರೆ ಭೂಮಿ ಮತ್ತು ಸ್ವರ್ಗದ ನಡುವಿನ ಪ್ರದೇಶದಲ್ಲಿ ವಾಸ ಮಾಡಿಕೊಂಡಿರುತ್ತಾರೆ

ಅಂದರೆ ಈ ಪಿತೃಲೋಕದಲ್ಲಿ ಮೂರು ತಲೆಮಾರಿನ ಆತ್ಮಗಳು ಇರುತ್ತವೆ. ಶ್ರಾದ್ಧ ಮಾಡುವಾಗ ಈ ಲೋಕದಲ್ಲಿರುವ ಮೂರು ತಲೆಮಾರಿನ ಪೂರ್ವಜರಿಗೆ ಅನ್ನ ...ಪಿಂಡ ಪ್ರದಾನ ಮತ್ತು ತರ್ಪಣ ಕೊಡುವ ಸಂಪ್ರದಾಯ.

**ಪಿತೃಪಕ್ಷ ದ ಮಹತ್ವವೇನು:** ಪ್ರತಿ ವೈದಿಕ ಕ್ರಿಯೆಯಲ್ಲೂ ಗತಿಸಿದ ಪಿತೃಗಳನ್ನು ಸ್ಮರಿಸಿ "ಪಿತೃದೇವತಾಂ ನಮಸ್ಕೃತ್ಯ' ಎಂದು ಅನುಗ್ರಹ ಪಡೆದು ವೈದಿಕಕ್ರಿಯೆ ಮುಂದುವರಿಸುವುದು ಸಂಪ್ರದಾಯ. ಪಿತೃದೇವತೆಗಳ ಅನುಕೂಲಕ್ಕಾಗಿ ಋಣಸಂದಾಯ ಮೂಲಕ ಕರ್ತವ್ಯ ಪಾಲನೆಗೆ ಭಾದ್ರಪದ ಬಹುಳ ಪಾಡ್ಯದಿಂದ ಅಮಾವಾಸ್ಯೆವರೆಗೆ ಬರುವ ಮಹಾಲಯ – ಈ 15 ದಿನಗಳು ಪಿತೃಪಕ್ಷವೆನಿಸಿ, ಶ್ರಾದ್ಧಾವಿಧಿಗಳಿಗೆ ಪ್ರಾಶಸ್ತ್ಯ ಎಂದು ಹೇಳಿದೆ.

ಯಾರು ಮಾತಾ-ಪಿತೃರ ಶ್ರಾದ್ಧವನ್ನು ಮಾಡುವುದಿಲ್ಲವೋ ಅವನು ಮಾಡುವ ದೇವತಾಕಾರ್ಯಗಳು, ಪೂಜೆ-ಪುನಸ್ಕಾರಗಳನ್ನು ದೇವತೆ ಗಳು ಸ್ವೀಕರಿಸುವುದಿಲ್ಲವೆಂದು ಶ್ರಾದ್ಧ ನಿಯಮದಲ್ಲಿ ಹೇಳಿದೆ.

**ಪಿತೃಪಕ್ಷ ಅಶುಭವಲ್ಲ:** ಪಿತೃಪಕ್ಷದಲ್ಲಿ ಯಾವುದೇ ದೇವತಾ ಕಾರ್ಯಗಳನ್ನಾಗಲಿ, ಮಂಗಲ ಕಾರ್ಯಗಳನ್ನಾಗಲಿ ಮಾಡುವುದು ಶ್ರೇಯಸ್ಕರ ಅಲ್ಲವೆಂಬ ಅಭಿಪ್ರಾಯವಿದೆ. ಗತಿಸಿದ ಕುಟುಂಬದ ಹಿರಿಯರು, ಮಾತಾ –

ಪಿತರಿಗೆ ಶ್ರಾದ್ಧ ಪಿಂಡ ತರ್ಪಣ ನೀಡಿ, ದಿವ್ಯಾತ್ಮಗಳನ್ನು ತೃಪ್ತಿಪಡಿಸಿ, ಅಗಲಿದ ಚೈತನ್ಯಗಳಿಂದ ಅನುಗ್ರಹ ಪಡೆಯುವ ಪ್ರಶಸ್ತ ಕಾಲವೇ ಪಿತೃಪಕ್ಷ. ಹಾಗೆಂದೇ ಶ್ರಾದ್ಧ ಕ್ರಿಯೆಗೆ ಪ್ರಾಧಾನ್ಯ ನೀಡಲಾಗಿದೆ.

**ಶ್ರಾದ್ಧ ಎಂದರೇನು?:** ನಮ್ಮ ಜನ್ಮಕ್ಕೆ ಕಾರಣರಾಗಿ, ನಮ್ಮನ್ನು ಹೆತ್ತು ಹೊತ್ತು ಸಾಕಿ, ಸಲಹಿ ನಮ್ಮ ಉದ್ದಾರಕ್ಕೇ ಶ್ರಮಿಸಿ, ನಮ್ಮನ್ನಗಲಿ ಹೋದ ತಂದೆ –ತಾಯಿ ಹಿರಿಯರು ಮುಂತಾದವರನ್ನು ಸ್ಮರಿಸಿ, ಅವರನ್ನು ಕುರಿತು ಶ್ರದ್ಧೆಯಿಂದ ಅನ್ನಜಲಾದಿಗಳನ್ನು ಕೊಡುವ ಪಿತೃಕಾರ್ಯಕ್ಕೆ " ಶ್ರಾದ್ಧ " ವೆಂದು ಹೆಸರು.

ಪಿತೃಗಳನ್ನುದ್ದೇಶಿಸಿ ಶ್ರದ್ದೆಯಿಂದ ಕೊಡಲ್ಪಟ್ಟ ದ್ರವ್ಯವನ್ನು ಮಾನಸಿಕವಾಗಿ ಭಾವನೆಯಿಂದ ಮಾಡುವ ಆಚರಣೆ ಶ್ರಾದ್ಧವೆಂದು ಹೆಸರು.

ಒಟ್ಟಿನಲ್ಲಿ ಶ್ರದ್ಧೆಯಿಂದ ತನಗೆ ಪ್ರಿಯವಾದ ಭೋಜ್ಯಗಳನ್ನು ತನ್ನ ಪಿತೃಗಳನ್ನುದ್ದೇಶಿಸಿ ಕೊಡುವ " ಪಿಂಡಪ್ರದಾನ " ಕ್ರಿಯೆಗೆ ಶ್ರಾದ್ಧವೆಂದು ಹೇಳುತ್ತಾರೆ.

ಇಲ್ಲಿ ಕೆಲವರು ಪ್ರಶ್ನೆ ಕೇಳುವುದುಂಟು – ನಮ್ಮನ್ನಗಲಿ ಹೋದ ಪಿತೃಗಳಿಗೆ ನಾವು ಕೊಡುವ ಜಲಾಂಜಲಿ, ಪಿಂಡಪ್ರದಾನದಿಂದ ಅವರು ಹೇಗೆ ತೃಪ್ತರಾಗುತ್ತಾರೆ ?

ಉತ್ತರ: ನಾವು ಕೊಟ್ಟ ಅನ್ನವನ್ನು ಅಂದರೆ ಅದರ ಸಾರ ಭಾಗವನ್ನು ಪಿತ್ರಗಳಿಗೆ ಸಂಬಂಧಿಸಿದ ದೇವತೆಗಳು ಮತ್ತು ಭಗವಂತನು ಸ್ವೀಕರಿಸಿ ಅದನ್ನು ನಮ್ಮ ಪಿತೃಗಳು ಯಾವ ಯೋನಿಯಲ್ಲಿ ಹುಟ್ಟಿ, ಎಲ್ಲಿ ಇರುವರೋ, ಅಲ್ಲಿ ಅವರಿಗೆ ಆಹಾರರೂಪವಾಗಿ ಸೂಕ್ತರೀತಿಯಲ್ಲಿ ಕೊಟ್ಟು ಸಂತೋಷ ಪಡಿಸುತ್ತಾನೆ ಭಗವಂತ.

ಯಥಾ ಧೇನುಸಹಸ್ರೇಷು
ವತ್ಸೋ ವಿಂದತಿ ಮಾತರಃ
ತಥಾ ಪೂರ್ವಕೃತಂ
ಕರ್ಮ ಕರ್ತಾರಮನುವಿಂದತಿ".

ಸಾವಿರಾರು ಹಸುಗಳ ಹಿಂಡಿನಲ್ಲಿದ್ದರೂ ಕರು, ತನ್ನ ತಾಯಿ ಧೇನುವನ್ನು ಹುಡುಕಿಕೊಂಡು ಅದರ ಬಳಿಗೆ ಹೋಗುವಂತೆ, ಪಿತೃ ಕರ್ಮವು ಮನುಷ್ಯನು ಎಲ್ಲಿದ್ದರೂ ಅವನನ್ನು ಹುಡುಕಿಕೊಂಡು ಹೋಗಿ ತಗಲುತ್ತದೆ.

**ಪಿತೃಪಕ್ಷ ಆಚರಣೆ ಏಕೆ:** ಪಿತೃ ಋಣವು ಮನುಷ್ಯ ತೀರಿಸಲೇಬೇಕಾದ ಬಹುಮುಖ್ಯ ಋಣಗಳಲ್ಲೊಂದು. ಏಕೆಂದರೆ, ನಮಗೆ ಈ ದೇಹ ದೊರೆತಿರುವುದೇ ಪಿತೃಗಳಿಂದ. ಅವರು ಸಂತೃಪ್ತರಾಗಿ ಆಶೀರ್ವಾದ ಮಾಡಿದರೆ ಅದಕ್ಕಿಂತ ಹೆಚ್ಚಿನ ಬಲ ಇನ್ನೊಂದಿಲ್ಲ. ಹೀಗಾಗಿ ಪಿತೃ ಕಾರ್ಯಕ್ಕೆ ಅರ್ಹರಾದವರು ಅದನ್ನು ಮಾಡಲೇಬೇಕು ಮತ್ತು ಕಿರಿಯರು ಇದರ ಪ್ರಸಾದ, ಮಂತ್ರಾಕ್ಷತೆ ಪಡೆಯಬೇಕು.

**ಶ್ರಾದ್ಧ ಕರ್ಮದ ಉದ್ದೇಶವೇನು?:** ಮರಣಾನಂತರ ಜೀವಿಗೆ ತನ್ನ




ಕರ್ಮಾನುಸಾರ ಸ್ವರ್ಗವೋ, ನರಕವೋ ಪ್ರಾಪ್ತಿ. ಸ್ವರ್ಗವಾದರೆ ಮೋಕ್ಷ, ಅಮರತ್ವ. ಪುನರ್ಜನ್ಮವಿಲ್ಲವೆಂದು ನಂಬಿಕೆ. ಅವರಿಗೆ ಶ್ರಾದ್ಧಕರ್ಮಗಳಲ್ಲಿನ ತರ್ಪಣಗಳು ಏಕೆ ಬೇಕು? ನರಕವಾದರೆ ಪಾಪದ ಫಲ ಅನುಭವಿಸಿದ ನಂತರ ಪುನರ್ಜನ್ಮ. ಯಾವುದೋ ರೂಪದಲ್ಲಿ ಬೇರೆಯಲ್ಲಿಯೋ ಜನ್ಮ ಪಡೆದ ಪಿತೃಗಳಿಗೆ ನಾವು ಪಿಂಡಪ್ರದಾನ ಮಾಡುವುದರ ಅವಶ್ಯಕತೆಯೇನು? ದೇಹತ್ಯಾಗದ ನಂತರ ಆತ್ಮ ಪರಮಾತ್ಮನಲ್ಲಿ ಐಕ್ಯವಾದ ಮೇಲೆ ಜೀವಿಯ ಆತ್ಮಕ್ಕೆ ಪ್ರತ್ಯೇಕ ಅಸ್ತಿತ್ವವೆಲ್ಲಿದೆ? ಹೀಗಾಗಿ ಇಲ್ಲಿಯೂ ಶ್ರಾದ್ಧದ ಪ್ರಮೇಯವೇನು?

ಸಾಮಾನ್ಯವಾಗಿ ವೈದಿಕ ಸಮಾಜದಲ್ಲಿ ಆಸಕ್ತರಿಗೆ ಪಿತೃಶ್ರಾದ್ಧಾದಿ ಕಾರ್ಯ ಒಂದು ಕರ್ತವ್ಯವೆಂತಲೂ, ಅದನ್ನು ಶ್ರದ್ಧೆಯಿಂದ ಮಾಡಬೇಕೆಂತಲೂ ನಂಬಿಕೆಯಿದೆ. ಇದು ಸಾರ್ಥಕ ನಂಬಿಕೆ. ತಲತಲಾಂತರದಿಂದ ಆಚರಿಸಿಕೊಂಡು ಬರುತ್ತಿದ್ದಾರೆ ಆಸ್ತಿಕ ಜನರು.

**ಪಿತೃಶ್ರಾದ್ಧದ ಮುಖ್ಯ ಉದ್ದೇಶವೇನು?:** ಇಲ್ಲಿ ಪಿತೃವೆಂದರೆ ಯಾರು? ಯಾವುದು? ಅದೇಕೆ ಗೌರವಾನ್ವಿತ ಹಾಗೂ ಪೂಜನೀಯವಾಯ್ತು? ಅದು ವ್ಯಕ್ತಿಯೇ? ದೇಹವೇ? ಶಕ್ತಿಯೇ? ತತ್ವವೇ? ಚಿಂತಿಸೋಣ.

ಸಾಮಾನ್ಯವಾಗಿ ಸೂತ್ರಕಾರರ ಅಭಿಮತದಂತೆ ಪಿತೃ ಎಂಬುದು ಒಂದು ಸ್ಥಾನ, ಹುದ್ದೆ. ಅದಕ್ಕೆ ಅದರದ್ದೇ ಆದ ಜವಾಬ್ದಾರಿ, ಬದ್ಧತೆ ಇರುತ್ತದೆ. ಅದನ್ನು ಹುಟ್ಟಿದ ಪ್ರತಿಯೊಂದು ಜೀವಿಯೂ ಹೊಂದಲೇ ಬೇಕಾದ ಹುದ್ದೆ. ಅದನ್ನು ಪಡೆಯಲು, ಜವಾಬ್ದಾರಿಯುತವಾಗಿ ನಿರ್ವಹಿಸಲು ಅಸಮಾನ್ಯ ಜ್ಞಾನವು ಬೇಕು. ಆ ಜ್ಞಾನವು ಅನುಭವದಿಂದ ಮಾತ್ರ ಪ್ರಾಪ್ತವಾಗುವಂತಹದ್ದು. ಕಲಿಕೆಯಿಂದ ಬರುವಂತಹದ್ದಲ್ಲ. ಅಂತಹಾ ಹುದ್ದೆಯನ್ನು ಅಲಂಕರಿಸಿದ್ದಾರೆ ನಮ್ಮ ಭೌತಿಕ ವ್ಯಾವಹಾರಿಕ ಪ್ರಪಂಚದ ಪಿತೃಗಳು. ಅಂದರೆ ಭಾವನಾತ್ಮಕ ತಂದೆಯೆಂದು ಅರ್ಥ. ವ್ಯಕ್ತಿಗತವಾಗಿ ಆ ಸ್ಥಾನವನ್ನು ಸಮರ್ಥವಾಗಿ ಅವರು ನಿರ್ವಹಿಸಿದ್ದಾರೆ ಎಂದು ಹೇಳುವ ಅರ್ಹತಾ ಪತ್ರವೇ ನಾವು. ಹಾಗಿದ್ದಾಗ ಅವರ ನಿರ್ವಹಣೆಯಲ್ಲಿ ಅನರ್ಹರು ಎಂದರೆ ನಾವು ಅನರ್ಹರು ಎಂದೇ ಅರ್ಥ.

ಅಂತಹಾ ಪಿತೃಸ್ಥಾನ ಪಟ್ಟವು ಪ್ರತಿಯೊಬ್ಬ ಜೀವಿಯೂ ಬಯಸಿ ಪಡೆಯುವ ಪಟ್ಟ. ಅದರ ಮಹತ್ವವೆಷ್ಟಿರಬಹುದು ಚಿಂತಿಸಿ? ಅದನ್ನು ಪಡೆದು ನಿರ್ವಹಿಸಿ, ಯಶಸ್ವಿಯಾಗಿ ನಮ್ಮನ್ನು ಈ ಲೋಕಕ್ಕೆ, ಸಮಾಜಕ್ಕೆ ಕೊಟ್ಟು ತಾವು ತೇರ್ಗಡೆಯಾಗಿ ವಿರಮಿಸಿದ ತಂದೆತಾಯಿಯ ಸ್ಥಾನ ಪೂಜಾರ್ಹವಲ್ಲವೇ ಚಿಂತಿಸಿ? ಅಂತಹಾ ಸ್ಥಾನವನ್ನು ಗೌರವಿಸುವುದು ಧರ್ಮವಲ್ಲವೇ? ಇದು ಶ್ರಾದ್ಧದ ಹಿನ್ನಲೆಯಲ್ಲಿರುವ ಮಾನವೀಯ ಧರ್ಮ.



ಇನ್ನು ಮೃತಾನಂತರ ಪುನರ್ಜನ್ಮ. ಅವರಿಗೇಕೆ ತರ್ಪಣ? ಪಿಂಡಪ್ರಧಾನ ಎಂಬ ಪ್ರಶ್ನೆಗಳಿವೆ. ಜನರೇ, ಈ ದೃಷ್ಟಿಯಿಂದ ಚಿಂತಿಸಬೇಕು- ತಂದೆಯು ಮೃತನಾಗುವುದಿಲ್ಲ, ದೇಹ ಮಾತ್ರ ನಾಶವಾಗಿದೆ. ತಂದೆಯು ಪುನರ್ಜನ್ಮ ಪಡೆದಿಲ್ಲ, ಆತ್ಮವು ಮಾತ್ರ ಪಡೆದಿದೆ. ತಂದೆಯು ಅಸ್ತಿತ್ವ ಕಳೆದುಕೊಳ್ಳುವುದಿಲ್ಲ, ತಂದೆಯಾಗಿಯೇ ಉಳಿದಿರುತ್ತಾರೆ. ಆತ್ಮವು ಮಾತ್ರ ಪುನರ್ಜನ್ಮ ಪಡೆದು ಹುಟ್ಟಿಬರಬಹುದು. ಆದರೆ ಅದು ಪ್ರಾಣಿಯಾಗಿ ಹುಟ್ಟಿತು ಎಂದು ಯಾರೂ ಪ್ರಸಕ್ತಕಾಲದ ವಿಳಾಸ ಹೇಳುವಾಗ ತನ್ನ ತಂದೆಯು ಪ್ರಾಣಿಯಾಗಿ ಪುನರ್ಜನ್ಮ ಪಡೆದಿದ್ದಾರೆ ಎಂದು ಗೊತ್ತಿದ್ದರೂ ತಾನು ಪ್ರಾಣಿಯ ಮಗನೆಂದು ತನ್ನ ಹೆಸರಿನ ಮುಂದೆ ಸೇರಿಸಿಕೊಳ್ಳುವುದಿಲ್ಲ. ಪುನರ್ಜನ್ಮ ಸಿಕ್ಕಿದೆಯೋ, ಬಿಟ್ಟಿದೆಯೇ ಅದು ಬೇರೆಯ ವಿಚಾರ. ಈ ಶ್ರಾದ್ಧವನ್ನು ಮಾಡಬೇಕಾದ ಮಗನು ಬದುಕಿರುವವರೆಗೆ, ತಂದೆ ಎಂಬ ಭಾವನಾತ್ಮಕ ಅಸ್ತಿತ್ವವು ಪುನರ್ಜನ್ಮ ಪಡೆಯುವುದಿಲ್ಲ. ಆ ಪಟ್ಟ ಈ ಮಗನಿಗೆ ಸಿಗದೇ ಇರಬಹುದು. ಅಲ್ಲಿಂದ ಮುಂದೆ ಹುಟ್ಟಿದ ಆ ಮಗನಿಂದ ಶ್ರಾದ್ಧವಿಲ್ಲ, ಬೇಕಿಲ್ಲ. ಆದರೆ ತಂದೆಯ ಸ್ಥಾನ ನಿರ್ವಹಿಸಿದ ಈ ಬ್ರಹ್ಮಚಾರೀ ಮಗನನ್ನಾದರೂ ಈ ಭೂಮಿಗೆ ಕೊಟ್ಟ ತಂದೆಯು ತನ್ನ ಸ್ಥಾನ ನಿರ್ವಹಣೆ ಮಾಡಿದ್ದಾರೆ. ಅಲ್ಲಿಯವರೆಗೆ ಶ್ರಾದ್ಧ ಸಾಧುವೇ, ಸತ್ಯವೇ, ನ್ಯಾಯವೇ ಆಗಿರುತ್ತದೆ. ಅದು ಈ ಮಗನ ಅಸ್ತಿತ್ವವನ್ನು ಉಳಿಸಿಕೊಡುತ್ತದೆ ನೆನಪಿರಲಿ.

ಇಲ್ಲಿಯವರೆಗೆ ಪಿತೃಸ್ಥಾನ ಮತ್ತು ಮಗನ ಕರ್ತವ್ಯ ನಿರ್ವಹಣೆ. ಪ್ರತೀ ಜೀವಿಯೂ ಒಂದೊ ತಂದೆಯಾಗಿ ಅಥವಾ ತಾಯಿಯಾಗಿ ಸಾಫಲ್ಯತೆ ಕಾಣುವ ನಮ್ಮ ಆಧ್ಯಾತ್ಮಿಕ, ದೈವೀಕ ನೆಲೆಗಟ್ಟಿನ ಸಮಾಜ ಜೀವನದ ಪರಮೋನ್ನತ ಪದವಿ ತಂದೆ-ಯಾ- ತಾಯಿ. ಈ ಪದವಿಗಾಗಿ ಪ್ರತೀಜೀವಿಯೂ ಹಾರೈಸುತ್ತದೆ. ಅಂತಹಾ ಪದವಿ ಆಕಾಂಕ್ಷೆಯಾದ ಪ್ರತೀಜೀವಿಯೂ ಆ ಸ್ಥಾನವನ್ನು ಶ್ರದ್ಧೆಯಿಂದ ಗೌರವಿಸಿದರೆ ನಿಸ್ತಂತುವಾಗಿ ವಂಶ ಬೆಳೆಯುತ್ತದೆ. ಇಲ್ಲವಾದರೆ ಮುಂದೆ ಸಂತಾನ ಲಭ್ಯವಿಲ್ಲದೆ ವಂಶ ನಿಂತು ಹೋಗಬಹುದು. ಆದ್ದರಿಂದ ಶ್ರಾದ್ಧ, ತರ್ಪಣ, ಪ್ರತಿಯೊಬ್ಬರ ಮುಖ್ಯ ಕರ್ತವ್ಯ. ಅದು ಆ ಸ್ಥಾನವನ್ನು ಗೌರವಿಸಿದಂತೆ.

**ಶ್ರಾದ್ಧ ಕ್ರಿಯೆಯ ವೈಜ್ಞಾನಿಕತೆ:** ಶ್ರಾದ್ಧ ಕ್ರಿಯೆಯು ದೈವಿಕವಾಗಿದ್ದರೂ ವೈಜ್ಞಾನಿಕತೆಗೆ ಎಟುಕಲಾರದ ವಿಷಯವಲ್ಲ. ಪಂಚಭೂತಗಳಿಂದ

ಭೌತಿಕ ಶರೀರ ಉಂಟಾಗಿದೆ. ಮರಣಾನಂತರ ಇದು ನಾಶವಾದರೂ, ತೇಜಸ್ಸು, ಪಂಚವಾಯು ಮತ್ತು

ಆಕಾಶ ತತ್ವಗಳು ಮನೋಮಯ ಕೋಶದೆಣಟಿಜಜಜಿಟಿಜಜಡನೆ ಕರ್ಮಾನುಸಾರ ಶರೀರಾಂತರವನ್ನು ಸೇರುವುದು. ತಂದೆಯ ಸೂಕ್ಷ್ಮ ಶರೀರಕ್ಕೂ ಪುತ್ರನ ಸೂಕ್ಷ್ಮ ಶರೀರಕ್ಕೂ ಪರಸ್ಪರ ಆಕರ್ಷಣೆಯ ಋಣಾನುಬಂಧವಿದೆ. ಪಿತೃವಿನ ಮರಣಾನಂತರವೂ ಈ ಸಂಬಂಧವು ತೊಲಗಲಾರದು. ಆದಕಾರಣ ಪುತ್ರಕೃತ ಸಂಸ್ಕಾರಗಳು ಪಿತೃಗಳ ಸದ್ಗತಿಗೆ ಸಾಧಕಗಳಾಗುವುದು. ಇದು ಶಾಸ್ತ್ರಸಿದ್ಧ

ಮೃತ ವ್ಯಕ್ತಿಯ ಸೂಕ್ಷ್ಮ ಶರೀರವು ಯಾವ ಅಜ್ಞಾತ ಯೋನಿಯಲ್ಲಿದ್ದರೂ (ಆಕಾಶದ ಶಬ್ದ, ವಾಯುವಿನ ಸ್ಪರ್ಶ, ತೇಜಸ್ಸಿನ ತರಂಗಗಳು ಇಲ್ಲಿಂದಲ್ಲಿಗೆ ಸದಾ ಪ್ರವಹಿಸುತ್ತಿರುವ ಕಾರಣ) ಮಾಡುವ ಶ್ರಾದ್ಧದಲ್ಲಿ ಕ್ರಿಯಾಶಕ್ತಿ, ಮಂತ್ರಶಕ್ತಿ, ದ್ರವ್ಯಶಕ್ತಿಗಳು ಸಮ್ಮಿಳಿತವಾಗಿ ಲೋಕಾಂತರದಲ್ಲಿರುವ ಪಿತೃಗಳಿಗೆ (ಪಿಂಡ ತಿಲತರ್ಪಣಗಳು) ರೂಪಾಂತರ ಹೊಂದಿ ಆಹಾರವಾಗಿ ಪರಿಣಮಿಸುತ್ತದೆ. ಮಾನವನ ಸೀಮಿತ ದೃಷ್ಟಿಗೆ ಇದು ಗೋಚರಿಸದಿದ್ದರೂ "ಶ್ರಾದ್ಧೇ ಯೋಗಃ ಪ್ರವರ್ತತೇ' ಎಂದು ಋಷಿಗಳು ಈ ಸೂಕ್ಷ್ಮ ರಹಸ್ಯವನ್ನು ಮನಗಂಡಿದ್ದಾರೆ

ಪರಮ ದುರ್ಲಭವಾದ ಮನುಷ್ಯಜನ್ಮದ ಸಾಫಲ್ಯತೆಯು ಅದನ್ನು ಪಡೆದ ನಮ್ಮ ಆಚರಣೆಗಳ ಮೇಲೆ ಅವಲಂಬಿತವಾಗಿರುತ್ತದೆ. ಪರಮಾತ್ಮ ನಮಗೆ ಈ ಜನ್ಮವನ್ನು ಏತಕ್ಕಾಗಿ ನೀಡಿದ್ದಾನೆ ಎಂದರೆ ಹಿಂದಿನ ಜನ್ಮದ ಪಾಪ ಶೇಷಗಳನ್ನು ಅನುಭವಿಸಿ ಮುಗಿಸಿ ಮತ್ತೆ ಇನ್ನೂ ಹೆಚ್ಚಿನದಾದ ಪುಣ್ಯಸಂಪಾದನೆ ಮಾಡಿ ಮೋಕ್ಷವನ್ನು ಪಡೆಯಲಿ ಎಂದು. ಶಾಸ್ತ್ರಗಳ ಪ್ರಕಾರ ಮೃತರ ಆತ್ಮಗಳಿಗೆ ಶಾಶ್ವತ ಪಿತೃಲೋಕ ಪ್ರಾಪ್ತಿಯಾಗುವಂತೆ ಮಾಡುವುದು ಅವರ ಮಕ್ಕಳ ಕರ್ತವ್ಯ.

ಪಿತೃ ಶ್ರಾದ್ದದಲ್ಲಿ ವಾಯಸ ಬಲಿ ಎಂದು ಕಾಗಿಗಳಿಗೆ ಅನ್ನ ನೀಡುತ್ತಾರೆ. ಕಾಗೆಗಳಿಗೂ ಪಿತೃಗಳಿಗೆ ಏನು ಸಂಬಂಧ???

ಯೇ ಚ ಮದ್ವಿಷಯಸ್ಥಾವ್ಯೆ ಮಾನವಾ ಕ್ಷುಧಯಾರ್ದಿತಾ: ।
ತ್ವಯಿ ಭುಕ್ತೇ ಸುತ್ರುಸ್ತಾಪ್ತೆ ಭವಿಷ್ಯಂತಿ ಸಭಾಂಧವಾ : ॥

ಯಮದೇವರು ಕಾಗೆಗಳಿಗೆ ದೀರ್ಘಾಯುಷ್ಯ ವನ್ನು ಕೊಟ್ಟು, 'ನನ್ನ ಲೋಕದಲ್ಲಿ ಇರುವ ಪಿತೃಗಳು ನಿನ್ನ ಮೂಲಕ ಉಂಡು ತೃಪ್ತರಾಗಲಿ' ಎಂದು ಯಮದೇವರು ಕಾಗೆಗಳಿಗೆ ನೀಡಿದ ವರ. ಅದಕ್ಕಾಗಿ ವಾಯಸ ಬಲಿ ರೂಡಿಯಲ್ಲಿದೇ.

ಈ ವಿಷಯ ರಾಮಾಯಣದಲ್ಲಿ ಬರುತ್ತದೆ. ಅದು ರಾವಣನ ಕಾಲ. ಅವನಿಗೆ ಹೆದರಿ ಎಲ್ಲಾ ದೇವತೆಗಳು ಒಂದು ಯಜ್ಞಕ್ಕೆ ಗೋಪ್ಯವಾಗಿ ಪಕ್ಷಿಗಳ ರೂಪದಿಂದ ಬಂದರು. ಆ ಯಜ್ಞ ಸೂರ್ಯ ವಂಶದಲ್ಲಿ ಬಂದ ಮರುತ್ ಎಂಬ ರಾಜ ಮಾಡುತ್ತಿದ್ದ. ದೇವೇಂದ್ರ ನವಿಲಾದ.ಬ್ರಹ್ಮದೇವರು ಹಂಸನಾದ. ಯಮ ಕಾಗೆಯಾದ. ಕೊನೆಯಲ್ಲಿ ತಮ್ಮ ಗೋಪ್ಯವನ್ನು ಕಾಪಾಡಿದ ಆ ಪಕ್ಷಿಗಳಿಗೆ ವರವನ್ನು ಕೊಟ್ಟರು.

ಕಾಗೆ ನಮಗೆ ಒಂದು ಸಂದೇಶ ನೀಡುತ್ತದೆ. ಕಾಗೆ ಕಾ-ಕ ಎಂದು ಕೂಗುತ್ತದೆ. ಸಂಸ್ಕೃತದಲ್ಲಿ ಕಾ ಅಂದರೆ ಯಾರು? ನೀನು ಯಾರು ? ದೇವರು ಯಾರು ? ನಿನ್ನ ಹಿಂದೆ ಬರುವರು ಯಾರು? ಇದರ ಬಗ್ಗೆ ಜಿಜ್ಞಾಸಾ ಮಾಡು ಎಂದು ಪದೇ ಪದೇ ಹೇಳುವಂತಿದೆ.

ಕಚ್ಚಾಡುವ ಮನೆ, ಕಾದಾಡುವ ಮಕ್ಕಳು, ಅಶಾಂತಿ-ಅತೃಪ್ತಿಯ ಗೃಹವಾಸ, ಇವೆಲ್ಲವುಗಳಿಗೆ ಕಾರಣ "ಪಿತೃಶಾಪ" ಎನ್ನುತ್ತದೆ ಜ್ಯೋತಿಃಶಾಸ್ತ್ರ. ಪಿತೃಕಾರ್ಯಗಳು ಸರಿಯಾಗಿ ನಡೆಯದಿದ್ದರೆ ಮೇಲ್ಕಂಡ ಸ್ಥಿತಿ ಏರ್ಪಡುತ್ತದೆ ಎಂದರ್ಥ.

ಸಂವತ್ಸರ ಪೂರ್ತಿ ಪಿತೃದೇವತೆಗಳು ಸಂತುಷ್ಟರಾಗಿರಬೇಕಾದರೆ ಭಾದ್ರಪದಮಾಸದ ಕೃಷ್ಣಪಕ್ಷದಲ್ಲಿ ಪಿತೃಗಳನ್ನು ಎಲ್ಲರೂ ನೆನೆಯಬೇಕು.

ಪಿತೃಪ್ರಾರ್ಥನೆ: ಪಿತ್ರಪಕ್ಷದಲ್ಲಿ ಒಮ್ಮೆಯಾದರೂ ಈ ಪ್ರಾರ್ಥನೆಯನ್ನು ಮಾಡಿ ಪಿತೃರನ್ನು ನೆನೆದರೆ ಅವರ ಅನುಗ್ರಹ ಖಂಡಿತ

ಅಮೂರ್ತಾನಾಂ ಸುಮೂರ್ತಾನಾಂ ಪಿತೃಣಾಂ ದೀಪ್ತತೇಜಸಾಮ್।
ನಮಸ್ಯಾಮಿ ಸದಾ ಭಕ್ತ್ಯಾ ಧ್ಯಾಯಿನಾಂ ಯೋಗಚಕ್ಷುಸಾಮ್ ॥
ದೇವತಾಭ್ಯಃ ಪಿತೃಭ್ಯಶ್ಚ ಮಹಾಯೋಗಿಭ್ಯ ಏವ ಚ।
ನಮಃ ಸ್ವಧಾಯೈ ಸ್ವಾಹಾಯೈ ನಿತ್ಯಮೇವ ನಮೋ ●

## 'ಗ್ಯಾರಂಟಿ ಯೋಜನೆಗಳು ಉಚಿತವಲ್ಲ, ಜನಕಲ್ಯಾಣದ ಆಸರೆ'

● ವಿಕ್ರಮ ವಾಹಿನಿ । ಬೆಂಗಳೂರು

ರಾಜ್ಯದ ಗ್ಯಾರಂಟಿ ಯೋಜನೆಗಳು ಉಚಿತವಲ್ಲ, ಜನರ ಬದುಕಿಗೆ ಆಸರೆಯಾಗಿರುವ ಜನಕಲ್ಯಾಣ ಕಾರ್ಯಕ್ರಮಗಳು ಎಂದು ವಿಧಾನ ಪರಿಷತ್ ಸದಸ್ಯ ಹಾಗೂ ರಾಜ್ಯ ಗ್ಯಾರಂಟಿ ಅನುಷ್ಠಾನ ಸಮಿತಿ ಉಪಾಧ್ಯಕ್ಷ ದಿನೇಶ್ ಗೂಳಿಗೌಡ ಹೇಳಿದರು.

ವಿಧಾನ ಪರಿಷತ್ತಿನಲ್ಲಿ ಬಿಜೆಪಿ ಹಿರಿಯ ಸದಸ್ಯ ಬಸವರಾಜ ಹೊರಟ್ಟಿ ಅವರು ಗ್ಯಾರಂಟಿ ಯೋಜನೆಗಳ ಕುರಿತು ವ್ಯಕ್ತಪಡಿಸಿದ ಆಕ್ಷೇಪಕ್ಕೆ ಪ್ರತಿಕ್ರಿಯಿಸಿದ ಅವರು, ಗ್ಯಾರಂಟಿ ಯೋಜನೆಗಳ ಮೂಲಕ ರಾಜ್ಯದಲ್ಲಿ ದೊಡ್ಡ ಪ್ರಮಾಣದ ಹಣ ನೇರವಾಗಿ ಫಲಾನುಭವಿಗಳ ಖಾತೆಗೆ ವರ್ಗಾವಣೆಯಾಗುತ್ತಿದೆ ಎಂದರು.

ಗೃಹಲಕ್ಷ್ಮಿ ಯೋಜನೆಯಡಿ 1.24 ಕೋಟಿಗೂ ಹೆಚ್ಚು ಮಹಿಳೆಯರಿಗೆ 33 ಕಂತುಗಳಲ್ಲಿ ತಲಾ ರೂ 66 ಸಾವಿರದಂತೆ ಒಟ್ಟು ರೂ 67,500 ಕೋಟಿ ಜಮೆ ಮಾಡಲಾಗಿದೆ. ಈ ಹಣವನ್ನು ಕುಟುಂಬ ನಿರ್ವಹಣೆ, ಮಕ್ಕಳ ಶಾಲಾ ಶುಲ್ಕ ಹಾಗೂ ಔಷಧ ಖರೀದಿಗೆ ಬಳಸಲಾಗುತ್ತಿದೆ ಎಂದು ತಿಳಿಸಿದರು.

ಗೃಹಜ್ಯೋತಿ ಯೋಜನೆಯಡಿ 1.67 ಕೋಟಿ ಮನೆಗಳಿಗೆ 200 ಯೂನಿಟ್‌ವರೆಗೆ ಉಚಿತ ವಿದ್ಯುತ್ ಒದಗಿಸಲಾಗುತ್ತಿದ್ದು, ಮೂರು ವರ್ಷಗಳಲ್ಲಿ ರೂ 21,500 ಕೋಟಿ ವೆಚ್ಚ ಮಾಡಲಾಗಿದೆ. ಯುವನಿಧಿ ಯೋಜನೆಯಡಿ ನಿರುದ್ಯೋಗಿ ಪದವೀಧರರು ಹಾಗೂ ಡಿಪ್ಲೊಮಾ ಪದವೀಧರರಿಗೆ ಒಟ್ಟು ರೂ 1,268 ಕೋಟಿ ನೆರವು ನೀಡಲಾಗಿದೆ. ಅನ್ನಭಾಗ್ಯ ಯೋಜನೆಯಡಿ 1.48 ಕೋಟಿ ಕಾರ್ಡ್‌ಗಳ 4.5 ಕೋಟಿ ಸದಸ್ಯರಿಗೆ ತಲಾ 10 ಕೆಜಿ ಅಕ್ಕಿ ನೀಡಲಾಗುತ್ತಿದೆ ಎಂದು ಹೇಳಿದರು.

ಗ್ಯಾರಂಟಿ ಯೋಜನೆಗಳು ಬರದಂತಹ ಸಂಕಷ್ಟದ ಸಂದರ್ಭದಲ್ಲೂ ಜನರಿಗೆ ನೆರವಾಗಿದ್ದು, ಗ್ರಾಮೀಣ ಪ್ರದೇಶದಿಂದ ನಗರಗಳಿಗೆ ಗುಳೆ ಹೋಗುವ ಪ್ರವೃತ್ತಿಯನ್ನು ತಡೆಯಲು ಸಹಕಾರಿಯಾಗಿವೆ ಎಂದು ಗೂಳಿಗೌಡ ಸಮರ್ಥಿಸಿಕೊಂಡರು. ಅಮೆರಿಕದಲ್ಲೂ ಇಂತಹ ಜನಕಲ್ಯಾಣ ಯೋಜನೆಗಳ ಕುರಿತು ಚರ್ಚೆಯಾಗುತ್ತಿರುವುದು ಗ್ಯಾರಂಟಿ ಯೋಜನೆಗಳ ಪ್ರಾಮುಖ್ಯತೆಯನ್ನು ತೋರಿಸುತ್ತದೆ ಎಂದು ಹೇಳಿದರು.


**ಜಲಾಶಯಗಳಲ್ಲಿ ನೀರಿನ ಕೊರತೆ:** ರಾಜ್ಯದಲ್ಲಿ ಮಳೆ ಕೊರತೆಯಿಂದ ಜಲಾಶಯಗಳ ನೀರಿನ ಸಂಗ್ರಹಣೆಯಲ್ಲೂ ಆತಂಕಕಾರಿ ಪರಿಸ್ಥಿತಿ ನಿರ್ಮಾಣವಾಗಿದೆ ಎಂದು ಅವರು ಸದನದ ಗಮನಕ್ಕೆ ತಂದರು. ಕೃಷ್ಣಾ ಪ್ರಾಂತ್ಯದ ಜಲಾಶಯಗಳ ಒಟ್ಟು ಸಾಮರ್ಥ್ಯ 452 ಟಿಎಂಸಿ ಇದ್ದು, ಕಳೆದ ವರ್ಷ ಇದೇ ಅವಧಿಯಲ್ಲಿ 420 ಟಿಎಂಸಿ ನೀರಿದ್ದರೆ, ಪ್ರಸಕ್ತ ವರ್ಷ 375 ಟಿಎಂಸಿ ಮಾತ್ರ ಸಂಗ್ರಹವಾಗಿದೆ. ಕಾವೇರಿ ಪ್ರಾಂತ್ಯದ ಜಲಾಶಯಗಳ 114.57 ಟಿಎಂಸಿ ಸಾಮರ್ಥ್ಯದ ಪೈಕಿ ಕಳೆದ ವರ್ಷ 101.8 ಟಿಎಂಸಿ ಇದ್ದ ನೀರು, ಪ್ರಸಕ್ತ ವರ್ಷ 60.1 ಟಿಎಂಸಿಗೆ ಇಳಿಕೆಯಾಗಿದೆ ಎಂದು ಮಾಹಿತಿ ನೀಡಿದರು. ಪ್ರಕೃತಿ ಮುನಿದ ಸಂದರ್ಭದಲ್ಲಿ ಆಡಳಿತ ಮತ್ತು ಪ್ರತಿಪಕ್ಷಗಳೆರಡರಿಂದಲೂ ಎಲ್ಲವನ್ನೂ ನಿಯಂತ್ರಿಸಲು ಸಾಧ್ಯವಿಲ್ಲ. ಇಂತಹ ಪರಿಸ್ಥಿತಿಯಲ್ಲಿ ಮಳೆ ಹಾಗೂ ದೈವಕೃಪೆಯೇ ಆಶ್ರಯ ಎಂದು ದಿನೇಶ್ ಗೂಳಿಗೌಡ ಹೇಳಿದರು.



## ವಿಬಿಜಿ ರಾಮ್ ಜಿ ತ್ರೈಮಾಸಿಕಕ್ಕೆ ರಾಜ್ಯದಿಂದ 1200 ಕೋಟಿ ರೂ: ಈಶ್ವರ ಖಂಡ್ರೆ

**ವಿಬಿಜಿ ರಾಮ್ ಜಿ ಯೋಜನೆಯಡಿ ಗ್ರಾಮೀಣ ಜನರಿಗೆ ಉದ್ಯೋಗ ಕಲ್ಪಿಸಲು ಪ್ರಸಕ್ತ ತ್ರೈಮಾಸಿಕದಲ್ಲಿ ಕೇಂದ್ರದ ರೂ 1,700 ಕೋಟಿ ಹಾಗೂ ರಾಜ್ಯದ ರೂ 1,200 ಕೋಟಿ ಸೇರಿ ಒಟ್ಟು ರೂ 2,900 ಕೋಟಿ ಲಭ್ಯವಿದೆ ಎಂದು ಗ್ರಾಮೀಣಾಭಿವೃದ್ಧಿ ಸಚಿವ ಈಶ್ವರ ಬಿ. ಖಂಡ್ರೆ ವಿಧಾನಸಭೆಯಲ್ಲಿ ತಿಳಿಸಿದರು.**

ವಿಬಿಜಿ ರಾಮ್ ಜಿಯಡಿ ಗ್ರಾಮೀಣ ಜನರಿಗೆ ಉದ್ಯೋಗ ಕಲ್ಪಿಸಲು ಪ್ರಸಕ್ತ ತ್ರೈಮಾಸಿಕಕ್ಕೆ ರಾಜ್ಯ ಸರ್ಕಾರ 1200 ಕೋಟಿ ರೂ. ತೆಗೆದಿರಿಸಿದೆ ಎಂದು ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವ ಈಶ್ವರ ಬಿ ಖಂಡ್ರೆ ವಿಧಾನಸಭೆಗಿಂದು ತಿಳಿಸಿದ್ದಾರೆ.



ಬರದ ಮೇಲಿನ ಚರ್ಚೆಯ ವೇಳೆ ಮಧ್ಯಪ್ರವೇಶಿಸಿ ಮಾತನಾಡಿದ ಅವರು, ಈ ಸಾಲಿನಲ್ಲಿ ಕೇಂದ್ರ ಸರ್ಕಾರ60:40 ಅನುಪಾತದಡಿ ರಾಜ್ಯಕ್ಕೆ ವಿಬಿಜಿ ರಾಮ್ ಜಿ ಅಡಿ 5706 ಕೋಟಿ ರೂ. ಹಂಚಿಕೆ ಮಾಡಿದ್ದು, ರಾಜ್ಯ ಸರ್ಕಾರ 3806 ಕೋಟಿ ರೂ. ಭರಿಸುತ್ತಿದೆ. ಆಯವ್ಯಯದಲ್ಲಿ 500 ಕೋಟಿ ರೂ. ತೆಗೆದಿರಿಸಲಾಗಿತ್ತು. ಪೂರಕ ಅಂದಾಜಿನಲ್ಲಿ ಹೆಚ್ಚಿನ ಹಣ ನೀಡಿ ಯೋಜನೆ ಆರಂಭಿಸಲಾಗಿದೆ ಎಂದರು.

ಯೋಜನೆ ಕಾರ್ಯಾನುಷ್ಠಾನದ ಬಗ್ಗೆ ಸಿಇಓಗಳೊಂದಿಗೆ ನಿಯಮಿತವಾಗಿ ವರ್ಚುವಲ್ ಸಭೆ ನಡೆಸುತ್ತಿದ್ದು, ಪ್ರಮಾಣಿತ ಕಾರ್ಯಾಚರಣೆ ಮಾನದಂಡ (ಎಸ್.ಓ.ಪಿ.) ಜಾರಿ ಮಾಡಲಾಗಿದೆ. ಅಂತರ್ಜಲ ಮಟ್ಟ ಹೆಚ್ಚಿಸಲು, ಕೃಷಿ ಹೊಂಡ ನಿರ್ಮಾಣ, ಚೆಕ್ ಡ್ಯಾಂ ನಿರ್ಮಾಣ, ಕೆರೆಗಳ ಹೂಳೆತ್ತುವುದು, ನಾಲೆಗಳ ಸ್ವಚ್ಛತೆ ಸೇರಿದಂತೆ 318 ಕಾಮಗಾರಿಗಳನ್ನು ಕೈಗೊಳ್ಳಲಾಗಿದೆ ಎಂದು ತಿಳಿಸಿದರು.

ಪ್ರಸಕ್ತ ತ್ರೈಮಾಸಿಕದಲ್ಲಿ ಕೇಂದ್ರದ 1700 ಕೋಟಿ ರೂ. ಹಾಗೂ ರಾಜ್ಯದ 1200 ಕೋಟಿ ರೂ. ಸೇರಿ 2900 ಕೋಟಿ ರೂ. ಲಭ್ಯವಿದ್ದು, ವಿಬಿಜಿ ರಾಮ್ ಜಿ ಅಡಿಯಲ್ಲಿ ಗ್ರಾಮೀಣ ಬಡವರಿಗೆ ಉದ್ಯೋಗ ಕಲ್ಪಿಸಲಾಗುತ್ತಿದೆ ಎಂದು ಈಶ್ವರ ಖಂಡ್ರೆ ಸ್ಪಷ್ಟಪಡಿಸಿದರು.

ಈ ಹಿಂದೆ ಮನ್ರೇಗಾದಡಿ ಕೇಂದ್ರ ಸರ್ಕಾರ 90ರಷ್ಟು ಅನುದಾನ ನೀಡುತ್ತಿತ್ತು. ರಾಜ್ಯ ಸರ್ಕಾರ ಕೇವಲ 10ರಷ್ಟು ಭರಿಸುತ್ತಿತ್ತು.

ಕಳೆದ 20 ವರ್ಷದಲ್ಲಿ 61 ಸಾವಿರ ಕೋಟಿ ರೂ. ವೆಚ್ಚ ಮಾಡಿ 182 ಕೋಟಿ ಮಾನವ ದಿನ ಸೃಷ್ಟಿಸಲಾಗಿತ್ತು. ಕೇಂದ್ರ ಸರ್ಕಾರ 56 ಸಾವಿರ ಕೋಟಿ ರೂ. ಭರಿಸಿದ್ದರೆ, ರಾಜ್ಯ ಸರ್ಕಾರ 4800 ಕೋಟಿ ರೂ. ಭರಿಸಿತ್ತು ಎಂದು ವಿವರಿಸಿದರು.

## ಚುನಾವಣಾ ಅಕ್ರಮದ ಬಗ್ಗೆ ಶೇ.100 ಖಚಿತ: ರಾಹುಲ್

1ನೇ ಪುಟದಿಂದ

ಚುನಾವಣಾ ಆಯೋಗದ ಆಂತರಿಕ ಕಾರ್ಯವೈಖರಿ ಕುರಿತು ವರದಿಯಾಗಿರುವ ಭಿನ್ನಾಭಿಪ್ರಾಯಗಳನ್ನೂ ರಾಹುಲ್ ಗಾಂಧಿ ಪ್ರಸ್ತಾಪಿಸಿದರು. ಚುನಾವಣಾ ಆಯುಕ್ತರಾದ ಸುಖಬೀರ್ ಸಿಂಗ್ ಸಂಧು ಮತ್ತು ವಿವೇಕ್ ಜೋಶಿ ಅವರು ಕಳೆದ 10 ತಿಂಗಳಲ್ಲಿ ಕನಿಷ್ಠ 14 ಬಾರಿ ಕೆಲವು ನಿರ್ಧಾರಗಳ ಕುರಿತು ಲಿಖಿತ ಆಕ್ಷೇಪ ವ್ಯಕ್ತಪಡಿಸಿದ್ದಾರೆ ಎಂಬ ವರದಿಯನ್ನು ಅವರು ಉಲ್ಲೇಖಿಸಿದರು.

ಮತದಾರರ ಪಟ್ಟಿಯ ಪರಿಷ್ಕರಣೆ, ಹೆಸರುಗಳ ಸೇರ್ಪಡೆ-ತೆಗೆದುಹಾಕುವಿಕೆ ಹಾಗೂ ಎಸ್‌ಐಆರ್ ಪ್ರಕ್ರಿಯೆಗೆ ಸಂಬಂಧಿಸಿದ ನಿರ್ಧಾರಗಳು ಪಾರದರ್ಶಕವಾಗಿರಬೇಕು ಎಂದು ರಾಹುಲ್ ಗಾಂಧಿ ಒತ್ತಾಯಿಸಿದರು. ಮತದಾರರ ಹಕ್ಕುಗಳನ್ನು ರಕ್ಷಿಸುವುದು ಚುನಾವಣಾ ಆಯೋಗದ ಸಾಂವಿಧಾನಿಕ ಜವಾಬ್ದಾರಿಯಾಗಿದ್ದು, ಈ ಪ್ರಕ್ರಿಯೆಯಲ್ಲಿ ಲೋಪವಾಗಿದ್ದರೆ ಹೊಣೆಗಾರಿಕೆಯನ್ನು ನಿಗದಿಪಡಿಸಬೇಕು ಎಂದು ಹೇಳಿದರು.

# ‘ತಮಿಳುನಾಡಿಗೆ ಕಾವೇರಿ ನೀರು; ನ್ಯಾಯಾಲಯದಲ್ಲಿ ಮೇಲ್ಮನವಿ’

**ತಮಿಳುನಾಡಿಗೆ ಕಾವೇರಿ ನೀರು ಬಿಡುವ ವಿಚಾರದಲ್ಲಿ ರಾಜ್ಯದ ನೀರಿನ ಪರಿಸ್ಥಿತಿ ಪರಿಶೀಲಿಸಿ, ನೀರಾವರಿ ಸಚಿವರೊಂದಿಗೆ ಚರ್ಚಿಸಿದ ಬಳಿಕ ಮುಂದಿನ ಕ್ರಮ ಕೈಗೊಳ್ಳಲಾಗುವುದು. ಅಗತ್ಯವಿದ್ದರೆ ನ್ಯಾಯಾಲಯದಲ್ಲಿ ಮೇಲ್ಮನವಿ ಸಲ್ಲಿಸಲಾಗುವುದು ಎಂದು ಡಿಸಿಎಂ ಡಿ.ಕೆ. ಶಿವಕುಮಾರ್ ಹೇಳಿದರು.**

● ವಿಕ್ರಮ ವಾಹಿನಿ । ಚಿತ್ರದುರ್ಗ

"ತಮಿಳುನಾಡಿಗೆ ಕಾವೇರಿ ನೀರು ಬಿಡುವ ವಿಚಾರವಾಗಿ ರಾಜ್ಯ ಸರ್ಕಾರ ನ್ಯಾಯಾಲಯದಲ್ಲಿ ಮೇಲ್ಮನವಿ ಸಲ್ಲಿಸಲಿದೆ" ಎಂದು ಡಿ ಕೆ ಶಿವಕುಮಾರ್ ತಿಳಿಸಿದರು. ಚಿತ್ರದುರ್ಗದ ಸಿರಿಗೆರೆ ಮಠದ ಹೆಲಿಪ್ಯಾಡ್ ಬಳಿ ಶಿವಕುಮಾರ್ ಅವರು ಮಾಧ್ಯಮಗಳಿಗೆ ಗುರುವಾರ ಪ್ರತಿಕ್ರಿಯೆ ನೀಡಿದರು.

“ನೀರಿದ್ದರೆ ಬಿಡುತ್ತೇವೆ. ಆದರೆ ನಮಗೂ ಒಳಹರಿವು ನಿಂತುಹೋಗಿದೆ. ಮಳೆ ಕೂಡ ನಿಂತಿದೆ. ಈ ವಿಚಾರದಲ್ಲಿ ನಮ್ಮ ಮೇಲೆ ಸಾಕಷ್ಟು ಒತ್ತಡವಿದೆ. ನೀರಿನ ಪರಿಸ್ಥಿತಿಯನ್ನು ಪರಿಶೀಲಿಸಿ, ನೀರಾವರಿ ಸಚಿವರೊಂದಿಗೆ ಚರ್ಚಿಸಿದ ಬಳಿಕ ಮುಂದಿನ ಕ್ರಮದ ಬಗ್ಗೆ ತಿಳಿಸುತ್ತೇನೆ" ಎಂದು ಹೇಳಿದರು.

**ರೈತರ ಹಿತ ಕಾಪಾಡುತ್ತೇವೆ:** "ರಾಜ್ಯದಲ್ಲಿ ಬರಗಾಲದ ಪರಿಸ್ಥಿತಿ ನಿರ್ಮಾಣವಾಗಿರುವ ಹಿನ್ನೆಲೆಯಲ್ಲಿ ರೈತರಿಗೆ ಯಾವ ರೀತಿಯಲ್ಲಿ ನೆರವು ನೀಡಬೇಕು ಹಾಗೂ ಕೇಂದ್ರ ಸರ್ಕಾರದಿಂದ ರಾಜ್ಯಕ್ಕೆ ಯಾವ ರೀತಿಯ ಸಹಕಾರ ಅಗತ್ಯವಿದೆ ಎಂಬುದರ ಕುರಿತು ರೂಪುರೇಷೆ ಸಿದ್ಧಪಡಿಸಬೇಕಾಗಿದೆ. ಈ ವಿಚಾರಗಳ ಕುರಿತು ವಿಧಾನಸಭೆಯಲ್ಲಿಯೂ ಚರ್ಚೆ ನಡೆದಿದೆ. ಸರ್ಕಾರ ಅಗತ್ಯ ಕ್ರಮಗಳ ಬಗ್ಗೆ ಚರ್ಚಿಸಲಿದೆ" ಎಂದರು.

"ಸರ್ವಪಕ್ಷ ನಿಯೋಗದೊಂದಿಗೆ ಕೇಂದ್ರ ಸರ್ಕಾರದ ಗಮನ ಸೆಳೆಯುವ ವಿಚಾರದಲ್ಲಿ ವಿರೋಧ ಪಕ್ಷದ ನಾಯಕರು ಸಹಕಾರ ನೀಡುತ್ತಿರುವುದಕ್ಕೆ ಅಭಿನಂದನೆ ಸಲ್ಲಿಸುತ್ತೇನೆ" ಎಂದರು.

"ಕಸ್ತೂರಿ ರಂಗನ್ ವರದಿ ಹಾಗೂ ಪಶ್ಚಿಮ ಘಟ್ಟಗಳ ಸಂರಕ್ಷಣೆಗೆ ಸಂಬಂಧಿಸಿದ ವಿಚಾರದಲ್ಲಿ ಮಲೆನಾಡು ಮತ್ತು ಕರಾವಳಿ ಭಾಗದ ಹಿತಾಸಕ್ತಿಯನ್ನು ಗಮನದಲ್ಲಿಟ್ಟುಕೊಂಡು ರಾಜ್ಯ ಸರ್ಕಾರ ಕೈಗೊಂಡಿರುವ ನಿರ್ಣಯಕ್ಕೆ ವಿವಿಧ ಪಕ್ಷಗಳ ನಾಯಕರು ಸಹಮತ ವ್ಯಕ್ತಪಡಿಸಿದ್ದಾರೆ. ಸರ್ಕಾರ ರೈತರ ಹಿತಕ್ಕಾಗಿ ಕೆಲಸ ಮಾಡುತ್ತಿದೆ. ನಮ್ಮ ಜವಾಬ್ದಾರಿಯನ್ನು ಅಚ್ಚುಕಟ್ಟಾಗಿ ನಿರ್ವಹಿಸಿದ್ದೇವೆ. ರಾಜ್ಯದ ಜನರು ನಮ್ಮ ಮೇಲೆ ನಂಬಿಕೆ ಇಟ್ಟಿದ್ದಾರೆ. ಆ ನಂಬಿಕೆ ಉಳಿಸಿಕೊಂಡು ಜನಹಿತ ಕಾಪಾಡುವ ಕೆಲಸ ಮಾಡುತ್ತಿದ್ದೇವೆ” ಎಂದು ಹೇಳಿದರು.



## ಗ್ಯಾರಂಟಿ ಯೋಜನೆಗಳು ಬಡವರ ಪರವಾಗಿವೆ

ಗ್ಯಾರಂಟಿ ಯೋಜನೆಗಳ ಪರಿಷ್ಕರಣೆ ಬಗ್ಗೆ ಬಿಜೆಪಿ ನಾಯಕರ ಹೇಳಿಕೆ ಬಗ್ಗೆ ಕೇಳಿದಾಗ, "ಗ್ಯಾರಂಟಿ ಯೋಜನೆಗಳನ್ನು ಪರಿಷ್ಕರಿಸಿ, ಸೌಲಭ್ಯಗಳನ್ನು ಬಡವರಿಗೆ ಮಾತ್ರ ನೀಡುವಂತೆ ಬಿಜೆಪಿ ಶಾಸಕ ಸುರೇಶ್ ಗೌಡ ಸೇರಿದಂತೆ ಕೆಲವು ವಿರೋಧ ಪಕ್ಷಗಳ ಶಾಸಕರು ಅಭಿಪ್ರಾಯ ವ್ಯಕ್ತಪಡಿಸಿದ್ದಾರೆ.

ಈ ಬಗ್ಗೆ ವಿವಿಧ ನಾಯಕರಿಗೆ ತಮ್ಮದೇ ಆದ ಅಭಿಪ್ರಾಯಗಳಿವೆ.

ಗ್ಯಾರಂಟಿ ಯೋಜನೆಗಳನ್ನು ಜಾರಿಗೆ ತರಲು ಸಾಧ್ಯವಿಲ್ಲ ಎಂದು ಪ್ರಧಾನಿ ನರೇಂದ್ರ ಮೋದಿ ಸೇರಿದಂತೆ ಬಿಜೆಪಿಯ ಹಲವು ಕೇಂದ್ರ ಸಚಿವರು ಹಾಗೂ ನಾಯಕರು ಈ ಹಿಂದೆ ಹೇಳಿದ್ದರೂ, ರಾಜ್ಯ ಸರ್ಕಾರ ಮಾತ್ರ ಬಡವರ ಪರವಾಗಿ ನೆರವು ನೀಡುವ ಕಾರ್ಯವನ್ನು ಮುಂದುವರಿಸಲಿದೆ" ಎಂದರು.

**ಕೆಪಿಎಸ್‌ಸಿ ಪರೀಕ್ಷೆ:** ಅರ್ಹರಿಗೆ ನ್ಯಾಯ ಸಿಗಬೇಕು

ಕೆಪಿಎಸ್ ಸಿ ವಿಚಾರವಾಗಿ ಕೇಳಿದ ಪ್ರಶ್ನೆಗೆ, "ಕೆಪಿಎಸ್‌ಸಿ ವಿಚಾರದಲ್ಲಿಯೂ ಹಲವು ಹಿರಿಯ ನಾಯಕರು ತಮ್ಮ ಅಭಿಪ್ರಾಯಗಳನ್ನು ಸರ್ಕಾರದ ಗಮನಕ್ಕೆ ತಂದಿದ್ದಾರೆ. ಉಗ್ರಪ್ಪ, ಬಿ ಎಲ್ ಶಂಕರ್, ಸುದರ್ಶನ್, ರಾಣಿ ಸತೀಶ್ ಸೇರಿದಂತೆ ಸುಮಾರು 20–30 ಮಂದಿ ನಾಯಕರು ಈ ಕುರಿತು ತಮ್ಮ ಅಭಿಪ್ರಾಯ ತಿಳಿಸಿದ್ದಾರೆ. ಮಾಜಿ ಮುಖ್ಯಮಂತ್ರಿ ಎಚ್.ಡಿ. ಕುಮಾರಸ್ವಾಮಿ ಅವರ ಹೇಳಿಕೆಯನ್ನೂ ಗಮನಿಸಿದ್ದೇನೆ" ಎಂದು ಹೇಳಿದರು.

"ಕೆಪಿಎಸ್‌ಸಿ ನೇಮಕಾತಿ ಹಾಗೂ ಪರೀಕ್ಷೆಗಳಿಗೆ ಸಂಬಂಧಿಸಿದಂತೆ ಕಾನೂನು ಚೌಕಟ್ಟನ್ನು ಪರಿಶೀಲಿಸಲಾಗುವುದು. ಪರೀಕ್ಷೆ ನಡೆಸುವ ಅಧಿಕಾರಿಗಳು ಹಾಗೂ ಸದಸ್ಯರು ಯಾವುದೇ ಒತ್ತಡಕ್ಕೆ ಒಳಗಾಗದೆ ವಿದ್ಯಾರ್ಥಿಗಳಿಗೆ ನ್ಯಾಯ ಒದಗಿಸುವುದು ಮುಖ್ಯ. ಒತ್ತಡಗಳನ್ನು ಮೀರಿ ಸ್ಪರ್ಧಾತ್ಮಕವಾಗಿ ಪರೀಕ್ಷೆ ಬರೆದು ಉತ್ತಮ ಅಂಕ ಗಳಿಸಿರುವವರಿಗೆ ನ್ಯಾಯ ಸಿಗಬೇಕು. ಪರೀಕ್ಷೆ ಮತ್ತು ಸಂದರ್ಶನವನ್ನು ಪರಿಶುದ್ಧವಾಗಿ ನಡೆಸುವುದು ಸಂಬಂಧಪಟ್ಟವರ ಜವಾಬ್ದಾರಿ. ಹಿಂದೆ ನಡೆದಿರುವ ಹಲವು ಘಟನೆಗಳ ಹಿನ್ನೆಲೆಯಲ್ಲಿ ಈ ಬಗ್ಗೆ ಕೆಲವರು ಸಲಹೆಗಳನ್ನು ನೀಡಿದ್ದಾರೆ. ಕಾನೂನು ಚೌಕಟ್ಟಿನಲ್ಲಿ ಎಲ್ಲವನ್ನೂ ಪರಿಶೀಲಿಸಿ ಮುಂದಿನ ನಿರ್ಧಾರ ಕೈಗೊಳ್ಳಲಾಗುವುದು” ಎಂದು ಹೇಳಿದರು. "ವಿಧಾನ ಪರಿಷತ್ ಚುನಾವಣೆ ಇರುವ ಕಾರಣಕ್ಕೆ ಚುನಾವಣಾ ಆಯೋಗ ದಿನಾಂಕ ನಿಗದಿಪಡಿಸಿದೆ. ಈ ಹಿನ್ನೆಲೆಯಲ್ಲಿ ಸರ್ಕಾರಿ ಕಾರ್ಯಕ್ರಮಗಳನ್ನು ರದ್ದುಪಡಿಸಲಾಗಿದೆ. ಹಿರಿಯೂರು ಹಾಗೂ ಚಿತ್ರದುರ್ಗ ಭಾಗದಲ್ಲಿ ನಡೆದಿರುವ ಭದ್ರಾ ಮೇಲ್ದಂಡೆ ಕಾಮಗಾರಿಗಳು ಮತ್ತು ನೀರು ಹರಿಸಿದ ಹಿನ್ನೆಲೆಯಲ್ಲಿ ರೈತರು ಅಭಿನಂದನಾ ಕಾರ್ಯಕ್ರಮ ಆಯೋಜಿಸಿದ್ದರು" ಎಂದರು.

# *3 ನಿಮಿಷದಲ್ಲಿ 56 ಪಾನಿಪೂರಿ; 30 ನಿಮಿಷದಲ್ಲಿ 1.7 ಕೆಜಿ ಲಡ್ಡು ಸೇವಿಸಿ ದಾಖಲೆ*

● ವಿಕ್ರಮ ವಾಹಿನಿ । *ರಾಜ್‌ಕೋಟ್ (ಗುಜರಾತ್)*

*ಗಣೇಶೋತ್ಸವದ ಅಂಗವಾಗಿ ನಡೆದ ಪಾನಿಪೂರಿ ಹಾಗೂ ಲಡ್ಡು ತಿನ್ನುವ ಸ್ಪರ್ಧೆಯಲ್ಲಿ ಮಹಿಳೆಯೊಬ್ಬರು ಮೂರು ನಿಮಿಷಗಳಲ್ಲಿ 56 ಪಾನಿಪೂರಿ ತಿಂದು ಗಮನ ಸೆಳೆದರೆ, 70 ವರ್ಷದ ಹಿರಿಯರೊಬ್ಬರು 30 ನಿಮಿಷಗಳಲ್ಲಿ 1.7 ಕೆಜಿ ತೂಕದ 17 ಲಡ್ಡುಗಳನ್ನು ಸೇವಿಸಿ ಅಚ್ಚರಿ ಮೂಡಿಸಿದ್ದಾರೆ. ರಾಜ್‌ಕೋಟ್‌ನ ರೇಸ್‌ಕೋರ್ಸ್ ಮೈದಾನದಲ್ಲಿ ಸಿದ್ಧಿ ವಿನಾಯಕ ಧಾಮ ಗಣೇಶ ಮಹೋತ್ಸವದ ಅಂಗವಾಗಿ ಈ ವಿಶಿಷ್ಟ ಸ್ಪರ್ಧೆ ಆಯೋಜಿಸಲಾಗಿತ್ತು.*

*ಮಹಿಳೆಯರಿಗಾಗಿ ಆಯೋಜಿಸಿದ್ದ ಪಾನಿಪೂರಿ ತಿನ್ನುವ ಸ್ಪರ್ಧೆಯಲ್ಲಿ ನೇಹಾಬೆನ್ ಕೇವಲ ಮೂರು ನಿಮಿಷಗಳಲ್ಲಿ 56 ಪಾನಿಪೂರಿ ತಿಂದು ಪ್ರಥಮ ಸ್ಥಾನ ಪಡೆದರು. ಸರ್ಪದಲ್ ಗ್ರಾಮದ 70 ವರ್ಷದ ಗೋವಿಂದಭಾಯಿ ಲುನಗಾರಿಯಾ ಲಡ್ಡು ತಿನ್ನುವ ಪುರುಷರ ವಿಭಾಗದಲ್ಲಿ ಪ್ರಥಮ ಸ್ಥಾನ ಪಡೆದರು. 50 ಕೆಜಿ ತೂಕದ ಅವರು 30 ನಿಮಿಷಗಳಲ್ಲಿ ತಲಾ 100 ಗ್ರಾಂ ತೂಕದ 17 ಲಡ್ಡುಗಳನ್ನು, ಅಂದರೆ ಒಟ್ಟು 1.7 ಕೆಜಿ ಲಡ್ಡುಗಳನ್ನು ಸೇವಿಸಿದರು. ತಮ್ಮ ಸಾಮರ್ಥ್ಯಕ್ಕೆ ಗಣಪತಿ ಬಪ್ಪನ ಮೇಲಿನ ನಂಬಿಕೆಯೇ ಕಾರಣ ಎಂದು ಅವರು ಹೇಳಿದ್ದಾರೆ. ಮಹಿಳೆಯರ ಲಡ್ಡು ತಿನ್ನುವ ಸ್ಪರ್ಧೆಯಲ್ಲಿ 44 ವರ್ಷದ ಸಾವಿತ್ರಿಬೆನ್ ಯಾದವ್ ಹಾಗೂ ಅವರ 23 ವರ್ಷದ ಮಗಳು ಕೋಮಲ್‌ಬೆನ್ ಜಂಟಿಯಾಗಿ ಪ್ರಥಮ ಸ್ಥಾನ ಪಡೆದರು. ಇಬ್ಬರೂ ತಲಾ 11 ಲಡ್ಡುಗಳನ್ನು ಸೇವಿಸಿದರು. ಕಳೆದ ಆರು ವರ್ಷಗಳಿಂದ ಈ ಸ್ಪರ್ಧೆಯಲ್ಲಿ ನಿರಂತರವಾಗಿ ಗೆಲುವು ಸಾಧಿಸುತ್ತಿರುವ ಸಾವಿತ್ರಿಬೆನ್, ಈ ಬಾರಿ ತಮ್ಮ ಮಗಳೂ ಚಾಂಪಿಯನ್ ಆಗಿರುವುದಕ್ಕೆ ಸಂತಸ ವ್ಯಕ್ತಪಡಿಸಿದರು.*

# ಭದ್ರಾ ನೀರು ಹರಿಸಿ ರೈತರ ಬದುಕು ಸುಭದ್ರ ಮಾಡಿದ್ದೇವೆ: ಡಿ.ಕೆ. ಶಿವಕುಮಾರ್

● ವಿಕ್ರಮ ವಾಹಿನಿ । ಚಿತ್ರದುರ್ಗ

ಭದ್ರಾ ನದಿ ನೀರನ್ನು ಹರಿಸುವ ಮೂಲಕ ಚಿತ್ರದುರ್ಗ ಭಾಗದ ರೈತರ 60 ವರ್ಷಗಳ ಕನಸನ್ನು ನನಸಾಗಿಸುವತ್ತ ಹೆಜ್ಜೆ ಇಟ್ಟಿದ್ದೇವೆ. ಪಂಚ ಗ್ಯಾರಂಟಿಗಳ ಜತೆಗೆ ರಾಜ್ಯದ ರೈತರಿಗೆ ಭೂಮಿ ಮತ್ತು ನೀರಿನ ಗ್ಯಾರಂಟಿಯನ್ನೂ ನೀಡಲು ಕಾಂಗ್ರೆಸ್ ಸರ್ಕಾರ ಬದ್ಧವಾಗಿದೆ ಎಂದು ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಹೇಳಿದರು.

ಚಿತ್ರದುರ್ಗದ ಮಾದಾರ ಚನ್ನಯ್ಯ ಗುರುಪೀಠದ ಪಕ್ಕದ ಮೈದಾನದಲ್ಲಿ ಗುರುವಾರ ನಡೆದ ರೈತರ ಅಭಿನಂದನಾ ಸಮಾರಂಭದಲ್ಲಿ ಮಾತನಾಡಿದ ಅವರು, ಬಯಲುಸೀಮೆಯ ಕೆರೆಗಳನ್ನು ತುಂಬಿಸುವುದು ತಮ್ಮ ಸಂಕಲ್ಪವಾಗಿದೆ. ರೈತರ ಶ್ರಮಕ್ಕೆ ಬೆಲೆ ಕಟ್ಟಲು ಸಾಧ್ಯವಿಲ್ಲ. ರೈತ ನಕ್ಕರೆ ಇಡೀ ನಾಡು ನಗುತ್ತದೆ. ಅನ್ನದಾತರ ಭವಿಷ್ಯವನ್ನು ಭದ್ರಪಡಿಸುವುದು ಸರ್ಕಾರದ ಗುರಿ ಎಂದರು.

**ಕೇಂದ್ರ ಅನುದಾನದ ವಿಚಾರದಲ್ಲಿ ಬಿಜೆಪಿ ವಿರುದ್ಧ ಟೀಕೆ**

ಭದ್ರಾ ಮೇಲ್ದಂಡೆ ಯೋಜನೆಗೆ ಕೇಂದ್ರದಿಂದ ಅನುದಾನ ತರಲು ಹಿಂದಿನ ಬಿಜೆಪಿ ಸರ್ಕಾರ ವಿಫಲವಾಗಿದೆ ಎಂದು ಆರೋಪಿಸಿದ ಶಿವಕುಮಾರ್, ಬಿ.ಎಸ್. ಯಡಿಯೂರಪ್ಪ, ಬಸವರಾಜ ಬೊಮ್ಮಾಯಿ, ಗೋವಿಂದ ಕಾರಜೋಳ, ಆರ್. ಅಶೋಕ ಹಾಗೂ ಬಿ.ವೈ. ವಿಜಯೇಂದ್ರ ಅವರನ್ನು ಉಲ್ಲೇಖಿಸಿ ಟೀಕಿಸಿದರು.



ಕೇಂದ್ರ ಹಾಗೂ ರಾಜ್ಯ ಬಜೆಟ್‌ನಲ್ಲಿ ಯೋಜನೆಗೆ 5,400 ಕೋಟಿ ಘೋಷಣೆಯಾಗಿದ್ದರೂ ನಿರೀಕ್ಷಿತ ಅನುದಾನ ದೊರೆಯಲಿಲ್ಲ ಎಂದು ಹೇಳಿದರು.

ನಿಜಲಿಂಗಪ್ಪ ಅವರು ಕಂಡ ಭದ್ರಾ ಯೋಜನೆಯ ಕನಸಿಗೆ ಹಲವು ನಾಯಕರು ಕೊಡುಗೆ ನೀಡಿದ್ದಾರೆ. ಈಗ ಚಿತ್ರದುರ್ಗ ಭಾಗದ ಕೆರೆಗಳನ್ನು ತುಂಬಿಸುವತ್ತ ಸರ್ಕಾರ ಗಮನಹರಿಸಲಿದೆ.

ಕ್ಷೇತ್ರದ ಶಾಸಕರು ಹಾಗೂ ವಿವಿಧ ಮುಖಂಡರು ನೀಡಿರುವ ಬೇಡಿಕೆಗಳನ್ನು ಪರಿಗಣಿಸಲಾಗುವುದು ಎಂದು ಭರವಸೆ ನೀಡಿದರು.

**ಭದ್ರಾ ಯೋಜನೆಯ ಭಾಗಕ್ಕೆ ಸುಧಾಕರ್ ಹೆಸರು**

ಮಾಜಿ ಸಚಿವ ಡಿ. ಸುಧಾಕರ್ ಅವರ ಕೊಡುಗೆಯನ್ನು ಸ್ಮರಿಸಿದ ಮುಖ್ಯಮಂತ್ರಿ, ಭದ್ರಾ ಯೋಜನೆಯ ಒಂದು ಭಾಗಕ್ಕೆ ಅವರ ಹೆಸರಿಡುವಂತೆ ಬೇಡಿಕೆ ಬಂದಿದ್ದು, ಈ ಕುರಿತು ಮುಂದಿನ ದಿನಗಳಲ್ಲಿ ಚರ್ಚಿಸಲಾಗುವುದು ಎಂದರು. ಸುಧಾಕರ್ ಅವರ ಕನಸನ್ನು ಮುಂದುವರಿಸುವುದು ತಮ್ಮ ಕರ್ತವ್ಯವಾಗಿದೆ ಎಂದು ಹೇಳಿದರು.

ರೈತರಿಗಾಗಿ ಸಣ್ಣ ರೈತರಿಗೆ ನೆರವಾಗುವ ‘ತೇಗದ ಸಿರಿ’, ಬಡ ರೈತರ ಹೊಲ ಉಳುಮೆಗೆ ನೆರವು ಹಾಗೂ ಮುಖ್ಯಮಂತ್ರಿ ರೈತ ಚೈತನ್ಯ ಸೇರಿದಂತೆ ಹಲವು ಯೋಜನೆಗಳನ್ನು ಘೋಷಿಸಲಾಗಿದೆ. ಐದು ಗ್ಯಾರಂಟಿ ಯೋಜನೆಗಳನ್ನು ಮುಂದುವರಿಸಲಾಗುವುದು ಎಂದು ತಿಳಿಸಿದರು.

**ರೈತರ ನೀರಿನ ಹಕ್ಕು ರಕ್ಷಣೆ:** ರಾಜ್ಯದ ಪಾಲಿನ ಒಂದು ಹನಿ ನೀರೂ ಅನ್ಯ ರಾಜ್ಯಗಳ ಪಾಲಾಗದಂತೆ ಸರ್ಕಾರ ಕ್ರಮ ವಹಿಸಲಿದೆ. ನದಿ ಜೋಡಣೆ, ತುಂಗಭದ್ರಾ, ಕೃಷ್ಣಾ ಹಾಗೂ ಮಹದಾಯಿ ಸೇರಿದಂತೆ ವಿವಿಧ ನೀರಾವರಿ ಯೋಜನೆಗಳನ್ನು ರೈತರ ಹಿತಕ್ಕಾಗಿ ಬಳಸಿಕೊಳ್ಳಲಾಗುವುದು ಎಂದು ಶಿವಕುಮಾರ್ ಹೇಳಿದರು.

ರೈತರು ಬೀಜ ಬಿತ್ತುವುದರ ಜತೆಗೆ ರಾಜ್ಯದ ಭವಿಷ್ಯವನ್ನೂ ಬೆಳೆಸುತ್ತಿದ್ದಾರೆ. ಕೃಷಿ ಪಂಪ್‌ಸೆಟ್‌ಗಳಿಗೆ ಉಚಿತ ವಿದ್ಯುತ್‌ಗಾಗಿ ಸರ್ಕಾರ 24 ಸಾವಿರ ಕೋಟಿ ವೆಚ್ಚ ಮಾಡುತ್ತಿದೆ. ರೈತರ ಬದುಕಿನಲ್ಲಿ ಬದಲಾವಣೆ ತರಲು ಸರ್ಕಾರ ಹಲವು ಕಾರ್ಯಕ್ರಮಗಳನ್ನು ಜಾರಿಗೊಳಿಸಿದೆ ಎಂದು ಹೇಳಿದರು.

ಅಧಿಕಾರ ಶಾಶ್ವತವಲ್ಲ, ಆದರೆ ಸಾಧನೆಗಳು ಉಳಿಯುತ್ತವೆ. ರೈತರ ಬದುಕು ಸುಧಾರಿಸುವುದೇ ಸರ್ಕಾರದ ಮುಖ್ಯ ಗುರಿಯಾಗಿದ್ದು, ಅನ್ನದಾತರೊಂದಿಗೆ ಸರ್ಕಾರ ಸದಾ ನಿಲ್ಲಲಿದೆ ಎಂದು ಮುಖ್ಯಮಂತ್ರಿ ಹೇಳಿದರು.

# ಯಡಿಯೂರಪ್ಪ ಪರವಾಗಿದ್ದಕ್ಕೆ ರಾಧಾಮೋಹನ್ ದಾಸ್ ಬದಲು: ಯತ್ನಾಳ್

● ವಿಕ್ರಮ ವಾಹಿನಿ । ಬೆಂಗಳೂರು

ಬಿಜೆಪಿ ಹೈಕಮಾಂಡ್ ರಾಜ್ಯ ಉಸ್ತುವಾರಿಯಾಗಿದ್ದ ರಾಧಮೋಹನ್ ದಾಸ್ ಅಗರ್ವಾಲ್ ಅವರಿಗೆ ಕೊಕ್ ನೀಡಿ, ಹರೀಶ್ ದ್ವಿವೇದಿ ಅವರನ್ನು ರಾಜ್ಯ ಬಿಜೆಪಿ ನೂತನ ಉಸ್ತುವಾರಿಯಾಗಿ ನೇಮಕ ಮಾಡಿದೆ. ರಾಧಮೋಹನ್ ದಾಸ್ ಅವರ ಬದಲಾವಣೆ ಬಗ್ಗೆ ಪ್ರತಿಕ್ರಿಯಿಸಿದ ಬಿಜೆಪಿ ಉಚ್ಚಾಟಿತ ಮತ್ತು ಹಿರಿಯ ಶಾಸಕ ಬಸನಗೌಡ ಪಾಟೀಲ್ ಯತ್ನಾಳ್ ಅವರು, ಲೇಟ್ ಆದರೂ, ಬಿಜೆಪಿ ಹೈಕಮಾಂಡ್ ನಿರ್ಧಾರ ಸರಿಯಾಗಿಯೇ ಇದೆ ಎಂದು ಹೇಳಿದ್ದಾರೆ.



ನನ್ನ ಪ್ರಕಾರ, ರಾಧಾ ಮೋಹನದಾಸ್ ಅವರನ್ನು ಬದಲಾಯಿಸಿರುವುದಕ್ಕೆ ಎರಡು ಕಾರಣಗಳು ಇರಬಹುದು. ಲೇಟ್ ಆದರೂ, ಬಿಜೆಪಿ ಹೈಕಮಾಂಡ್ ನಿರ್ಧಾರ ಸರಿಯಾಗಿಯೇ ಇದೆ. ಅಧಿವೇಶನದ ಒಳಗೆ ಮತ್ತು ಹೊರಗೆ, ವಿಜಯೇಂದ್ರ ಹಾಗೂ ಆರ್.ಅಶೋಕ್ ನಡೆಸುತ್ತಿರುವ ಪ್ರತಿಭಟನೆಯು ಕೇವಲ ಐವಾಷ್, ಸಿಎಂ ಡಿಕೆ ಶಿವಕುಮಾರ್ ಅವರ ಅಣತಿಯಂತೆ ಇವರಿಬ್ಬರು ಕೆಲಸ ಮಾಡುತ್ತಿದ್ದಾರೆ ಎಂದು ಆರೋಪಿಸಿದ್ದಾರೆ.

ವಿಜಯೇಂದ್ರ ಜೊತೆ ಅವರದ್ದು ಹೊಂದಾಣಿಕೆ ರಾಜಕೀಯ ನಡೆಯುತ್ತಿತ್ತು, ಅದಕ್ಕಾಗಿ ಬದಲಾವಣೆ ಮಾಡಿರಬಹುದು. "ರಾಧಾ ಮೋಹನದಾಸ್ ಅಗರ್ವಾಲ್ ಅವರನ್ನು ಉಸ್ತುವಾರಿಯಿಂದ ಇಳಿಸಿರುವುದಕ್ಕೆ ಮೊದಲ ಕಾರಣ ನನ್ನ ಪ್ರಕಾರ, ಅವರು ಒನ್‌ಸೈಡೆಡ್ ಆಗಿ ಕೆಲಸ ಮಾಡುತ್ತಿದ್ದರು. ಆರಂಭದಲ್ಲಿ ಅವರು ನ್ಯೂಟ್ರಲ್ ಆಗಿದ್ದರು, ಎಲ್ಲರ ಅಭಿಪ್ರಾಯವನ್ನು ಅವರು ಆಲಿಸುತ್ತಿದ್ದರು. ಆದರೆ, ಇತ್ತೀಚಿನ ದಿನಗಳಲ್ಲಿ ಅವರು ಸಂಪೂರ್ಣವಾಗಿ ಯಡಿಯೂರಪ್ಪ ಕುಟುಂಬದ ಬೆಂಬಲಕ್ಕೆ ನಿಂತಿದ್ದರು. ಇದು ಬಿಜೆಪಿ ಕಾರ್ಯಕರ್ತರಿಗೆ ಮತ್ತು ಸಾಕಷ್ಟು ಮುಖಂಡರಿಗೆ ಬೇಸರವನ್ನು ತಂದೊಡ್ಡಿತ್ತು" ಎಂದು ಬಸನಗೌಡ ಪಾಟೀಲ್ ಯತ್ನಾಳ್ ತಿಳಿಸಿದ್ದಾರೆ.

ಇನ್ನು ಎರಡನೇ ಕಾರಣ, ವಿಜಯೇಂದ್ರ ಪರವಾಗಿ, ರಾಧಾ ಮೋಹನದಾಸ್ ಕೆಲಸ ಮಾಡುತ್ತಿದ್ದಾರೆ ಎನ್ನುವ ಮಾತು, ಬಿಜೆಪಿ ವರಿಷ್ಠರಿಗೂ ತಲುಪಿರಬೇಕು, ಅದಕ್ಕಾಗಿ ಅವರನ್ನು ಬದಲಾಯಿಸಿರಬಹುದು ಎನ್ನುವುದು ನನ್ನ ಅಭಿಪ್ರಾಯ ಎಂದು ಯತ್ನಾಳ್ ಹೇಳಿದ್ದಾರೆ.



ನೈಸ್ ಯೋಜನೆಯಿಂದ ದಶಕಗಳಿಂದ ಭೂಮಿ ಕಳೆದುಕೊಂಡು ಸೂಕ್ತ ಪರಿಹಾರ ಸಿಗದೆ ಸಂಕಷ್ಟದಲ್ಲಿರುವ ಸಂತ್ರಸ್ತ ರೈತರು ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ. ವಿಜಯೇಂದ್ರ ಅವರನ್ನು ಭೇಟಿಯಾಗಿ ತಮ್ಮ ಅಳಲು ತೋಡಿಕೊಂಡರು. ರೈತರ ಸಮಸ್ಯೆ ಪರಿಹರಿಸುವಲ್ಲಿ ರಾಜ್ಯ ಸರ್ಕಾರ ವಿಫಲವಾಗಿದೆ ಎಂದು ಆರೋಪಿಸಿದ ವಿಜಯೇಂದ್ರ, ನೈಸ್ ಕಂಪನಿಯ ಅಕ್ರಮಗಳ ಕುರಿತು ತುರ್ತು ಕ್ರಮ ಕೈಗೊಂಡು ಸಂತ್ರಸ್ತ ರೈತರಿಗೆ ನ್ಯಾಯ ಒದಗಿಸಬೇಕು ಎಂದು ಆಗ್ರಹಿಸಿದರು.

# ‘ರೈತರಿಗೆ ಪರಿಹಾರ ನೀಡಲಾಗದಿದ್ದರೆ ವಿಧಾನಸಭೆ ವಿಸರ್ಜಿಸಿ ಚುನಾವಣೆ ಎದುರಿಸಿ’

● ವಿಕ್ರಮ ವಾಹಿನಿ । ಬೆಂಗಳೂರು

ರೈತರಿಗೆ ಸಮರ್ಪಕ ಪರಿಹಾರ ನೀಡಲು ಸಾಧ್ಯವಾಗದಿದ್ದರೆ ವಿಧಾನಸಭೆ ವಿಸರ್ಜಿಸಿ ಚುನಾವಣೆ ಎದುರಿಸಲಿ ಎಂದು ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ. ವಿಜಯೇಂದ್ರ ರಾಜ್ಯ ಸರ್ಕಾರಕ್ಕೆ ಸವಾಲು ಹಾಕಿದರು.

ನಗರದಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ರೈತರ ಸಮಸ್ಯೆಗಳಿಗೆ ಸ್ಪಂದಿಸುವಲ್ಲಿ ರಾಜ್ಯ ಸರ್ಕಾರ ವಿಫಲವಾಗಿದೆ ಎಂದು ಆರೋಪಿಸಿದರು. ಕನಕಪುರದಲ್ಲಿ ವಿಮಾನ ನಿಲ್ದಾಣ, ಸುರಂಗ ರಸ್ತೆ ಹಾಗೂ ಬಿಡದಿ ಟೌನ್‌ಶಿಪ್ ಯೋಜನೆಗಳಿಗೆ ತೋರುವ ಉತ್ಸಾಹವನ್ನು ರೈತರ ಸಮಸ್ಯೆ ಪರಿಹರಿಸುವಲ್ಲಿಯೂ ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ತೋರಿಸಬೇಕು ಎಂದರು.

**ಭದ್ರಾ ಯೋಜನೆ: ಬಿಜೆಪಿಗೆ ಶ್ರೇಯಸ್ಸು:** ಭದ್ರಾ ಮೇಲ್ದಂಡೆ ಯೋಜನೆಗೆ ಮಾಜಿ ಮುಖ್ಯಮಂತ್ರಿಗಳಾದ ಬಿ.ಎಸ್. ಯಡಿಯೂರಪ್ಪ ಹಾಗೂ ಬಸವರಾಜ ಬೊಮ್ಮಾಯಿ ನೇತೃತ್ವದ ಬಿಜೆಪಿ ಸರ್ಕಾರಗಳು ಪ್ರಮುಖ ಕೊಡುಗೆ ನೀಡಿವೆ ಎಂದು ವಿಜಯೇಂದ್ರ ಹೇಳಿದರು. ಯಡಿಯೂರಪ್ಪ ಅವರು ಯೋಜನೆಗೆ 700 ಕೋಟಿ ನೀಡುವ ಮೂಲಕ ಚಾಲನೆ ನೀಡಿದ್ದು, ಬಿಜೆಪಿ ಸರ್ಕಾರದ ಅವಧಿಯಲ್ಲಿ ಸುಮಾರು 11,500 ಕೋಟಿ ಅನುದಾನ ನೀಡಲಾಗಿದೆ. ಹೀಗಾಗಿ ಯೋಜನೆಯ ಯಶಸ್ಸಿನ ಶ್ರೇಯಸ್ಸು ಬಿಜೆಪಿಗೆ ಸಲ್ಲಬೇಕು ಎಂದು ಪ್ರತಿಪಾದಿಸಿದರು.

ಚಿತ್ರದುರ್ಗದ ಗೋನೂರು ಕೆರೆ ತುಂಬಿದ ಹಿನ್ನೆಲೆಯಲ್ಲಿ ಮುಖ್ಯಮಂತ್ರಿ ಬಾಗಿನ ಅರ್ಪಿಸಿ ರೈತರಿಂದ ಸನ್ಮಾನ ಸ್ವೀಕರಿಸುವ ಬದಲು ಯೋಜನೆಗೆ ಕೊಡುಗೆ ನೀಡಿದ ಹಿಂದಿನ ಸರ್ಕಾರಗಳ ನಾಯಕರನ್ನು ಸ್ಮರಿಸಬೇಕಿತ್ತು ಎಂದು ಹೇಳಿದರು.



**ರೈತರಿಗೆ ಪರಿಹಾರ ನೀಡಲು ಸಾಧ್ಯವಾಗ ದಿದ್ದರೆ ವಿಧಾನಸಭೆ ವಿಸರ್ಜಿಸಿ ಚುನಾವಣೆ ಎದುರಿಸಲಿ ಎಂದು ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ. ವಿಜಯೇಂದ್ರ ರಾಜ್ಯ ಸರ್ಕಾರಕ್ಕೆ ಸವಾಲು ಹಾಕಿದರು. ಭದ್ರಾ ಮೇಲ್ದಂಡೆ ಯೋಜನೆಗೆ ಬಿಜೆಪಿ ಸರ್ಕಾರ 11,500 ಕೋಟಿ ಅನುದಾನ ನೀಡಿದ್ದು, ಯೋಜನೆಯ ಯಶಸ್ಸಿನ ಶ್ರೇಯಸ್ಸು ಬಿಜೆಪಿಗೆ ಸಲ್ಲಬೇಕು ಎಂದು ಹೇಳಿದರು. ರಾಜ್ಯದ ಆರ್ಥಿಕ ಸ್ಥಿತಿ ಕುರಿತು ಶ್ವೇತಪತ್ರ ಹೊರಡಿಸುವಂತೆ ಹಾಗೂ ಬರ ಘೋಷಣೆಯ ಜತೆಗೆ ರೈತರಿಗೆ ತಕ್ಷಣ ಪರಿಹಾರ ನೀಡುವಂತೆ ಆಗ್ರಹಿಸಿದರು.**

**ರೈತರ ಜಮೀನು ಸ್ವಾಧೀನಕ್ಕೆ ವಿರೋಧ:** ಶಿಕಾರಿಪುರ, ಶಿರಾಳಕೊಪ್ಪ ಸೇರಿದಂತೆ ವಿವಿಧೆಡೆ ಸ್ಥಳೀಯ ಜನಪ್ರತಿನಿಧಿಗಳ ಗಮನಕ್ಕೂ ತರದೆ ರಿಂಗ್‌ರೋಡ್ ನಿರ್ಮಾಣಕ್ಕಾಗಿ ಫಲವತ್ತಾದ ಕೃಷಿ ಜಮೀನುಗಳನ್ನು ಸ್ವಾಧೀನಪಡಿಸಿಕೊಳ್ಳಲು ಸರ್ಕಾರ ಮುಂದಾಗಿದೆ ಎಂದು ವಿಜಯೇಂದ್ರ ಆರೋಪಿಸಿದರು. ಬಿಡದಿಯಲ್ಲಿ ರೈತರು ಈಗಾಗಲೇ ಪ್ರತಿಭಟನೆ ನಡೆಸುತ್ತಿದ್ದಾರೆ.

**ಆರ್ಥಿಕ ಸ್ಥಿತಿ ಕುರಿತು ಶ್ವೇತಪತ್ರಕ್ಕೆ ಆಗ್ರಹ:** ಆರ್ಥಿಕ ಇಲಾಖೆ ಸರ್ಕಾರಕ್ಕೆ ಬರೆದಿರುವ ಪತ್ರ ಕಾಟಾಚಾರದ ದಾಖಲೆಯಲ್ಲ. ಅದು ರಾಜ್ಯದ ಹಣಕಾಸಿನ ವಾಸ್ತವ ಸ್ಥಿತಿಯನ್ನು ಪ್ರತಿಬಿಂಬಿಸುತ್ತದೆ ಎಂದು ವಿಜಯೇಂದ್ರ ಹೇಳಿದರು. ಕಳೆದ ಮೂರು ವರ್ಷಗಳಲ್ಲಿ ಸರ್ಕಾರ 4 ಲಕ್ಷ ಕೋಟಿಗೂ ಹೆಚ್ಚು ಸಾಲ ಮಾಡಿದೆ ಎಂದು ಆರೋಪಿಸಿದ ಅವರು, ವಿಶೇಷಚೇತನರ ಪಿಂಚಣಿ, ಹಾಲಿನ ಪ್ರೋತ್ಸಾಹಧನ ಸೇರಿದಂತೆ ವಿವಿಧ ಬಾಕಿ ಪಾವತಿಗಳ ಸಮಸ್ಯೆ ಎದುರಾಗಿದೆ ಎಂದರು.

**ಬರ ಘೋಷಣೆ ಮಾತ್ರ ಸಾಲದು:** ಬರಪೀಡಿತ ತಾಲೂಕುಗಳನ್ನು ಘೋಷಿಸುವುದರಿಂದ ಮಾತ್ರ ರೈತರ ಸಮಸ್ಯೆ ಬಗೆಹರಿಯುವುದಿಲ್ಲ. ಬರ ಪರಿಹಾರಕ್ಕಾಗಿ ರಾಜ್ಯ ಸರ್ಕಾರ ತನ್ನ ಪಾಲಿನ ಹಣವನ್ನು ತಕ್ಷಣ ಬಿಡುಗಡೆ ಮಾಡಬೇಕು ಎಂದು ವಿಜಯೇಂದ್ರ ಆಗ್ರಹಿಸಿದರು.

ಹಿಂದಿನ ಬಿಜೆಪಿ ಸರ್ಕಾರದ ಅವಧಿಯಲ್ಲಿ ಪ್ರಕೃತಿ ವಿಕೋಪದ ಸಂದರ್ಭಗಳಲ್ಲಿ ಕೇಂದ್ರದ ನೆರವಿಗಾಗಿ ಕಾಯದೆ ರಾಜ್ಯದಿಂದಲೇ ಪರಿಹಾರ ಒದಗಿಸಲಾಗಿತ್ತು ಎಂದು ಹೇಳಿದರು.

**ಸಚಿವರ ಹೇಳಿಕೆಗಳ ವಿರುದ್ಧ ಕ್ರಮಕ್ಕೆ ಆಗ್ರಹ:** ಆಡಳಿತ ಪಕ್ಷದ ಕೆಲ ಸಚಿವರು ಹಾಗೂ ಶಾಸಕರು ಪ್ರತಿಪಕ್ಷದ ನಾಯಕರು ಮತ್ತು ಶಾಸಕರ ವಿರುದ್ಧ ಅವಾಚ್ಯ ಶಬ್ದಗಳನ್ನು ಬಳಸುತ್ತಿದ್ದಾರೆ ಎಂದು ವಿಜಯೇಂದ್ರ ಆರೋಪಿಸಿದರು. ಸಚಿವ ಎಸ್.ಎಸ್. ಮಲ್ಲಿಕಾರ್ಜುನ ಹಾಗೂ ಶಾಸಕ ಪ್ರದೀಪ್ ಈಶ್ವರ್ ಅವರ ಹೇಳಿಕೆಗಳ ಕುರಿತು ಮುಖ್ಯಮಂತ್ರಿ ಮತ್ತು ಗೃಹ ಸಚಿವರು ಸ್ವಯಂಪ್ರೇರಿತವಾಗಿ ಪ್ರಕರಣ ದಾಖಲಿಸಿ ಕಾನೂನು ಕ್ರಮ ಕೈಗೊಳ್ಳಬೇಕು ಎಂದು ಒತ್ತಾಯಿಸಿದರು.

# ಪತಿಯ ಪ್ರೇಯಸಿ ‘ಸಂಬಂಧಿ’ ಅಲ್ಲ: ಹೈಕೋರ್ಟ್



● ವಿಕ್ರಮ ವಾಹಿನಿ । ಬೆಂಗಳೂರು

“ವಿವಾಹಿತ ಪುರುಷನ ಪ್ರೇಯಸಿಯನ್ನು ಆತನ ಕುಟುಂಬದ ಸದಸ್ಯೆ ಅಥವಾ ಸಂಬಂಧಿ ಎಂದು ಪರಿಗಣಿಸಲಾಗದು” ಎಂದು ಕರ್ನಾಟಕ ಹೈಕೋರ್ಟ್ ಪ್ರಕರಣವೊಂದರಲ್ಲಿ ಈಚೆಗೆ ಪುನರುಚ್ಚರಿಸಿದೆ.

ತನ್ನ ವಿರುದ್ಧ ದಾಖಲಿಸಿರುವ ಎಫ್‌ಐಆರ್ ಮತ್ತು ಇದಕ್ಕೆ ಸಂಬಂಧಿಸಿದಂತೆ ಬೆಂಗಳೂರಿನ 6ನೇ ಹೆಚ್ಚುವರಿ ಚೀಫ್ ಜ್ಯುಡಿಷಿಯಲ್ ಮ್ಯಾಜಿಸ್ಟ್ರೇಟ್ ಕೋರ್ಟ್‌ನಲ್ಲಿರುವ ವಿಚಾರಣೆ ರದ್ದುಗೊಳಿಸಬೇಕು ಎಂದು ಕೋರಿ 26 ವರ್ಷದ ಯುವತಿ (ಪತಿಯ ಪ್ರೇಯಸಿ) ಸಲ್ಲಿಸಿದ್ದ ಅರ್ಜಿ ವಿಚಾರಣೆ ನಡೆಸಿದ ನ್ಯಾಯಮೂರ್ತಿ ಎಂ ನಾಗಪ್ರಸನ್ನ ಅವರಿದ್ದ ಏಕಸದಸ್ಯ ಪೀಠ ಈ ಕುರಿತಂತೆ ಆದೇಶಿಸಿದೆ.

ರಕ್ತಸಂಬಂಧ, ವಿವಾಹ ಅಥವಾ ದತ್ತು ಸ್ವೀಕಾರದಿಂದ ಮಾತ್ರ ಸಂಬಂಧಿಯ ಸ್ಥಾನಮಾನ ಸಿಗುತ್ತದೆ. ವಿವಾಹೇತರ ಸಂಬಂಧ ಹೊಂದಿರುವ ಪ್ರೇಯಸಿ ಅಥವಾ ಮಹಿಳೆಯನ್ನು ಪತಿಯ ಸಂಬಂಧಿ ಎಂದು ಪರಿಗಣಿಸಲಾಗದು ಎಂದು ಸುಪ್ರೀಂ ಕೋರ್ಟ್ ಈ ಹಿಂದೆಯೇ ಸ್ಪಷ್ಟಪಡಿಸಿದೆ” ಎಂಬುದನ್ನು ಪೀಠ ಉಲ್ಲೇಖಿಸಿದೆ.

ಪತ್ನಿಯ ಮೇಲಿನ ಕ್ರೌರ್ಯಕ್ಕೆ ಸಂಬಂಧಿಸಿದ ಪ್ರಕರಣದಲ್ಲಿ ಭಾರತೀಯ ನ್ಯಾಯ ಸಂಹಿತಾ–2023ರ ಸೆಕ್ಷನ್ 85ರ ಅಡಿಯಲ್ಲಿ ಪತಿಯ ಪ್ರೇಯಸಿಯನ್ನು ಆರೋಪಿಯನ್ನಾಗಿ ಮಾಡಲು ಸಾಧ್ಯವಿಲ್ಲ ಎಂದು ಅರ್ಜಿದಾರರ ವಿರುದ್ಧದ ಪ್ರಕರಣವನ್ನು ರದ್ದುಪಡಿಸಿ ಆದೇಶಿಸಿದೆ.

ಅರ್ಜಿದಾರ ಯುವತಿಯ ವಿರುದ್ಧ ಭಾರತೀಯ ನ್ಯಾಯ ಸಂಹಿತಾ–2023ರ ಸೆಕ್ಷನ್ 85 (ಪತಿ ಅಥವಾ ಪತಿಯ ಸಂಬಂಧಿಕರು ನೀಡುವ ಕ್ರೌರ್ಯ ಮತ್ತು ಕಿರುಕುಳ), 74 (ಯಾವುದೇ ಮಹಿಳೆಯ ಘನತೆ ಅಥವಾ ಶೀಲಕ್ಕೆ ಭಂಗ ತರುವ ಉದ್ದೇಶದಿಂದ ಆಕೆಯ ಮೇಲೆ ಹಲ್ಲೆ), 352 (ಶಾಂತಿ ಭಂಗಕ್ಕೆ ಪ್ರಚೋದಿಸುವ ಉದ್ದೇಶದಿಂದ ಮಾಡಲಾಗುವ ಉದ್ದೇಶಪೂರ್ವಕ ಅವಮಾನ), 351(2) (ಕ್ರಿಮಿನಲ್ ಬೆದರಿಕೆ) ಹಾಗೂ 3(5) (ಸಮಾನ ಉದ್ದೇಶ) ಮತ್ತು ವರದಕ್ಷಿಣೆ ನಿಷೇಧ ಕಾಯ್ದೆ–1961ರ ಕಲಂ 3 ಮತ್ತು 4ರ (ವರದಕ್ಷಿಣೆ ನೀಡುವುದು, ತೆಗೆದುಕೊಳ್ಳುವುದು ಅಥವಾ ಅದಕ್ಕಾಗಿ ಬೇಡಿಕೆ ಇಡುವುದು ಕಾನೂನುಬಾಹಿರ) ಅಡಿಯಲ್ಲಿ ಪ್ರಕರಣ ದಾಖಲಿಸಲಾಗಿತ್ತು.

ರಕ್ತಸಂಬಂಧ, ವಿವಾಹ ಅಥವಾ ದತ್ತು ಸ್ವೀಕಾರದ ಮೂಲಕ ಮಾತ್ರ ಕಾನೂನುಬದ್ಧವಾಗಿ ‘ಸಂಬಂಧಿ’ ಸ್ಥಾನಮಾನ ದೊರೆಯುತ್ತದೆ ಎಂದು ಪೀಠ ಸ್ಪಷ್ಟಪಡಿಸಿದೆ.

www.VIKRAMAVAHINI.com
ಕನ್ನಡ ದಿನಪತ್ರಿಕೆ
PRGI NO: KARKAN/2018/78481

ವಿಕ್ರಮ ವಾಹಿನಿ
ಸತ್ಯದ ಹಾದಿ । ಜನಪರ ದನಿ । ರಾಷ್ಟ್ರೀಯ ದೃಷ್ಟಿ

# ‘ಎಸ್‌ಐಆರ್ ಮೂಲಕ 13 ಕೋಟಿ ಮತದಾರರ ಹೆಸರು ಅಳಿಸಲಾಗಿದೆ’


## ■ ವಿಶೇಷ ಸಂಸತ್ ಅಧಿವೇಶನ ಕರೆಯಲು ಆಗ್ರಹ; ಚುನಾವಣಾ ಆಯೋಗದ ಕಾರ್ಯವೈಖರಿ ಕುರಿತು ತನಿಖೆಗೆ ಒತ್ತಾಯ ■

● ವಿಕ್ರಮ ವಾಹಿನಿ । ಬೆಂಗಳೂರು

ವಿಶೇಷ ತೀವ್ರ ಮತದಾರರ ಪಟ್ಟಿ ಪರಿಷ್ಕರಣೆ (ಎಸ್‌ಐಆರ್) ಹೆಸರಿನಲ್ಲಿ ದೇಶದ 19 ರಾಜ್ಯಗಳಲ್ಲಿ ಸುಮಾರು 13 ಕೋಟಿ ಮತದಾರರ ಹೆಸರುಗಳನ್ನು ತೆಗೆದುಹಾಕಲಾಗಿದೆ ಎಂದು ಎಐಸಿಸಿ ಪ್ರಧಾನ ಕಾರ್ಯದರ್ಶಿ ರಣದೀಪ್ ಸಿಂಗ್ ಸುರ್ಜೇವಾಲ ಆರೋಪಿಸಿದರು.

ಚುನಾವಣಾ ಆಯೋಗದ ಕಾರ್ಯವೈಖರಿಯನ್ನೇ ಬಿಜೆಪಿ ಹೈಜಾಕ್ ಮಾಡಿದೆ ಎಂದು ಆರೋಪಿಸಿದ ಅವರು, ಮತದಾರರ ಪಟ್ಟಿಯಿಂದ ಹೆಸರುಗಳನ್ನು ತೆಗೆದುಹಾಕುವ ಮೂಲಕ ಕೋಟ್ಯಂತರ ನಾಗರಿಕರ ಮತದಾನದ ಹಕ್ಕಿಗೆ ಧಕ್ಕೆ ತರಲಾಗುತ್ತಿದೆ ಎಂದು ಹೇಳಿದರು. ಎಸ್‌ಐಆರ್ ಪ್ರಕ್ರಿಯೆಯನ್ನು ತಕ್ಷಣ ಸ್ಥಗಿತಗೊಳಿಸಿ, ಮತದಾರರ ಪಟ್ಟಿಯಲ್ಲಿನ ಬದಲಾವಣೆಗಳನ್ನು ಸಮಗ್ರವಾಗಿ ಮರುಪರಿಶೀಲಿಸಬೇಕು ಎಂದು ಆಗ್ರಹಿಸಿದರು. ಈ ಆರೋಪಗಳನ್ನು ಕಾಂಗ್ರೆಸ್ ಮುಂದಿಟ್ಟಿದ್ದು, ಚುನಾವಣಾ ಆಯೋಗ ತನ್ನ ಚುನಾವಣಾ ಪಟ್ಟಿ ಪರಿಷ್ಕರಣೆ ಪ್ರಕ್ರಿಯೆ ಕಾನೂನುಬದ್ಧ ವ್ಯವಸ್ಥೆಯಡಿ ನಡೆಯುತ್ತಿದೆ ಎಂದು ಹೇಳಿದೆ.

ಕರ್ನಾಟಕದಲ್ಲಿ 1.08 ಕೋಟಿ ಮತದಾರರ ಹೆಸರುಗಳನ್ನು ತೆಗೆದುಹಾಕಲಾಗಿದೆ ಹಾಗೂ ಮತ್ತಷ್ಟು 43 ಲಕ್ಷ ಮತದಾರರಿಗೆ ನೋಟಿಸ್ ನೀಡಲಾಗಿದೆ ಎಂದು ಸುರ್ಜೇವಾಲ ಹೇಳಿದರು. ಈ ಅಂಕಿ-ಅಂಶಗಳನ್ನು ಕಾಂಗ್ರೆಸ್‌ನ ಆರೋಪಗಳ ಭಾಗವಾಗಿ ಅವರು ಪ್ರಸ್ತಾಪಿಸಿದ್ದಾರೆ.



**ಆಯೋಗದ ಕಾರ್ಯವೈಖರಿ ಬಗ್ಗೆ ಪ್ರಶ್ನೆ**

ಮುಖ್ಯ ಚುನಾವಣಾ ಆಯುಕ್ತ ಜ್ಞಾನೇಶ್ ಕುಮಾರ್ ಅವರ ನೇತೃತ್ವದಲ್ಲಿ ಚುನಾವಣಾ ಆಯೋಗದ ನಿರ್ಧಾರಗಳನ್ನು ಏಕಪಕ್ಷೀಯವಾಗಿ ಕೈಗೊಳ್ಳಲಾಗುತ್ತಿದೆ ಎಂದು ಸುರ್ಜೇವಾಲ ಆರೋಪಿಸಿದರು. ಇತರ ಚುನಾವಣಾ ಆಯುಕ್ತರು ಆಕ್ಷೇಪ ವ್ಯಕ್ತಪಡಿಸಿದ್ದರೂ ಅವುಗಳನ್ನು ಪರಿಗಣಿಸಲಾಗುತ್ತಿಲ್ಲ ಎಂದು ದೂರಿದರು.

ಮತದಾರರ ಪಟ್ಟಿಯ ನಿರ್ವಹಣೆಯಲ್ಲಿ ಚುನಾವಣಾ ನೋಂದಣಿ ಅಧಿಕಾರಿ (ERO), ಜಿಲ್ಲಾ ಚುನಾವಣಾಧಿಕಾರಿ (DEO) ಹಾಗೂ ಮುಖ್ಯ ಚುನಾವಣಾಧಿಕಾರಿ (CEO)ಗಳ ಶಾಸನಬದ್ಧ ಅಧಿಕಾರವನ್ನು ಸೀಮಿತಗೊಳಿಸಲಾಗಿದೆ ಎಂದು ಅವರು ಆರೋಪಿಸಿದರು. ಮತದಾರರ ಪಟ್ಟಿಯ ನಿರ್ವಹಣೆ ಕೇಂದ್ರೀಕೃತವಾಗಿದ್ದು, ಸ್ಥಳೀಯ ಚುನಾವಣಾ ಅಧಿಕಾರಿಗಳಿಗೆ ಅಗತ್ಯ ಪ್ರವೇಶವಿಲ್ಲ ಎಂದು ದೂರಿದರು.

**ಯುವ ಮತದಾರರಿಗೆ ತಡೆ ಆರೋಪ**

ಹೊಸ ಮತದಾರರ ನೋಂದಣಿಗೆ ಬಳಸುವ ಫಾರ್ಮ್-6ರಲ್ಲಿ ಮಾಡಿರುವ ಬದಲಾವಣೆಗಳ ಬಗ್ಗೆಯೂ ಸುರ್ಜೇವಾಲ ಆಕ್ಷೇಪ ವ್ಯಕ್ತಪಡಿಸಿದರು. 2000ರ ಮತದಾರರ ಪಟ್ಟಿಯಲ್ಲಿ ಪೋಷಕರು ಅಥವಾ ಅಜ್ಜ-ಅಜ್ಜಿಯರ ಹೆಸರು ಇರಬೇಕೆಂಬಂತಹ ಹೆಚ್ಚುವರಿ ನಿಯಮಗಳಿಂದ ಮೊದಲ ಬಾರಿಗೆ ಮತದಾರರಾಗುವ ಯುವಕರಿಗೆ ತೊಂದರೆಯಾಗುತ್ತಿದೆ ಎಂದು ಆರೋಪಿಸಿದರು. ಈ ಕ್ರಮದಿಂದ ಯುವ ಮತದಾರರ ನೋಂದಣಿಗೆ ಅನಗತ್ಯ ಅಡ್ಡಿ ಉಂಟಾಗುತ್ತಿದೆ ಎಂದು ಹೇಳಿದರು.

ಪಶ್ಚಿಮ ಬಂಗಾಳದ ಮೇಲ್ಮನವಿಗಳ ಬಗ್ಗೆಯೂ ಪ್ರಶ್ನೆ

ಪಶ್ಚಿಮ ಬಂಗಾಳದಲ್ಲಿ ಮತದಾರರ ಪಟ್ಟಿಗೆ ಸಂಬಂಧಿಸಿದಂತೆ ಸಲ್ಲಿಕೆಯಾಗಿರುವ ಸುಮಾರು 38 ಲಕ್ಷ ಮೇಲ್ಮನವಿಗಳ ಪೈಕಿ 16.10 ಲಕ್ಷ ಮೇಲ್ಮನವಿಗಳು ಮತದಾರರ ಹೆಸರನ್ನು ತೆಗೆದುಹಾಕುವ ಸಂಬಂಧಿತವಾಗಿವೆ ಎಂದು ಚುನಾವಣಾ ಆಯೋಗವು ಸುಪ್ರೀಂ ಕೋರ್ಟ್‌ಗೆ ತಿಳಿಸಿರುವುದಾಗಿ ವರದಿಯಾಗಿದೆ. ಈ ಪ್ರಕ್ರಿಯೆಯ ಕುರಿತು ಸುರ್ಜೇವಾಲ ಪ್ರಶ್ನೆಗಳನ್ನು ಎತ್ತಿದ್ದಾರೆ.

ಮತದಾನದ ಹಕ್ಕು ಪ್ರಜಾಪ್ರಭುತ್ವದ ಮೂಲಭೂತ ಹಕ್ಕಾಗಿದ್ದು, ಮತದಾರರ ಪಟ್ಟಿಯಿಂದ ಅರ್ಹ ನಾಗರಿಕರ ಹೆಸರುಗಳನ್ನು ತೆಗೆದುಹಾಕಿದರೆ ಅವರ ಪ್ರಜಾಸತ್ತಾತ್ಮಕ ಹಕ್ಕಿಗೆ ಧಕ್ಕೆ ಉಂಟಾಗುತ್ತದೆ ಎಂದು ಸುರ್ಜೇವಾಲ ಹೇಳಿದರು. ಎಸ್‌ಐಆರ್ ಪ್ರಕ್ರಿಯೆಯ ಸಂಪೂರ್ಣ ಪಾರದರ್ಶಕತೆ ಮತ್ತು ಸ್ವತಂತ್ರ ಪರಿಶೀಲನೆ ಅಗತ್ಯ ಎಂದು ಅವರು ಒತ್ತಾಯಿಸಿದರು.

### ಸುರ್ಜೇವಾಲ ಪ್ರಮುಖ ಆಗ್ರಹಗಳು

- ದೇಶಾದ್ಯಂತ ಎಸ್‌ಐಆರ್ ಪ್ರಕ್ರಿಯೆಯನ್ನು ತಕ್ಷಣ ಸ್ಥಗಿತಗೊಳಿಸಬೇಕು.
- ಎಸ್‌ಐಆರ್‌ನಲ್ಲಿ ತೆಗೆದುಹಾಕಲಾದ ಮತದಾರರ ಹೆಸರುಗಳನ್ನು ಮರುಪರಿಶೀಲಿಸಬೇಕು.
- ERO, DEO ಮತ್ತು ಅಇಔಗಳ ಶಾಸನಬದ್ಧ ಅಧಿಕಾರವನ್ನು ಮರುಸ್ಥಾಪಿಸಬೇಕು.
- ಮತದಾರರ ಪಟ್ಟಿ ನಿರ್ವಹಣಾ ವ್ಯವಸ್ಥೆಯ ಸ್ವತಂತ್ರ ಐಟಿ ಮತ್ತು ಸೈಬರ್ ಫೋರೆನ್ಸಿಕ್ ಆಡಿಟ್ ನಡೆಸಬೇಕು.
- ಮತದಾರರ ಹೆಸರುಗಳನ್ನು ತೆಗೆದುಹಾಕಿರುವ ಪ್ರಕ್ರಿಯೆಯ ಬಗ್ಗೆ ಸ್ವತಂತ್ರ ತನಿಖೆ ನಡೆಸಬೇಕು.
- ಮುಖ್ಯ ಚುನಾವಣಾ ಆಯುಕ್ತ ಜ್ಞಾನೇಶ್ ಕುಮಾರ್ ವಿರುದ್ಧ ಕ್ರಮ ಕೈಗೊಳ್ಳಬೇಕು.
- ಎಸ್‌ಐಆರ್ ಮತ್ತು ಚುನಾವಣಾ ಆಯೋಗದ ಕಾರ್ಯವೈಖರಿ ಕುರಿತು ಚರ್ಚಿಸಲು ಸಂಸತ್ತಿನ ವಿಶೇಷ ಅಧಿವೇಶನ ಕರೆಯಬೇಕು.
- ಬಿಹಾರ ಮತ್ತು ಪಶ್ಚಿಮ ಬಂಗಾಳದಲ್ಲಿ ಮತದಾರರ ಪಟ್ಟಿ ಪರಿಷ್ಕರಣೆಯ ಪರಿಣಾಮಗಳ ಕುರಿತು ಮರುಪರಿಶೀಲನೆ ನಡೆಸಬೇಕು.

# ರೂ 30 ಸಾವಿರ ಲಂಚ ಸ್ವೀಕರಿಸುತ್ತಿದ್ದ ಕಸಬಾ ಆರ್‌ಐ ಲೋಕಾಯುಕ್ತ ಬಲೆಗೆ

● ವಿಕ್ರಮ ವಾಹಿನಿ । ಮಧುಗಿರಿ

ಜಮೀನಿನ ಪೌತಿ ಖಾತೆ ಮಾಡಿಕೊಡಲು ರೂ 1 ಲಕ್ಷ ಲಂಚಕ್ಕೆ ಬೇಡಿಕೆ ಇಟ್ಟು, ರೂ 30 ಸಾವಿರ ಸ್ವೀಕರಿಸುತ್ತಿದ್ದ ಕಸಬಾ ಕಂದಾಯ ನಿರೀಕ್ಷಕ (ಆರ್‌ಐ) ನಾಗೇಶ್ ಅವರನ್ನು ತುಮಕೂರು ಲೋಕಾಯುಕ್ತ ಪೊಲೀಸರು ಗುರುವಾರ ವಶಕ್ಕೆ ಪಡೆದಿದ್ದಾರೆ.

ಮುದ್ದೇನಹಳ್ಳಿ ಗ್ರಾಮದ ರೇಣುಕೇಶ್ ಅವರು ತಮ್ಮ ತಾಯಿ ರತ್ನಮ್ಮ ಹಾಗೂ ದೊಡ್ಡಮ್ಮ ಗಂಗಮ್ಮ ಅವರ ಹೆಸರಿಗೆ ಪೌತಿ ಖಾತೆ ಮಾಡಿಸಲು ಅರ್ಜಿ ಸಲ್ಲಿಸಿದ್ದರು. ಆದರೆ ಕಳೆದ ಆರು ತಿಂಗಳಿಂದ ಕೆಲಸ ವಿಳಂಬವಾಗಿತ್ತು. ಈ ಹಿನ್ನೆಲೆಯಲ್ಲಿ ನಾಗೇಶ್ ಅವರು ರೂ 1 ಲಕ್ಷ ಲಂಚಕ್ಕೆ ಬೇಡಿಕೆ ಇಟ್ಟಿದ್ದರು ಎನ್ನಲಾಗಿದೆ. ಈ ಪೈಕಿ ಈಗಾಗಲೇ ರೂ 45 ಸಾವಿರವನ್ನು ನಾಗೇಶ್ ಅವರ ಪತ್ನಿಯ ಬ್ಯಾಂಕ್ ಖಾತೆಗೆ ಜಮಾ ಮಾಡಲಾಗಿತ್ತು. ಉಳಿದ ಹಣದಲ್ಲಿ ರೂ 30 ಸಾವಿರವನ್ನು ತಾಲೂಕು ಆಡಳಿತ ಸೌಧದ ಕೆ-ಸ್ವಾನ್ ಕಚೇರಿಯಲ್ಲಿ ಗುರುವಾರ ನೀಡುತ್ತಿದ್ದ ವೇಳೆ ಲೋಕಾಯುಕ್ತ ಅಧಿಕಾರಿಗಳು ದಾಳಿ ನಡೆಸಿ ನಾಗೇಶ್ ಅವರನ್ನು ವಶಕ್ಕೆ ಪಡೆದಿದ್ದಾರೆ. ತುಮಕೂರು ಲೋಕಾಯುಕ್ತ ಎಸ್ಪಿ ನೇತೃತ್ವದ ತಂಡ ಕಾರ್ಯಾಚರಣೆ ನಡೆಸಿದ್ದು, ಪ್ರಕರಣಕ್ಕೆ ಸಂಬಂಧಿಸಿದಂತೆ ತನಿಖೆ ಮುಂದುವರಿದಿದೆ.

# ವಿಬಿ-ಜಿರಾಮ್‌ಜಿ ಯೋಜನೆಯಡಿ 1.60 ಕೋಟಿ ಮಾನವ ದಿನಗಳನ್ನು ಸೃಷ್ಟಿ: ಈಶ್ವರಖಂಡ್ರೆ

● ವಿಕ್ರಮ ವಾಹಿನಿ । ಬೆಂಗಳೂರು

ರಾಜ್ಯದಲ್ಲಿ ತೀವ್ರ ಬರ ಪರಿಸ್ಥಿತಿ ಹಿನ್ನೆಲೆಯಲ್ಲಿ ವಿಬಿ-ಜಿರಾಮ್‌ಜಿ ಯೋಜನೆಯಡಿ ಈ ವರ್ಷ 1.60 ಕೋಟಿ ಮಾನವ ದಿನಗಳನ್ನು ಸೃಷ್ಟಿಸಲಾಗುತ್ತಿದೆ ಎಂದು ಗ್ರಾಮೀಣಾಭಿವೃದ್ಧಿ ಸಚಿವ ಈಶ್ವರ ಖಂಡ್ರೆ ವಿಧಾನಸಭೆಗೆ ತಿಳಿಸಿದರು.

ಬರ ಕುರಿತ ವಿಶೇಷ ಚರ್ಚೆಯಲ್ಲಿ ಬಿಜೆಪಿ ಶಾಸಕ ವಿ.ಸುನೀಲ್‌ಕುಮಾರ್ ಯೋಜನೆಯನ್ನು ದೊಡ್ಡ ಪ್ರಮಾಣದಲ್ಲಿ ಬಳಸಿಕೊಳ್ಳಲು ಅಗತ್ಯ ಸಿದ್ಧತೆ ಮಾಡಿಕೊಳ್ಳಲಾಗಿಲ್ಲ ಎಂದು ಆಕ್ಷೇಪಿಸಿದರು. ಇದಕ್ಕೆ ಪ್ರತಿಕ್ರಿಯಿಸಿದ ಸಚಿವರು, ಕೃಷಿ ಹೊಂಡ, ಚೆಕ್‌ಡ್ಯಾಂ, ಕೆರೆಗಳ ಹೂಳೆತ್ತುವುದು, ಪುನಶ್ಚೇತನ ಹಾಗೂ ಅಂತರ್ಜಲ ಹೆಚ್ಚಳ ಸೇರಿದಂತೆ 318 ಕಾಮಗಾರಿಗಳನ್ನು ಕೈಗೆತ್ತಿಕೊಳ್ಳಲಾಗಿದೆ ಎಂದರು.



ಯೋಜನೆಗೆ 2,900 ಕೋಟಿ ಒದಗಿಸಲಾಗಿದ್ದು, 1,000 ಕೋಟಿಯನ್ನು ಜಿಲ್ಲೆಗಳಿಗೆ ಮುಂಗಡವಾಗಿ ಬಿಡುಗಡೆ ಮಾಡಲಾಗಿದೆ. ಕೇಂದ್ರ ಮತ್ತು ರಾಜ್ಯ ಸರ್ಕಾರಗಳ ತಲಾ 1,700 ಕೋಟಿ ಬಳಕೆಯಾಗುತ್ತಿದೆ. ಹಣ ಬಿಡುಗಡೆ ಕುರಿತು ಇರುವ ದೂರುಗಳನ್ನು ಸರಿಪಡಿಸಿದ ಬಳಿಕ ಬಾಕಿ ಅನುದಾನ ಮಂಜೂರು ಮಾಡಲಾಗುವುದು ಎಂದು ಸಚಿವರು ತಿಳಿಸಿದರು. ಗುಜರಾತ್ ಮತ್ತು ರಾಜಸ್ಥಾನದಲ್ಲಿ ಯೋಜನೆ ಅನುಷ್ಠಾನಕ್ಕೆ ಹಿಂದೇಟು ಹಾಕುತ್ತಿರುವುದೇಕೆ ಎಂದು ಶಾಸಕ ಬಿ.ಆರ್. ಪಾಟೀಲ್ ಪ್ರಶ್ನಿಸಿದಾಗ, ಆ ರಾಜ್ಯಗಳು ಯೋಜನೆಯನ್ನು ಒಪ್ಪಿಕೊಂಡು ಅನುಷ್ಠಾನಗೊಳಿಸುತ್ತಿಲ್ಲ ಎಂದು ಈಶ್ವರ ಖಂಡ್ರೆ ಉತ್ತರಿಸಿದರು.

# ಪೊಲೀಸರು ‘ವಸೂಲಾತಿ ಏಜೆಂಟ್’ಗಳಲ್ಲ: ಹೈಕೋರ್ಟ್

● ವಿಕ್ರಮ ವಾಹಿನಿ । ಬೆಂಗಳೂರು

ಬಾಡಿಗೆ ಬಾಕಿ ಅಥವಾ ಒಪ್ಪಂದಕ್ಕೆ ಸಂಬಂಧಿಸಿದ ಸಿವಿಲ್ ವಿವಾದಗಳಲ್ಲಿ ಪೊಲೀಸರು ವಸೂಲಾತಿ ಏಜೆಂಟ್‌ಗಳಂತೆ ಕಾರ್ಯನಿರ್ವಹಿಸಲು ಸಾಧ್ಯವಿಲ್ಲ ಎಂದು ಹೈಕೋರ್ಟ್ ಸ್ಪಷ್ಟಪಡಿಸಿದೆ. ಬಾಡಿಗೆ ಹಣ ವಸೂಲಿ ಮಾಡಲು ಪೊಲೀಸ್ ಠಾಣೆಯನ್ನು ಬಳಸಿಕೊಳ್ಳುವುದು ಕಾನೂನುಬಾಹಿರವಾಗಿದ್ದು, ಸಿವಿಲ್ ವಿವಾದಕ್ಕೆ ಕ್ರಿಮಿನಲ್ ಬಣ್ಣ ನೀಡುವುದು ಕಾನೂನಿನ ದುರುಪಯೋಗವಾಗುತ್ತದೆ ಎಂದು ನ್ಯಾಯಾಲಯ ಹೇಳಿದೆ.

ವರ್ತೂರು ಪೊಲೀಸ್ ಠಾಣೆಯಲ್ಲಿ ದಾಖಲಾಗಿದ್ದ ಕ್ರಿಮಿನಲ್ ಪ್ರಕರಣ ರದ್ದು ಕೋರಿ ಕ್ಲೌಡ್‌ನೈನ್ ಆಸ್ಪತ್ರೆಯನ್ನು ನಿರ್ವಹಿಸುವ ‘ಕಿಡ್ಸ್ ಕ್ಲಿನಿಕ್ ಇಂಡಿಯಾ ಲಿಮಿಟೆಡ್’ನ ಪ್ರಾದೇಶಿಕ ನಿರ್ದೇಶಕ ಕುಲದೀಪ್ ಬೆಹೆರಾ ಸೇರಿದಂತೆ ಇತರರು ಸಲ್ಲಿಸಿದ್ದ ಅರ್ಜಿಯನ್ನು ವಿಚಾರಣೆ ನಡೆಸಿದ ನ್ಯಾಯಮೂರ್ತಿ ಎಂ. ನಾಗಪ್ರಸನ್ನ ಅವರ ಪೀಠ ಈ ಅಭಿಪ್ರಾಯ ವ್ಯಕ್ತಪಡಿಸಿ ಪ್ರಕರಣವನ್ನು ರದ್ದುಪಡಿಸಿದೆ.

**11.70 ಲಕ್ಷ ಬಾಡಿಗೆ ಬಾಕಿ:** ವರ್ತೂರು ಹೋಬಳಿಯ ಜಮೀನು ಮಾಲೀಕ ಸಂಜೀವ್ ಎಸ್. ಅವರು 2023ರಲ್ಲಿ ತಮ್ಮ ಕಟ್ಟಡವನ್ನು ಆಸ್ಪತ್ರೆ ನಡೆಸಲು ಕಿಡ್ಸ್ ಕ್ಲಿನಿಕ್ ಸಂಸ್ಥೆಗೆ ಬಾಡಿಗೆಗೆ ನೀಡಿದ್ದರು.

ವಿದ್ಯುತ್ ಮೀಟರ್‌ನ ಆರ್‌ಆರ್ ಸಂಖ್ಯೆಯನ್ನು ಆಸ್ಪತ್ರೆಯ ಹೆಸರಿಗೆ ಬದಲಾಯಿಸುವ ವಿಚಾರದಲ್ಲಿ ಉಭಯ ಪಕ್ಷಗಳ ನಡುವೆ ಭಿನ್ನಾಭಿಪ್ರಾಯ ಉಂಟಾಗಿತ್ತು. ಈ ಹಿನ್ನೆಲೆಯಲ್ಲಿ ಆಸ್ಪತ್ರೆ ಆಡಳಿತ ಮಂಡಳಿ ಮೂರು ತಿಂಗಳ 11,70,858 ಬಾಡಿಗೆ ಪಾವತಿಸಿರಲಿಲ್ಲ.

ಬಾಡಿಗೆ ಪಾವತಿಸದ ಹಿನ್ನೆಲೆಯಲ್ಲಿ ಜಮೀನು ಮಾಲೀಕರು ವಂಚನೆ ಹಾಗೂ ವಿಶ್ವಾಸದ್ರೋಹದ ಆರೋಪದಡಿ ಎಫ್‌ಐಆರ್ ದಾಖಲಿಸಿದ್ದರು. ಇದನ್ನು ಪ್ರಶ್ನಿಸಿ ಆಸ್ಪತ್ರೆ ಆಡಳಿತ ಹೈಕೋರ್ಟ್ ಮೊರೆ ಹೋಗಿತ್ತು.

**‘ಒಪ್ಪಂದದಲ್ಲೇ ಪರಿಹಾರವಿದೆ’:** ಅರ್ಜಿದಾರ ಸಂಸ್ಥೆ ಈ ಹಿಂದೆ ಮೂರು ವರ್ಷಗಳ ಕಾಲ ಸಕಾಲದಲ್ಲಿ ಬಾಡಿಗೆ ಪಾವತಿಸಿರುವುದರಿಂದ, ಒಪ್ಪಂದ ಮಾಡಿಕೊಂಡ ಸಂದರ್ಭದಲ್ಲೇ ವಂಚಿಸುವ ಉದ್ದೇಶವಿತ್ತು ಎಂದು ಹೇಳಲು ಸಾಧ್ಯವಿಲ್ಲ ಎಂದು ಪೀಠ ಅಭಿಪ್ರಾಯಪಟ್ಟಿತು. ಬಾಡಿಗೆ ಒಪ್ಪಂದದಲ್ಲೇ ವಿವಾದಗಳನ್ನು ಮಧ್ಯಸ್ಥಿಕೆ ಮೂಲಕ ಬಗೆಹರಿಸಿಕೊಳ್ಳುವ ಅವಕಾಶವಿದ್ದರೂ ಪೊಲೀಸ್ ಠಾಣೆಯ ಮೂಲಕ ಹಣ ವಸೂಲಿ ಮಾಡಲು ಮುಂದಾಗುವುದು ಸರಿಯಲ್ಲ ಎಂದು ತಿಳಿಸಿತು.

ಸಿವಿಲ್ ಸ್ವರೂಪದ ವಿವಾದಗಳಿಗೆ ದುರ್ಬಲ ಕ್ರಿಮಿನಲ್ ಪ್ರಕರಣಗಳನ್ನು ದಾಖಲಿಸುವುದರಿಂದ ನ್ಯಾಯಾಂಗದ ಅಮೂಲ್ಯ ಸಮಯ ವ್ಯರ್ಥವಾಗುತ್ತದೆ ಎಂದು ಪೀಠ ಬೇಸರ ವ್ಯಕ್ತಪಡಿಸಿತು.

# ಆರ್ಥಿಕ ಇಲಾಖೆ ಪತ್ರವೇ ಸರ್ಕಾರದ ದಿವಾಳಿತನದ ಕನ್ನಡಿ: ವಿಜಯೇಂದ್ರ

● ವಿಕ್ರಮ ವಾಹಿನಿ । ಬೆಂಗಳೂರು

ರಾಜ್ಯದ ಆರ್ಥಿಕ ಪರಿಸ್ಥಿತಿ ಗಂಭೀರವಾಗಿರುವ ಬಗ್ಗೆ ಆರ್ಥಿಕ ಇಲಾಖೆಯೇ ಪತ್ರದ ಮೂಲಕ ಎಚ್ಚರಿಕೆ ನೀಡಿದೆ. ಇದು ಸರ್ಕಾರದ ಹಣಕಾಸಿನ ವಾಸ್ತವ ಸ್ಥಿತಿಯನ್ನು ಪ್ರತಿಬಿಂಬಿಸುವ ದಾಖಲೆ. ಆದರೆ ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಅವರು ರಾಜ್ಯದಲ್ಲಿ ಯಾವುದೇ ಆರ್ಥಿಕ ಸಮಸ್ಯೆ ಇಲ್ಲವೆಂಬಂತೆ ಮಾತನಾಡುತ್ತಿದ್ದು, ಜನರನ್ನು ದಾರಿ ತಪ್ಪಿಸುವುದನ್ನು ನಿಲ್ಲಿಸಬೇಕು ಎಂದು ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ. ವಿಜಯೇಂದ್ರ ಆಗ್ರಹಿಸಿದರು.

ವಿಧಾನಸೌಧದಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ರಾಜ್ಯದಲ್ಲಿ ಸರ್ಕಾರಿ ನೌಕರರಿಗೆ ವೇತನ, ಬಡವರು ಹಾಗೂ ವಿಕಲಚೇತನರ ಪಿಂಚಣಿ, ವಿವಿಧ ಇಲಾಖೆಗಳ ಬಾಕಿ ಪಾವತಿ ಸೇರಿದಂತೆ ಸರ್ಕಾರದ ಹಣಕಾಸಿನ ಬದ್ಧತೆಗಳು ಹೆಚ್ಚುತ್ತಿವೆ ಎಂದು ಆರೋಪಿಸಿದರು. ಗ್ಯಾರಂಟಿ ಯೋಜನೆಗಳ ಹಣಕಾಸು ನಿರ್ವಹಣೆಯಿಂದ ಅಭಿವೃದ್ಧಿ ಕಾರ್ಯಗಳು, ರೈತರು ಹಾಗೂ ಇತರ ಅಗತ್ಯ ಕ್ಷೇತ್ರಗಳಿಗೆ ಹಣದ ಕೊರತೆ ಎದುರಾಗಿದೆ ಎಂದು ದೂರಿದರು.

**ರೈತರ ನೆರವಿಗೆ ಆದ್ಯತೆ ನೀಡಿ**

ಮುಖ್ಯಮಂತ್ರಿಗಳಿಗೆ ಕನಕಪುರದಲ್ಲಿ ವಿಮಾನ ನಿಲ್ದಾಣ ಹಾಗೂ ಸುರಂಗ ರಸ್ತೆ ಯೋಜನೆಗಳ ಬಗ್ಗೆ ಇರುವ ಉತ್ಸಾಹ ರೈತರ ಸಮಸ್ಯೆ ಪರಿಹರಿಸುವಲ್ಲಿಯೂ ಇರಬೇಕು. ಬೆಳೆ ನಷ್ಟ ಪರಿಹಾರ, ಸಾಲದ ಒತ್ತಡದಲ್ಲಿರುವ ರೈತರಿಗೆ ನೆರವು, ಬರ ಪರಿಹಾರ ಹಾಗೂ ಜಾನುವಾರುಗಳ ರಕ್ಷಣೆಗೆ ಸರ್ಕಾರ ತಕ್ಷಣ ಕ್ರಮ ಕೈಗೊಳ್ಳಬೇಕು ಎಂದು ವಿಜಯೇಂದ್ರ ಒತ್ತಾಯಿಸಿದರು.

ಬರಪೀಡಿತ ತಾಲೂಕುಗಳನ್ನು ಘೋಷಣೆ ಮಾಡಿ ಕೈತೊಳೆದುಕೊಳ್ಳುವುದು ಪರಿಹಾರವಲ್ಲ. ಬೆಳೆ ನಷ್ಟದ ವೈಜ್ಞಾನಿಕ ಸಮೀಕ್ಷೆ ನಡೆಸಿ, ರಾಜ್ಯ ಸರ್ಕಾರ ತನ್ನ ಪಾಲಿನ ಪರಿಹಾರವನ್ನು ತಕ್ಷಣ ಬಿಡುಗಡೆ ಮಾಡಬೇಕು. ಕೇಂದ್ರದ ನೆರವಿಗಾಗಿ ಕಾಯುವುದರ ಜತೆಗೆ ರಾಜ್ಯ ಸರ್ಕಾರ ತನ್ನ ಜವಾಬ್ದಾರಿಯನ್ನೂ ನಿರ್ವಹಿಸಬೇಕು ಎಂದರು.

**ಭದ್ರಾ ಮೇಲ್ದಂಡೆ ಯೋಜನೆ ಪೂರ್ಣಗೊಳಿಸಿ**

ಮುಖ್ಯಮಂತ್ರಿಗಳು ಚಿತ್ರದುರ್ಗಕ್ಕೆ ತೆರಳಿ ಭದ್ರಾ ಮೇಲ್ದಂಡೆ ಯೋಜನೆಗೆ ಭಾಗಿನ ಅರ್ಪಿಸುವ ಕಾರ್ಯಕ್ರಮಕ್ಕಿಂತ, ಯೋಜನೆಗೆ ಸಂಬಂಧಿಸಿದ ಬಾಕಿ ಕಾಮಗಾರಿಗಳನ್ನು ಪೂರ್ಣಗೊಳಿಸಿ ರೈತರಿಗೆ ನೀರು ತಲುಪಿಸುವತ್ತ ಗಮನಹರಿಸಬೇಕು ಎಂದು ಹೇಳಿದರು.

ಯೋಜನೆಗೆ ಮಾಜಿ ಮುಖ್ಯಮಂತ್ರಿ ಬಿ.ಎಸ್. ಯಡಿಯೂರಪ್ಪ ಅವರ ಸರ್ಕಾರ ಸೇರಿದಂತೆ ಹಿಂದಿನ ಸರ್ಕಾರಗಳ ಕೊಡುಗೆಯಿದೆ. ಆದ್ದರಿಂದ ಇದರ ಶ್ರೇಯಸ್ಸನ್ನು ರಾಜಕೀಯವಾಗಿ ಪಡೆಯುವುದಕ್ಕಿಂತ ಯೋಜನೆಯನ್ನು ಪೂರ್ಣಗೊಳಿಸುವುದು ಮುಖ್ಯ ಎಂದು ವಿಜಯೇಂದ್ರ ಹೇಳಿದರು.

**ರೈತರ ಜಮೀನು ಬಲವಂತವಾಗಿ ಪಡೆಯಬಾರದು**

ಶಿಕಾರಿಪುರದ ಶಿರಾಳಕೊಪ್ಪದಲ್ಲಿ ರಿಂಗ್‌ರೋಡ್‌ಗಾಗಿ ಹಾಗೂ ಬಿಡದಿಯಲ್ಲಿ ವಿವಿಧ ಯೋಜನೆಗಳಿಗಾಗಿ ರೈತರ ಜಮೀನು ಪಡೆಯುವ ವಿಚಾರದಲ್ಲಿ ಸರ್ಕಾರ ರೈತರೊಂದಿಗೆ ಸಮಾಲೋಚನೆ ನಡೆಸಬೇಕು. ಅಭಿವೃದ್ಧಿಯ ಹೆಸರಿನಲ್ಲಿ ರೈತರ ಜಮೀನನ್ನು ಬಲವಂತವಾಗಿ ಸ್ವಾಧೀನಪಡಿಸಿಕೊಳ್ಳಬಾರದು ಎಂದು ಆಗ್ರಹಿಸಿದರು.

ಜನಪ್ರತಿನಿಧಿಗಳು ಆಕ್ಷೇಪಾರ್ಹ ಭಾಷೆ ಬಳಸುತ್ತಿರುವ ಬಗ್ಗೆ ಪ್ರತಿಕ್ರಿಯಿಸಿದ ಅವರು, ಅಧಿಕಾರದ ಸ್ಥಾನದಲ್ಲಿರುವವರು ಸಂವಿಧಾನಬದ್ಧ ಹೊಣೆಗಾರಿಕೆಯನ್ನು ಅರಿತು ಮಾತನಾಡಬೇಕು. ಇಂತಹ ಹೇಳಿಕೆಗಳ ಬಗ್ಗೆ ಗೃಹ ಇಲಾಖೆ ಗಂಭೀರವಾಗಿ ಪರಿಗಣಿಸಿ ಕಾನೂನು ಕ್ರಮ ಕೈಗೊಳ್ಳಬೇಕು ಎಂದು ಒತ್ತಾಯಿಸಿದರು.

ಮುಖ್ಯಮಂತ್ರಿಗಳು ತಮ್ಮನ್ನು ‘ಚಾಲಕ್ ಮುಖ್ಯಮಂತ್ರಿ’ ಎಂದು ಬಿಂಬಿಸಿಕೊಳ್ಳುವುದಕ್ಕಿಂತ ಸಂಕಷ್ಟದಲ್ಲಿರುವ ರೈತರಿಗೆ ನೆರವು ನೀಡುವ ಮೂಲಕ ಕಾರ್ಯಕ್ಷಮತೆ ತೋರಿಸಬೇಕು. ರೈತರಿಗೆ ಇಂದು ಭಾಷಣವಲ್ಲ, ಪರಿಹಾರ ಹಾಗೂ ಘೋಷಣೆಯಲ್ಲ, ಅನುಷ್ಠಾನ ಅಗತ್ಯ ಎಂದು ವಿಜಯೇಂದ್ರ ಹೇಳಿದರು.

# ಬಸವರಾಜ ರಾಯರೆಡ್ಡಿರನ್ನು ಗದರಿದ ಬಿ.ಆರ್.ಪಾಟೀಲ್

● ವಿಕ್ರಮ ವಾಹಿನಿ । ಬೆಂಗಳೂರು

ಕರ್ನಾಟಕ ವಿಧಾನಸಭೆಯ ವಿಶೇಷ ಅಧಿವೇಶನದ ಕೊನೆ ದಿನವಾದ ಗುರುವಾರದಂದು ಶಾಸನಸಭೆಯ ಹಿರಿಯ ಸದಸ್ಯರು, ಆಳಂದ ವಿಧಾನಸಭಾ ಕ್ಷೇತ್ರದ ಶಾಸಕರೂ ಆಗಿರುವ ಬಿ.ಆರ್.ಪಾಟೀಲ್ ಅವರು ತಮ್ಮ ಕ್ಷೇತ್ರದಲ್ಲಿನ ಬರ ಪರಿಸ್ಥಿತಿ ವಿವರಣೆ ನೀಡುವ ವೇಳೆ ಯಲಬುರ್ಗಾ ಶಾಸಕರು ಮತ್ತು ಉನ್ನತ ಶಿಕ್ಷಣ ಸಚಿವರಾದ ಬಸವರಾಜ ರಾಯರೆಡ್ಡಿ ಅವರನ್ನು ಗದರಿದ ಪ್ರಸಂಗ ಜರುಗಿತು.



ಎಂದಿನಂತೆ ಮಧ್ಯಾಹ್ನದ ವಿರಾಮದ ನಂತರ ಕಲ್ಯಾಣ ಕರ್ನಾಟಕದಲ್ಲಿ ಉಂಟಾಗಿರುವ ಭೀಕರ ಬರ ಪರಿಸ್ಥಿತಿ ಕುರಿತು ಸದನದಲ್ಲಿ ಸರ್ಕಾರದ ಗಮನ ಸೆಳೆಯುವಾಗ ಅನೇಕ ವಿಚಾರಗಳನ್ನು ಮಂಡಿಸುತ್ತಿದ್ದರು. ಸರ್ಕಾರ ಯಾವುದೇ ಕ್ಷೇತ್ರಕ್ಕೆ ತಾರತಮ್ಯ ಮಾಡುವುದು ಬೇಡ. ಕಲ್ಯಾಣ ಕರ್ನಾಟಕದಲ್ಲಿ ಬರಗಾಲದ ತೀವ್ರತೆ ಹೆಚ್ಚಿರುವುದರಿಂದ ಜನರು ಭಯಾನಕ ಸ್ಥಿತಿ ಅನುಭವಿಸುತ್ತಿದ್ದಾರೆ. ಅಮರ್ಜ, ಬೆಣ್ಣೆತೊರಾ ಮತ್ತು ಭೀಮಾ ನದಿಗಳ ಪರಿಸ್ಥಿತಿ ಹೇಳತೀರದು ಎಂದು ವಿಧಾನಸಭಾಧ್ಯಕ್ಷರಿಗೆ ವಿವರಣೆ ನೀಡುತ್ತಿದ್ದರು.

ಇವರ ಮುಂಭಾಗದ ಸಾಲಿನಲ್ಲಿ ಕುಳಿತಿದ್ದ ಸಚಿವ ಬಸವರಾಜ ರಾಯರೆಡ್ಡಿ ಮತ್ತೊಬ್ಬ ತಮ್ಮ ಸಹಪಾಠಿ ಸಚಿವರೊಂದಿಗೆ ಗುಸು ಗುಸು ಮಾತನಾಡುತ್ತಿದ್ದರು. ಆದರೂ ಸಾವರಿಸಿಕೊಂಡು ಮಾತು ಮುಂದುವರಿಸಿದ ಶಾಸಕ ಬಿ.ಆರ್.ಪಾಟೀಲ್ ಅವರು, ಡೆಕ್ಕನ್ ಪ್ಲೇಟ್ ವ್ಯಾಪ್ತಿಯಲ್ಲಿರುವ ಆಳಂದ ಇನ್ನಿತರೆ ತಾಲೂಕುಗಳು ಬಹಳ ಎಚ್ಚರಿಕೆಯಿಂದ ಇರಬೇಕಾಗಿದೆ. ಕೆ.ಸಿ.ವ್ಯಾಲಿ, ಇನ್ನಿತರೆ ನೀರಾವರಿ ಯೋಜನೆಗಳಿಗೆ ಕೊಟ್ಟ ಮಹತ್ವವನ್ನು ಸರ್ಕಾರ ನಮ್ಮ ಭಾಗಕ್ಕೆ ನೀಡುತ್ತಿಲ್ಲವೆಂದು ಇನ್ನಷ್ಟು ವಿವರಣೆ ನೀಡುತ್ತಿದ್ದರು.

ಈ ವೇಳೆ ಬಸವರಾಜ ರಾಯರೆಡ್ಡಿ ಅವರು ಬಿ.ಆರ್.ಪಾಟೀಲ್ ಅವರ ಮುಂಭಾಗದ ಸೀಟಿನಲ್ಲಿ ಕುಳಿತು ಪಾಟೀಲರ ಮಾತುಗಳನ್ನು ಗಂಭೀರವಾಗಿ ಪರಿಗಣಿಸದೇ ಸಹೋದ್ಯೋಗಿ ಸಚಿವರೊಂದಿಗೆ ಮಾತಿನಲ್ಲಿ ಮಗ್ನರಾಗಿದ್ದರು.

ಇದನ್ನು ಗಮನಿಸಿದ ಪಾಟೀಲರು, ‘ಮಾತಾಡೋದಿದ್ರ... ಬೇರೆ ಕಡೆ ಹೋಗಿ ಮಾತಾಡ್ರೀ...’ ಅಂತ ರಾಯರೆಡ್ಡಿ ಅವರಿಗೆ ನೇರವಾಗಿ ಹೇಳುತ್ತಾ.... ‘ನನ್ನ ಮಾತು ಕೇಳ್ತಿಲ್ಲ ಇವ್ರು....’ ಎಂದು ವಿಧಾನಸಭಾಧ್ಯಕ್ಷರ ಕಡೆ ತಿರುಗಿ ಹೇಳಿದರು.

ಪಾಟೀಲರ ಗದರುವಿಕೆಗೆ ಎಚ್ಚೆತ್ತ ರಾಯರೆಡ್ಡಿ ಅಲ್ಲಿಂದ ಎದ್ದು ನಡೆದು ಮುಂದಿನ ಮತ್ತೊಂದು ಆಸನದಲ್ಲಿ ಕುಳಿತರು. ಮಧ್ಯಾಹ್ನದ ಬಳಿಕ ನಡೆದ ಸದನ ಕಲಾಪದಲ್ಲಿ ಶಾಸಕರಾದ ಡಾ.ಸುಧಾಕರ್, ಅಲ್ಲಮಪ್ರಭು ಪಾಟೀಲ್, ಸುರೇಶ್ ಬಾಬು, ಹೆಚ್.ಕೆ.ಪಾಟೀಲ್, ಅರವಿಂದ್ ಬೆಲ್ಲದ್, ಸಚಿವರಾದ ಕೆ.ಜೆ. ಜಾರ್ಜ್ ಇನ್ನಿತರರು ಬರಗಾಲ ನಿರ್ವಹಣೆ ಕುರಿತು ತೆಗೆದುಕೊಳ್ಳಬೇಕಾದ ಕ್ರಮಗಳ ಬಗ್ಗೆ ಚರ್ಚಿಸಿದರು.

# ಪತ್ರಿಕಾ ಸಂಪಾದಕ ಎನ್.ಎಸ್. ಮಹೇಶ್ ಕುಮಾರ್ ಇನ್ನಿಲ್ಲ

● ವಿಕ್ರಮ ವಾಹಿನಿ । ಬೆಂಗಳೂರು

‘ನಾವು ಕನ್ನಡಿಗರು’ ಎನ್ನುವ ಕನ್ನಡ ಪತ್ರಿಕೆ ಆರಂಭಿಸುವ ಮೂಲಕ ಕಳೆದ ಹಲವಾರು ವರ್ಷಗಳಿಂದ ಕನ್ನಡಪರ ಸುದ್ದಿಗಳಿಗೆ ಮತ್ತು ಲೇಖನಗಳಿಗೆ ಪ್ರಾಶಸ್ತ್ಯ ನೀಡುತ್ತಿದ್ದ ಖ್ಯಾತ ಪತ್ರಕರ್ತರು ಮತ್ತು ಪತ್ರಿಕಾ ಸಂಪಾದಕರಾಗಿದ್ದ ಎನ್.ಎಸ್.ಮಹೇಶ್ ಕುಮಾರ್ ಸಂಜೆ 7 ಗಂಟೆಗೆ ಕೆಂಗೇರಿಯ ತಮ್ಮ ಸ್ವಗೃಹದಲ್ಲಿ ಹೃದಯಾಘಾತದಿಂದ ನಿಧನರಾಗಿದ್ದಾರೆ.



ಕನ್ನಡ ಭಾಷೆ, ಸಂಸ್ಕೃತಿ, ಪರಂಪರೆ ಮತ್ತು ನೆಲ, ಜಲದ ಕುರಿತು ಅಪಾರವಾದ ಗೌರವ ಹೊಂದಿದ್ದ ಅವರು, ಪತ್ರಿಕೋದ್ಯಮದಲ್ಲಿ ತಮ್ಮದೇ ಆದ ಛಾಪು ಮೂಡಿಸಿದ್ದರು. ಯುವ ಪತ್ರಕರ್ತರಿಗೆ ಮಾರ್ಗದರ್ಶಿಯಾಗಿದ್ದ ಅವರಿಗೆ ಕೇವಲ 55 ವರ್ಷ ವಯಸ್ಸು. ಅವರು ಪತ್ರಿಕೋದ್ಯಮದಲ್ಲಿ ಇನ್ನೂ ಸಾಧಿಸುವ ಕನಸು, ಗುರಿ ಹೊಂದಿದ್ದರು. ಭಗವಂತ ಅವರ ಕನಸುಗಳಿಗೆ ಆಸ್ಪದ ನೀಡದೇ ಅವರನ್ನು ತನ್ನೆಡೆಗೆ ಬರಸೆಳೆದದದ್ದು ವಿಷಾದನೀಯ ಎಂದು ಅವರ ಪತ್ರಕರ್ತ ಮಿತ್ರರು ಕಂಬನಿ ಮಿಡಿದಿದ್ದಾರೆ.

ಅನೇಕ ಸವಾಲುಗಳು ಮತ್ತು ಸಮಸ್ಯೆಗಳನ್ನು ಎದುರಿಸುತ್ತಾ ಪತ್ರಿಕೆಯನ್ನು ಮುನ್ನಡೆಸುತ್ತಿದ್ದ ಅವರು ಇಷ್ಟು ಸಣ್ಣ ವಯಸ್ಸಿನಲ್ಲಿ ಇಹಲೋಕ ತ್ಯಜಿಸಿದ್ದು ಪತ್ರಿಕೋದ್ಯಮಕ್ಕೆ ತುಂಬಲಾರದ ನಷ್ಟವಾಗಿದೆ ಎಂದು ಪತ್ರಿಕಾ ಸಂಪಾದಕರ ವಲಯ ಮತ್ತು ಪತ್ರಿಕೋದ್ಯಮದಲ್ಲಿರುವ ಪತ್ರಿಕಾ ಸ್ನೇಹಿತರು ಕಂಬನಿ ಮಿಡಿದಿದ್ದಾರೆ.ಮೃತರ ಅಂತಿಮ ಸಂಸ್ಕಾರ ಶುಕ್ರವಾರ ನೆರವೇರಲಿದೆ ಎಂದು ಕುಟುಂಬ ಮೂಲಗಳು ತಿಳಿಸಿವೆ.

# ಗವಿಸಿದ್ಧೇಶ್ವರ ಶ್ರೀಗಳಿಂದ ದಸರಾ ಉದ್ಘಾಟನೆ ಕಲ್ಯಾಣ ಕರ್ನಾಟಕಕ್ಕೆ ಹೆಮ್ಮೆ

● ವಿಕ್ರಮ ವಾಹಿನಿ । ಮೈಸೂರು

ನಾಡಿನ ಸಾಂಸ್ಕೃತಿಕ ವೈಭವದ ಪ್ರತೀಕವಾಗಿರುವ ಮೈಸೂರು ದಸರಾ ಮಹೋತ್ಸವವನ್ನು ಕೊಪ್ಪಳದ ಗವಿಮಠದ ಅಭಿನವ ಗವಿಸಿದ್ಧೇಶ್ವರ ಸ್ವಾಮೀಜಿ ಉದ್ಘಾಟಿಸಲಿರುವುದು ಇಡೀ ಉತ್ತರ ಕರ್ನಾಟಕ ಹಾಗೂ ಕಲ್ಯಾಣ ಕರ್ನಾಟಕದ ಜನತೆಗೆ ಹೆಮ್ಮೆಯ ಸಂಗತಿ ಎಂದು ಸಂತಸ ವ್ಯಕ್ತಪಡಿಸಲಾಗಿದೆ.

ಮೈಸೂರು ದಸರಾ ಕೇವಲ ರಾಜವೈಭವದ ಉತ್ಸವವಲ್ಲ. ಕರ್ನಾಟಕದ ಕಲೆ, ಸಾಹಿತ್ಯ, ಸಂಸ್ಕೃತಿ, ಪರಂಪರೆ ಹಾಗೂ ಜನಜೀವನವನ್ನು ಪ್ರತಿಬಿಂಬಿಸುವ ನಾಡಹಬ್ಬವಾಗಿದೆ. ಸಮಾಜಸೇವೆ, ಶಿಕ್ಷಣ, ದಾಸೋಹ ಹಾಗೂ ಮಾನವೀಯ ಸೇವೆಗಳ ಮೂಲಕ ಜನಮನ ಗೆದ್ದಿರುವ ಗವಿಸಿದ್ಧೇಶ್ವರ ಶ್ರೀಗಳು ಈ ಮಹೋತ್ಸವಕ್ಕೆ ಚಾಲನೆ ನೀಡುತ್ತಿರುವುದು ವಿಶೇಷ ಮಹತ್ವ ಪಡೆದಿದೆ.

ಕೊಪ್ಪಳದ ಗವಿಮಠದ ಸೇವಾ ಪರಂಪರೆ ರಾಜ್ಯದಾದ್ಯಂತ ಗುರುತಿಸಿಕೊಂಡಿದ್ದು, ಶಿಕ್ಷಣ, ಆರೋಗ್ಯ, ದಾಸೋಹ ಹಾಗೂ ಸಾಮಾಜಿಕ ಸೇವಾ ಕ್ಷೇತ್ರಗಳಲ್ಲಿ ಹಲವು ಕಾರ್ಯಗಳನ್ನು ನಡೆಸುತ್ತಿದೆ.



ವಿಶೇಷವಾಗಿ ಬಡ ಮತ್ತು ಗ್ರಾಮೀಣ ಮಕ್ಕಳಿಗೆ ಶಿಕ್ಷಣದ ಅವಕಾಶ ಕಲ್ಪಿಸುವಲ್ಲಿ ಮಠದ ಕೊಡುಗೆ ಗಮನಾರ್ಹವಾಗಿದೆ.

ಇಂತಹ ಸೇವಾ ಪರಂಪರೆಯನ್ನು ಮುನ್ನಡೆಸುತ್ತಿರುವ ಗವಿಸಿದ್ಧೇಶ್ವರ ಶ್ರೀಗಳಿಗೆ ಮೈಸೂರು ದಸರಾ ಉದ್ಘಾಟನೆಯ ಗೌರವ ದೊರೆತಿರುವುದು ಕೊಪ್ಪಳ ಸೇರಿದಂತೆ ಉತ್ತರ ಕರ್ನಾಟಕ ಹಾಗೂ ಕಲ್ಯಾಣ ಕರ್ನಾಟಕದ ಜನತೆಗೆ ಸಂದ ಗೌರವವಾಗಿದೆ. ಶ್ರೀಗಳ ಅಮೃತಹಸ್ತದಿಂದ ನಾಡಹಬ್ಬಕ್ಕೆ ಚಾಲನೆ ದೊರೆಯುತ್ತಿರುವುದು ದಸರಾ ಮಹೋತ್ಸವದ ಸಾಂಸ್ಕೃತಿಕ ಮೆರುಗನ್ನು ಮತ್ತಷ್ಟು ಹೆಚ್ಚಿಸಲಿದೆ.

ಈ ಹಿನ್ನೆಲೆಯಲ್ಲಿ ಮೈಸೂರು ದಸರಾ ಉದ್ಘಾಟನೆಗೆ ಗವಿಸಿದ್ಧೇಶ್ವರ ಶ್ರೀಗಳ ಆಯ್ಕೆ ಧಾರ್ಮಿಕ ಹಾಗೂ ಸಾಂಸ್ಕೃತಿಕ ಕ್ಷೇತ್ರಗಳ ನಡುವಿನ ಸೇತುವೆಯಂತಾಗಿದ್ದು, ನಾಡಿನ ವಿವಿಧ ಭಾಗಗಳ ಜನರನ್ನು ಒಗ್ಗೂಡಿಸುವ ಸಂದೇಶವನ್ನು ನೀಡಲಿದೆ. ಶ್ರೀಗಳ ಸರಳತೆ, ಸೇವಾ ಮನೋಭಾವ ಮತ್ತು ಸಮಾಜಮುಖಿ ಚಿಂತನೆಗಳು ದಸರಾ ಮಹೋತ್ಸವದ ಆಶಯಗಳಿಗೆ ಮತ್ತಷ್ಟು ಅರ್ಥ ತುಂಬಲಿವೆ.

# ‘ಮತದಾರರ ಹೆಸರು ಡಿಲೀಟ್ ಮಾಡಲು ಬಿಜೆಪಿ ಶಾಸಕ ಅಭಯ್ ಪಾಟೀಲ್ ಪತ್ರ’

● ವಿಕ್ರಮ ವಾಹಿನಿ । ಬೆಂಗಳೂರು

“ಬಿಜೆಪಿ ಶಾಸಕ ಅಭಯ್ ಪಾಟೀಲ್ ಬೆಳಗಾವಿಯಲ್ಲಿ 2,500 ಮತದಾರರ ಹೆಸರು ಡಿಲೀಟ್ ಮಾಡಲು ಪತ್ರ ಬರೆದಿದ್ದಾರೆ. ಈ ಎಲ್ಲರೂ ಅಲ್ಪಸಂಖ್ಯಾತರಾಗಿದ್ದಾರೆ. ಈ ರೀತಿ ಮತದಾರರ ಹೆಸರು ಡಿಲೀಟ್ ಮಾಡಿಸಲು ಮುಂದಾಗಿರುವವರ ವಿರುದ್ಧ ಕಠಿಣ ಕ್ರಮ ಕೈಗೊಳ್ಳಬೇಕು” ಎಂದು ಕೆಪಿಸಿಸಿ ಅಧ್ಯಕ್ಷ ಬಿ ಕೆ ಹರಿಪ್ರಸಾದ್ ಅವರು ಆಗ್ರಹಿಸಿದ್ದಾರೆ.

ವಿಧಾನಸೌಧದಲ್ಲಿ ಹರಿಪ್ರಸಾದ್ ಅವರು ಸಾಕ್ಷಿ ಸಮೇತ ಪ್ರತಿಕ್ರಿಯೆ ನೀಡಿದರು. “ಮತಗಳ್ಳತನವಾಗುತ್ತಿದೆ ಎಂದು ನಾವು ಹೇಳುತ್ತಲೇ ಇದ್ದೇವೆ. ಈ ಪತ್ರಕ್ಕೆ ಚುನಾವಣಾ ಆಯೋಗ ಪತ್ರ ಬರೆದು, ನಾವು ಈ ರೀತಿ ಮತದಾರರ ಹೆಸರು ತೆಗೆಯಲು ಸಾಧ್ಯವಿಲ್ಲ ಎಂದು ಹೇಳಿದೆ. ಒಂದೇ ಮನೆಯಲ್ಲಿ 50 ಮಂದಿಯ ಮತ ತೆಗೆಯಲು ಅರ್ಜಿ ನೀಡಲಾಗಿದ್ದು, ಈ ಅರ್ಜಿಯಲ್ಲಿ ಯಾರಾದರೂ ಬೋಗಸ್ ಅರ್ಜಿ ತುಂಬಿ ಸಲ್ಲಿಕೆ ಮಾಡಿದರೆ ಶಿಕ್ಷಾರ್ಹರು ಎಂದು ತಿಳಿಸಲಾಗಿದೆ” ಎಂದು ತಿಳಿಸಿದರು.

“ಫಾರಂ 7 ಸಲ್ಲಿಕೆ ಮಾಡಿ ಮತಪಟ್ಟಿಯಿಂದ ಹೆಸರು ಡಿಲೀಟ್ ಮಾಡಲು ಅರ್ಜಿ ಹಾಕಿರುವವರನ್ನು ಬಂಧಿಸಿ, ಕಾನೂನು ಕ್ರಮಕ್ಕೆ ಒಳಪಡಿಸಬೇಕು ಎಂದು ನಾನು ಆಗ್ರಹಿಸುತ್ತೇನೆ. ಶಾಸಕ ಅಭಯ್ ಪಾಟೀಲ್ ಅವರ ಪತ್ರ ನಮ್ಮ ಬಳಿ ಇದ್ದು, ಬೇರೆಯವರ ಮತ ತೆಗೆಯುವಂತೆ ಪತ್ರ ನೀಡಲು ಯಾರಿವರು? ಕಾನೂನು ಮೀರಿ ಶಾಸಕರೇ ಬಲ್ಕ್ ಡಿಲೀಷನ್ ಗೆ ಪತ್ರ ನೀಡಿದ್ದಾರೆ. ಕಾನೂನಿಗೆ ವಿರುದ್ಧವಾಗಿ ಡಿಲೀಟ್ ಮಾಡಲು ಅರ್ಜಿ ಹಾಕಿದ್ದಾರೆ. ಅಭಯ್ ಪಾಟೀಲ್ ನೀಡಿರುವ ಪತ್ರ ನಮ್ಮ ಬಳಿ ಇದೆ. ಈ ವಿಚಾರವಾಗಿ ಚುನಾವಣಾ ಆಯೋಗಕ್ಕೆ ದೂರು ನೀಡುತ್ತೇವೆ” ಎಂದು ಹೇಳಿದರು.



ಸುಮಾರು 7 ಸಾವಿರ ಹೆಸರು ಡಿಲೀಟ್ ಮಾಡಲು ಅರ್ಜಿ ಹಾಕಲಾಗಿದ್ದು, ಯಾವುದಕ್ಕೂ ಸಹಿ ಇಲ್ಲವಾಗಿದೆ. ಇದರ ವಿರುದ್ಧ ಚುನಾವಣಾ ಆಯೋಗ ಕ್ರಮ ಕೈಗೊಳ್ಳಬೇಕು. ಫಾರಂ 7 ಅನ್ನು ದುರುಪಯೋಗ ಮಾಡಿಕೊಂಡಿರುವವರನ್ನು ಶಿಕ್ಷೆಗೆ ಒಳಪಡಿಸಬೇಕು.

ಬಿಜೆಪಿ ನಿಜ ಸ್ವರೂಪ ಹೊರಬರುತ್ತಿದೆ. ಅಮಿತ್ ಶಾ ಹಾಗೂ ನರೇಂದ್ರ ಮೋದಿ ಅವರು 13 ಕೋಟಿ ಮತಗಳನ್ನು ಮತದಾರರ ಪಟ್ಟಿಯಿಂದ ತೆಗೆಯಲು ಮುಂದಾಗಿರುವುದಕ್ಕೆ ಇದು ಸಣ್ಣ ಉದಾಹರಣೆ. ಅವರ ಕಾರ್ಯಕರ್ತರು, ಅಂಧಭಕ್ತರು ಈ ಕೆಲಸ ಮಾಡುತ್ತಿದ್ದು, ಎಲ್ಲರೂ ಎಚ್ಚರಿಕೆ ವಹಿಸಬೇಕು. ಎಸ್‌ಐಆರ್ ಪ್ರಕ್ರಿಯೆ ಸರಿಯಾಗಿ ನಡೆಯುತ್ತಿಲ್ಲ. ಬಿಜೆಪಿ ವಿರುದ್ಧ ಇರುವ ನೈಜ್ಯ ಮತದಾರರ ಮತದಾನದ ಹಕ್ಕು ಕಸಿಯುವ ಹುನ್ನಾರವನ್ನು ಬಿಜೆಪಿ ಹಾಗೂ ಆರ್‌ಎಸ್‌ಎಸ್ ಮಾಡುತ್ತಿವೆ” ಎಂದು ವಾಗ್ದಾಳಿ ನಡೆಸಿದರು. ಮತದಾರರ ಪಟ್ಟಿಯ ಪಾರದರ್ಶಕತೆ ಕಾಪಾಡಲು ಚುನಾವಣಾ ಆಯೋಗ ತಕ್ಷಣ ಕ್ರಮ ಕೈಗೊಳ್ಳಬೇಕು ಎಂದು ಹರಿಪ್ರಸಾದ್ ಆಗ್ರಹಿಸಿದರು.

Vikrama Vahini Kannada Daily, #204, Forest Layout, Jnanabharathi, Bangalore-560095
PRGI NO: KARKAN/2018/78481
vikramavahini@gmail.com
93535 91145
Printed by B.N. Murali Prasad, Published by Swarna Latha B.N., and Printed at Swarna Graphics, Forest Layout, Jnanabharathi, Bangalore -560059 and Published at Bangalore, Editor: B.N. Murali Prasad., Volume:9, Issue : 172,